ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 1

6–6–2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 1

## ನೇತ್ರಾವತಿ ನದಿಯಲ್ಲಿ ಬಿಜೆಪಿ ಮುಖಂಡನ ಶವ ಪತ್ತೆ :ಸಾವಿನ ಸುತ್ತ ಅನುಮಾನ



**ಮಂಗಳೂರು:** ನಾಪತ್ತೆಯಾಗಿದ್ದ ಬಿಜೆಪಿ ಮುಖಂಡ ರಮೇಶ್ ರೈ ಅವರು ಗುರುವಾರ ನೇತ್ರಾವತಿ ನದಿಯಲ್ಲಿ ಶವವಾಗಿ ಪತ್ತೆಯಾಗಿದ್ದು, ಸಾವಿನ ಸುತ್ತ ಹಲವು ಅನುಮಾನಗಳು ಹುಟ್ಟಿಕೊಂಡಿವೆ.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ನಗರಸಭೆ ಬಿಜೆಪಿ ಸದಸ್ಯರಾಗಿದ್ದ ರಮೇಶ್ ರೈ ಅವರು ಮನೆಯಿಂದ ನಾಪತ್ತೆಯಾಗಿದ್ದರು. ಬಳಿಕ ಪಾಣೆಮಂಗಳೂರು ಸೇತುವೆಯ ಬಳಿ ರಮೇಶ್ ರೈ ಅವರ ಮೊಬೈಲ್ ಮತ್ತು ಬೈಕ್ ಪತ್ತೆಯಾಗಿತ್ತು.

ಯಾರೋ ನದಿಗೆ ಹಾರಿರಬಹುದು ಎಂಬ ಶಂಕೆಯಿಂದ ಅಗ್ನಿಶಾಮಕ ಸಿಬ್ಬಂದಿ, ಪೊಲೀಸ್ ಹಾಗೂ ಸ್ಥಳೀಯರು ಹುಡುಕಾಟ ನಡೆಸಿದಾಗ ಇಂದು ಮಂಗಳೂರಿನ ಸೇತುವೆ ಬಳಿ ನೀರಿನಲ್ಲಿ ಅವರ ಮೃತದೇಹ ಪತ್ತೆಯಾಗಿದೆ.

ಪುತ್ತೂರು ನಗರಸಭೆಯ ನೆಲ್ಲಿಕಟ್ಟೆ ವಾರ್ಡ್ ಸದಸ್ಯರಾಗಿದ್ದ ರಮೇಶ್ ರೈ ಅವರು ಇತ್ತೀಚಿಗೆ ನಗರಸಭೆಗೆ ನಡೆದ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು.

## ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಸ್ಥಳ ಪರಿಶೀಲನೆ

### ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಗೃಹ ಸಚಿವ ಪರಮೇಶ್ವರ್ ಮಾತುಕತೆ

**ಬೆಂಗಳೂರು:** ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ನಿನ್ನೆ ಕಾಲ್ತುಳಿತ ದುರಂತ ಸಂಭವಿಸಿದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಬೆಂಗಳೂರು ಪೊಲೀಸ್ ಆಯುಕ್ತರು, ಹಿರಿಯ ಪೊಲೀಸ್ ಅಧಿಕಾರಿಗಳು, ಪೊಲೀಸ್ ಉಪ ಆಯುಕ್ತರು (ಡಿಸಿಪಿಗಳು) ಮತ್ತು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘದ (ಕೆಎಸ್‌ಸಿಎ) ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಇದಕ್ಕೂ ಮೊದಲು, ಅವರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತದ ಸ್ಥಳವನ್ನು ಪರಿಶೀಲಿಸಿದರು. ಕಾಲ್ತುಳಿತದಲ್ಲಿ 11 ಜನರು ಮೃತಪಟ್ಟು 56 ಮಂದಿ ಗಾಯಗೊಂಡಿದ್ದಾರೆ. ಕ್ರೀಡಾಂಗಣದಲ್ಲಿ ವಿಜಯೋತ್ಸವವನ್ನು ಆಯೋಜಿಸಲು ರಾಜ್ಯ ಸರ್ಕಾರ ರಾಯಲ್ ಚಾಲೆಂಜರ್ಸ್ ಬೆಂಗಳೂರು ಅಥವಾ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ಗೆ ಹೇಳಿರಲಿಲ್ಲ ಎಂದು ಸ್ಪಷ್ಟಪಡಿಸಿದರು.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾವು ಆರ್‌ಸಿಬಿ ಅಥವಾ ಕೆಸಿಎ ಅವರನ್ನು ಸಂಭ್ರಮಾಚರಣೆ ಕಾರ್ಯಕ್ರಮ ಮಾಡಿ ಎಂದು ಕೇಳಿಕೊಂಡಿರಲಿಲ್ಲ. ಅವರೇ ವಿಜಯೋತ್ಸವ ಆಯೋಜಿಸಿದ್ದರು. ತಂಡವನ್ನು ಬೆಂಗಳೂರಿಗೆ ಕರೆತಂದವರು ಅವರೇ. ಸರ್ಕಾರವೂ ಇದನ್ನು ಸುಗಮಗೊಳಿಸಬೇಕೆಂದು ಭಾವಿಸಿತ್ತು. ಈ ಘಟನೆ ನಡೆದಿದ್ದಕ್ಕೆ ನನಗೆ ತುಂಬಾ ವಿಷಾದವಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನ ಕಾಲ್ತುಳಿತದ ಬಗ್ಗೆ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿದ್ದಾರೆ. ತನಿಖೆಯ ವರದಿ ಸರ್ಕಾರಕ್ಕೆ ಬರಲಿ, ಯಾವುದೇ ಲೋಪಗಳಿದ್ದರೆ, ಹೊಣೆಗಾರರೆಂದು ಕಂಡುಬಂದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರತಿಷ್ಠಿತ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಈ ಘಟನೆ ಸಂಭವಿಸಿದ್ದು, ಫ್ರಾಂಚೈಸಿ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) 2025 ನ್ನು ಗೆದ್ದ ನಂತರ ಆರ್‌ಸಿಬಿ ಆಟಗಾರರನ್ನು ನೋಡಲು ಸಾವಿರಾರು ಅಭಿಮಾನಿಗಳು ಸೇರಿದ್ದರು. ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಜ್ಯ ಸರ್ಕಾರ 10 ಲಕ್ಷ ರೂಪಾಯಿ ಪರಿಹಾರವನ್ನು ಘೋಷಿಸಿತು.



## ಕೊಲೆಗಡುಕ ಸರ್ಕಾರದಿಂದ ರೀಲ್, ಸೆಲ್ಫೀ, ಪ್ರಚಾರಕ್ಕಾಗಿ ಕಾರ್ಯಕ್ರಮ

### ಎಂ.ಪಿ. ರೇಣುಕಾಚಾರ್ಯ ವಾಗ್ದಾಳಿ

**ದಾವಣಗೆರೆ:** ಆರ್ ಸಿಬಿ ಸಂಭ್ರಮಾಚರಣೆ ವೇಳೆ ನಡೆದ ದುರಂತದಲ್ಲಿ 11 ಅಭಿಮಾನಿಗಳ ಸಾವಾಗಿದ್ದು, ರೀಲ್ಸ್, ಸೆಲ್ಫಿ, ಪ್ರಚಾರಕ್ಕಾಗಿ ಕೊಲೆಗಡುಕ ಸರ್ಕಾರದಿಂದ ನಡೆದ ಕಾರ್ಯಕ್ರಮ ಇದಾಗಿದೆ ಎಂದು

ರಾಜ್ಯ ಸರ್ಕಾರದ ವಿರುದ್ಧ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ವಾಗ್ದಾಳಿ ನಡೆಸಿದರು.

ವಿಧಾನಸೌಧ ಬಳಿ ಕಾರ್ಯಕ್ರಮ ನಡೆಯುತ್ತಿರುವಾಗ ನಾಲ್ಕು ಜನರು ಮೃತಪಟ್ಟ ಮಾಹಿತಿ ಇತ್ತು. ಈ ಮಾಹಿತಿ ಇದ್ದರೂ ಅಲ್ಲಿ ಹೋಗಿ ಕಪ್‌ಗೆ ಮುತ್ತಿಕ್ಕೋ ಅವಶ್ಯಕತೆ ಇತ್ತಾ? ಡಿ.ಕೆ. ಶಿವಕುಮಾರ್ ಕಣ್ಣೀರಿಟ್ರು ಅಂತಾ ಮಾಧ್ಯಮಗಳಲ್ಲಿ ನೋಡಿದೆ ನಿನ್ನೆ ಕಪ್‌ಗೆ ಮುತ್ತಿಕ್ಕುವಾಗ ಕಣ್ಣೀರು ಬರಲಿಲ್ಲವೇ ಎಂದು ಚಾಟಿ ಬೀಸಿದರು.

ಹನ್ನೊಂದು ಜನರ ಶವದ ಮೇಲೆ ಕಾರ್ಯಕ್ರಮ ಮಾಡಿದ್ದು ಕರ್ನಾಟಕಕ್ಕೆ ಅಪಮಾನ. ಕೊಹ್ಲಿಗೆ ಕೋಟ್ಯಂತರ ಅಭಿಮಾನಿಗಳಿದ್ದಾರೆ. ಕಾಂಗ್ರೆಸ್ ಸರ್ಕಾರ ಯಾವುದೇ ಪೂರ್ವಭಾವಿ ಸಭೆ ಮಾಡದೇ ತರಾತುರಿಯಲ್ಲಿ ತಂಡಕ್ಕೆ ಆಹ್ವಾನ ನೀಡಿದ್ದು, ಒಟ್ಟಾರೆ ಗೃಹಸಚಿವರು ಫೇಲ್ಯೂರ್ ಆಗಿದ್ದಾರೆ



ಎಂದು ಜರಿದರು.

ವಿಧಾನಸೌಧ ಮೆಟ್ಟಿಲುಗಳ ಮೇಲೆ ನಡೆಸಿದ ಸನ್ಮಾನ ಕಾರ್ಯಕ್ರಮದಲ್ಲಿ ಸಿಎಂ, ಸಚಿವರು, ಶಾಸಕರ ಕುಟುಂಬದ ಸದಸ್ಯರು ಭಾಗಿಯಾಗಿದ್ದು, ಸಚಿವರು, ಶಾಸಕರ ಕುಟುಂಬ ವರ್ಗದ ಸೆಲ್ಫಿ, ರೀಲ್ಸ್‌ಗೆ ಕಾರ್ಯಕ್ರಮ ಸೀಮಿತವಾಗಿತ್ತು.

ಚಿನ್ನಸ್ವಾಮಿ ಸ್ಟೇಡಿಯಂವರೆಗೆ ತೆರೆದ ವಾಹನದಲ್ಲಿ ಮೆರವಣಿಗೆ ಮಾಡಿದ್ರೆ ದುರಂತ ಆಗುತ್ತಿರಲಿಲ್ಲ. ಪ್ರತಿಷ್ಠೆಗೆ ಬಿದ್ದು ಈ ರೀತಿ ಕಾರ್ಯಕ್ರಮ ಮಾಡೋ ಅವಶ್ಯಕತೆ ಇತ್ತಾ ಎಂದು ಪ್ರಶ್ನಿಸಿದರು.

ಈ ದುರಂತ ಸರ್ಕಾರದ ವೈಫಲ್ಯವಾ? ಪೊಲೀಸ್ ವೈಫಲ್ಯವಾ? ಗುಪ್ತಚರ ಇಲಾಖೆ ವೈಫಲ್ಯನಾ? ಕುಂಭಮೇಳ ಕಾಲ್ತುಳಿತ ದುರಂತ ವೇಳೆ ಇದೇ ಸರ್ಕಾರ ಬೊಬ್ಬೆ ಹಾಕಿತ್ತು. ಪೆಹಲ್ಗಾಮ್ ಉಗ್ರರ ದಾಳಿ ವೇಳೆಯೂ ಮಲ್ಲಿಕಾರ್ಜುನ ಖರ್ಗೆ ಆದಿಯಾಗಿ ಸಂತೋಷ ಲಾಡ್ ಎಲ್ಲರೂ ಬೊಬ್ಬೆ ಹಾಕಿದರು. ಈಗ ಇವರು ಜನರ ಸಮಾಧಿ ಮೇಲೆ ತರಾತುರಿಯಲ್ಲಿ ಕಾರ್ಯಕ್ರಮ ಮಾಡಬೇಕಿತ್ತಾ ಎಂದು ಕಿಡಿಕಾರಿದರು.

ಆರ್‌ಸಿಬಿ ಕಪ್ ಗೆದ್ದಿದ್ದು ಕರ್ನಾಟಕಕ್ಕೆ ಬಂದ ಗೌರವ. ಪೊಲೀಸ್ ಭದ್ರತಾ ಪಡೆ ಹೆಚ್ಚಿಸಬೇಕಿತ್ತು. ಅಥವಾ ಭಾನುವಾರ ಆಯೋಜನೆ ಮಾಡಬೇಕಿತ್ತು.

40 – 50 ಲಕ್ಷ ಆರ್‌ಸಿಬಿ ಅಭಿಮಾನಿಗಳು ಸೇರ್ತಿದ್ರು. ಈ ದುರಂತಕ್ಕೆ ಹೊಣೆ ಯಾರು? ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿದು ಹೋಗಿದೆ. ಇಡೀ ದೇಶದಲ್ಲಿ ಕರ್ನಾಟಕದ ಮಾನ ಮರ್ಯಾದೆ ಹೋಯಿತು. ಇದು ಕರ್ನಾಟಕಕ್ಕೆ ಕಪ್ಪು ಚುಕ್ಕೆಯಾಯಿತು. ಸರ್ಕಾರ ಇದರ ನೇರ ಹೊಣೆ ಹೊರಬೇಕು. ಪ್ರಕರಣದ ನ್ಯಾಯಾಂಗ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

## ರಾಸಾಯನಿಕ ಗೊಬ್ಬರ ಬಳಕೆಯಿಂದ ಹಸಿರು ಮರುಭೂಮಿಯಾಗುತ್ತಿದೆ: ಸುರೇಶ್ ಕಳವಳ

**ದಾವಣಗೆರೆ:** ನೀರಾವರಿ ರೈತರು ಬೆಳೆ ಬದಲಾವಣೆ ಮಾಡುವುದಿಲ್ಲ. ಜೊತೆಗೆ ಹೆಚ್ಚು ರಾಸಾಯನಿಕ ಗೊಬ್ಬರ ಬಳಸುವ ಮೂಲಕ ಹಸಿರು ಮರುಭೂಮಿಯನ್ನಾಗಿಸುತ್ತಿದ್ದಾರೆ ಎಂದು ಸುಳ್ಯದ ಕೆ.ಪಿ. ಸುರೇಶ್ ಕಳವಳ ವ್ಯಕ್ತಪಡಿಸಿದರು.

ಗುರುವಾರ ನಗರದ ರೋಟರಿ ಸಭಾಂಗಣದಲ್ಲಿ ಸರ್ವೋದಯ ಕರ್ನಾಟಕ ಮತ್ತು ಜೆ.ಎಚ್.ಪಟೇಲ್ ಫೌಂಡೇಷನ್ ಆಶ್ರಯದಲ್ಲಿ ಸುಸ್ಥಿರ ಕೃಷಿಯ ಆಯಾಮಗಳು ಕುರಿತು ತಜ್ಞರಿಂದ ಚಿಂತನ ಮಂಥನ ಕಾರ್ಯಕ್ರಮ ಆಯೋಜಿಸಲಾಗಿ, ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಅವರು ಸುಸ್ಥಿರ ಕೃಷಿ ವಿಷಯ ಕುರಿತು ಮಾತನಾಡಿದರು.

ಸರ್ಕಾರದ ಕೃಷಿ ಯೋಜನೆಗಳು ಹೊರಬರುತ್ತಿವೆ. ಅನುದಾನಗಳು ಮಂಜೂರಾಗುತ್ತಿವೆ ಆದರೆ ಸೂಕ್ತವಾಗಿ ಅನುಷ್ಠಾನಗೊಳ್ಳುತ್ತಿಲ್ಲ. ಎಲ್ಲ ರೈತರಿಗೂ ತಲುಪುತ್ತಿಲ್ಲ. ಕೃಷಿ ಇಲಾಖೆ ಏನು ಮಾಡುತ್ತಿದೆ ಎಂಬ ಪ್ರಶ್ನೆ ಏಳುತ್ತದೆ. ತೋಟಗಾರಿಕೆ ಬೆಳೆ ಬೋರ್ ವೆಲ್ ಇರುವವರು ಬೆಳೆಯುತ್ತಾರೆ. ಬೋರ್ ವೆಲ್ ಎಂದರೆ ಅಕ್ಕಪಕ್ಕದವರ ನೀರನ್ನು ದರೋಡೆ ಮಾಡುವುದಾಗಿದೆ. ಅಂತಹವರಿಗೆ ಸರ್ಕಾರದ ಯೋಜನೆಗಳಿವೆ. ಸಣ್ಣ ರೈತರಿಗೆ ಇಲ್ಲ. ಉಳ್ಳವರು ಹಾಗೂ ನತದೃಷ್ಟ ರೈತರ ನಡುವಿನ ಕಂದಕವನ್ನು ಸರ್ಕಾರ ಹೆಚ್ಚು ಮಾಡುತ್ತಿದೆ ಎಂದು ಆರೋಪಿಸಿದರು. ಸರ್ಕಾರ ನೀರಾವರಿ ಮೂಲಕ ಕೃಷಿಕ್ಷೇತ್ರವನ್ನು ನಾಶಮಾಡುತ್ತಿದೆ. ಷಸರ್ಕಾರ ಪ್ರಚಾರಕ್ಕಾಗಿ ಮಾತ್ರ ಕೆಲಸ ಮಾಡುತ್ತಿದೆಯಷ್ಟೇ. ಸರ್ಕಾರ ಸಣ್ಣ ಸಣ್ಣ ಬದಲಾವಣೆಯನ್ನು ಕೈಗೊಳ್ಳುವ ಮೂಲಕ ಕೃಷಿಯಲ್ಲಿ ಮಹತ್ವದ ಬದಲಾವಣೆ ತರಬಹುದು ಎಂದು ಉದಾಹರಣೆಗಳ ಸಹಿತ ತಿಳಿಸಿದರು.



ಸಾವಯವ ಆರ್ಗ್ಯಾನಿಕ್ ಅಲ್ಲ. ಸ್ವಾವಲಂಬಿ ಅಲ್ಲಿದ್ದು ಸಾವಯವ ಅಲ್ಲ. ಶೇ. 90 ಸಾವಯವ ಗ್ರಾಮಗಳಲ್ಲಿ ಅನಿವಾರ್ಯವಾಗಿ ರಾಸಾಯನಿಕ ಕೃಷಿಯನ್ನು ಅಪ್ಪಿಕೊಂಡಿದ್ದಾರೆ. ನಿಮ್ಮ ನೆರೆಯ ಗ್ರಾಮಗಳಲ್ಲಿ ಪರಿಶೀಲಿಸಿ, ಸರಿಪಡಿಸುವ ಕೆಲಸವನ್ನು ಮಾಡಿ ಎಂದು ಸ್ವಾವಲಂಬಿ ಸಾವಯವ ಕೃಷಿಕರಿಗೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಿಮಾ ಜೆ. ಪಟೇಲ್ ಮಾತನಾಡಿ, ಕಾರ್ಯಕ್ರಮಕ್ಕೆ ವಿವಿಧ ಜಿಲ್ಲೆಗಳಿಂದ ರೈತರು ಆಗಮಿಸಿದ್ದೀರಿ. ನಮ್ಮ ಮುಂದಿನ ಕನಸು ರೈತರ ಬದುಕು ಹಸನಾಗಬೇಕಾದರೆ ಸುಸ್ಥಿರ ಕೃಷಿ ಬರಬೇಕು. ಎಲ್ಲ ಸಾವಯವ ಕೃಷಿಕರು ಗೊಂದಲ ಬಿಟ್ಟು ಒಟ್ಟಾಗಿ ಸಾಗುವ ಅಗತ್ಯವಿದೆ. ರಾಜ್ಯವನ್ನು ಸಂಪೂರ್ಣ ಸಾವಯವ ರಾಜ್ಯವನ್ನಾಗಿಸೋಣ. ಈ ನಿಟ್ಟಿನಲ್ಲಿ ಈ ಕಾರ್ಯಕ್ರಮ ದಾರಿದೀಪವಾಗಲಿ ಎಂದು ಆಶಿಸಿದರು.

ಸಾವಯವ ಕೃಷಿಕರಾದ ಚಂದ್ರಶೇಖರ್ ನಾರಾಯಣಪುರ ತಮ್ಮ ಪ್ರಾಸ್ತಾವಿಕ ನುಡಿಗಳಲ್ಲಿ ಈ ಕಾರ್ಯಕ್ರಮದ ಒಂದೇ ಕಾಳಜಿ ಎಂದರೇ ರಾಸಾಯನಿಕಗಳನ್ನು ಬಳಸಿ ಪರಾವಲಂಬಿಗಳಾಗಿ ಬದುಕುವುದಕ್ಕಿಂತ ತನಗೆ ಬೇಕಾದ ಗೊಬ್ಬರ, ಔಷಧಿಗಳನ್ನು ಉತ್ಪತ್ತಿ ಮಾಡಿಕೊಳ್ಳುವ ಸಹಜ ಕೃಷಿಕರಾಗಬೇಕಿದೆ ಎಂದರು.

## ದೇಹದ ಅಂಗಾಂಗಗಳ ಸಮರ್ಪಕ ಕಾರ್ಯಾಚರಣೆ ಕಿಡ್ನಿಯನ್ನು ಅವಲಂಬಿಸಿದೆ: ಡಾ. ರಾಜೀವ್ ಅಗರ್ವಾಲ್

**ದಾವಣಗೆರೆ:** ದೇಹದ ಉಳಿದ ಅಂಗಾಂಗಳ ಸಮರ್ಪಕ ಕಾರ್ಯಾಚರಣೆ ಮೂತ್ರ ಪಿಂಡಗಳ ಸಮರ್ಪಕ ಕಾರ್ಯಾಚರಣೆಯನ್ನು ಅವಲಂಬಿಸಿರುತ್ತದೆ ಎಂದು ಜಜಮು ವೈದ್ಯಕೀಯ ಮಹಾವಿದ್ಯಾಲಯದ ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾ. ರಾಜೀವ್ ಅಗರ್ವಾಲ್ ತಿಳಿಸಿದರು.

ಗುರುವಾರ ಬಾಪೂಜಿ ಮಕ್ಕಳ ಆಸ್ಪತ್ರೆಯಲ್ಲಿ ವಿವೇಕ್ ಪೋಷಕರ ಆರೋಗ್ಯ ಕಾರ್ಯಾಗಾರದಡಿ "ಕಿಡ್ನಿ ವೈಫಲ್ಯಕ್ಕೆ ಕಾರಣಗಳು, ಚಿಕಿತ್ಸೆ ಮತ್ತು ತಡೆಗಟ್ಟುವಿಕೆ" ವಿಷಯ ಕುರಿತು ಅವರು ಮಾತನಾಡಿದರು.

ಮೂತ್ರ ಪಿಂಡಗಳು ಶರೀರದ ಪ್ರಮುಖ ವಿಸರ್ಜಕ ಅಂಗಗಳು. ಇವು ಕಂದು ಬಣ್ಣದ, ಮುಷ್ಠಿಗಾತ್ರವಿರುವ ಹುರುಳಿಯಾಕಾರದದ ಜೋಡಿ ಅಂಗಗಳು. ಇವು ಶರೀರದ ಹಿಂಭಾಗದಲ್ಲಿ ಬೆನ್ನು ಹುರಿಯ ಎರಡೂ ಪಕ್ಕದಲ್ಲಿವೆ. ದೇಹದಲ್ಲಿ ಸುಮಾರು 5 ಲೀಟರ್ ರಕ್ತ ಸಂಚಲಿಸುತ್ತಿದ್ದು, ಪ್ರತಿ ದಿನ ಎರಡು ಕಿಡ್ನಿಗಳಲ್ಲಿ 40 ಬಾರಿ ರಕ್ತ ಶುದ್ದೀಕರಣಗೊಳ್ಳುತ್ತದೆ ಎಂದು ಕಿಡ್ನಿ ಕಾರ್ಯವನ್ನು ತಿಳಿಸಿದರು.

ದೇಹಕ್ಕೆ ಅಗತ್ಯವಿಲ್ಲದ ಹಾನಿಕಾರಕ ಅಂಶಗಳು ಮೂತ್ರದ ಮೂಲಕ ದೇಹದಿಂದ ವಿಸರ್ಜಿಸಲ್ಪಡುತ್ತದೆ. ರಕ್ತದ ಉತ್ಪಾದನೆ, ರಕ್ತದ ಒತ್ತಡ ಮತ್ತು ರಕ್ತದಲ್ಲಿ ಲವಣಾಂಶಗಳ ಮಟ್ಟಗಳನ್ನು ಸಮತೋಲನದಲ್ಲಿಡುವುದು ಮೂತ್ರ ಪಿಂಡದ ಇತರೆ ಮುಖ್ಯ ಕೆಲಸಗಳು. ಕಿಡ್ನಿಗೆ ಸಂಬಂಧಿಸಿದ ಹಲವಾರು ಕಾಯಿಲೆಗಳನ್ನು ಸಂಪೂರ್ಣವಾಗಿ ಗುಣಪಡಿಸಬಹುದು ಮತ್ತು ಹತೋಟಿಯಲ್ಲಿಡಬಹುದು ಎಂದು ವಿವರಿಸಿದರು.

ಸಾಮಾನ್ಯ ಕಿಡ್ನಿ ಸಮಸ್ಯೆಗಳೆಂದರೆ, ಮೂತ್ರಕೋಶ, ಮೂತ್ರಪಿಂಡದ ಸೋಂಕು, ಉರಿಮೂತ್ರ, ರಕ್ತದ ಏರೊತ್ತಡ, ಕಾಲು ಮತ್ತು ಮುಖ ಬಾವು, ಮೂತ್ರದಲ್ಲಿ ಪ್ರೋಟೀನ್ ಅಥವಾ ರಕ್ತ ಸೋರುವಿಕೆ, ಕಿಡ್ನಿಯಲ್ಲಿ ಕಲ್ಲುಗಳು, ಆಸಿಡ್ಸ್ ನ್ಯೂನ್ಯತೆಗಳು, ರಕ್ತದಲ್ಲಿ ಲವಣಾಂಶಗಳ ಅಸಮತೋಲನ, ತಾತ್ಕಾಲಿಕ ಕಿಡ್ನಿ ವೈಫಲ್ಯ, ದೀರ್ಘಾವದಿ ಕಿಡ್ನಿ ವೈಫಲ್ಯತೆ ಹಾಗೂ ಅನುವಂಶಿಕ ಕಿಡ್ನಿ ಕಾಯಿಲೆಗಳಾಗಿವೆ.

ಮೂತ್ರಪಿಂಡ ವೈಫಲ್ಯದ ಸಾಮಾನ್ಯ ಕಾರಣಗಳೆಂದರೆ, ದೀರ್ಘಾವಧಿ ಡಯಾಬಿಟಿಸ್. ಇದು ಅತಿ ಮುಖ್ಯ ಕಾರಣ, ಶೇ.30 ರಿಂದ 50ರಷ್ಟು



ಮಧುಮೇಹಿಗಳು ಮೂತ್ರಪಿಂಡದ ತೊಂದರೆಗೆ ಒಳಗಾಗುತ್ತಾರೆ.

ದೀರ್ಘಾವಧಿ ರಕ್ತದ ಏರೊತ್ತಡ, ಕೆಲವು ಬಗೆಯ ನೆಫ್ರೈಟಿಸ್, ಪದೇ ಪದೇ ಮೂತ್ರಪಿಂಡಗಳ ಸೋಂಕು, ಪಾಲಿಸಿಸ್ಟಿಕ್ ಕಿಡ್ನಿಗಳು,, ಮೂತ್ರಪಿಂಡಗಳು ರೂಪುಗೊಳ್ಳುವುದು. ಅಥವಾ ನಾಳದಲ್ಲಿ ಪದೇ ಪದೇ ಕಲ್ಲುಗಳು, ಮೂತ್ರಪಿಂಡಗಳು ಸರಿಯಾಗಿ ಬೆಳೆಯದಿರುವುದೇ ಮುಂತಾದ ಹುಟ್ಟಿನಿಂದಲೇ ಬರುವ ಸಮಸ್ಯೆಗಳು, ಮೂತ್ರದ ಮಾರ್ಗದಲ್ಲಿ ಅಡಚಣೆ,

ದೀರ್ಘಾವಧಿ ನೋವು ನಿವಾರಕ ಮಾತ್ರೆಗಳ ಸೇವನೆಯಿಂದ ಬರುತ್ತದೆ.

ಮೂತ್ರಪಿಂಡ ವಿಫಲವಾದರೆ, ಶರೀರದಲ್ಲಿ ನೀರು ಮತ್ತು ಲವಣಾಂಶಗಳ ಪ್ರಮಾಣ ಹೆಚ್ಚಾಗುತ್ತದೆ, ಬಾವು ಬರುತ್ತದೆ. ರಕ್ತದ ಒತ್ತಡದ ಏರಿಕೆಯಾಗುತ್ತದೆ. ರಕ್ತಹೀನತೆ, ಮೂಳೆಯ ರೋಗ, ಕುಂಠಿತವಾಗುವ ಬೆಳವಣಿಗೆ, ಸುಸ್ತು, ಆಯಾಸ, ಹಸಿವು ಕಡಿಮೆಯಾಗುವುದು, ಪದೇ ಪದೇ ವಾಂತಿಯಾಗಲಿದೆ.

ಮೂತ್ರಪಿಂಡಗಳ ರಕ್ಷಣೆಗೆ ಸೂಕ್ತ ಕ್ರಮಗಳೆಂದರೆ ರಕ್ತದಲ್ಲಿ ಸಕ್ಕರೆ ಅಂಶವನ್ನು ಸರಿಯಾದ ಪ್ರಮಾಣದಲ್ಲಿಡುವುದು, ರಕ್ತದ ಏರೊತ್ತಡ ನಿಯಂತ್ರಣ, ವ್ಯಾಯಾಮ, ಕಡಿಮೆ ಉಪ್ಪು ಸೇವನೆ (5 ಗ್ರಾಂ ಪ್ರತಿ ದಿನಕ್ಕೆ) ದೇಹದ ತೂಕವನ್ನು ವಯಸ್ಸು ಮತ್ತು ಎತ್ತರಕ್ಕೆ ಅನುಗುಣವಾಗಿ ಕಾಯ್ದುಕೊಳ್ಳುವುದು, ನಿಗದಿತ ಸಮಯಕ್ಕೆ ಸರಿಯಾಗಿ ವೈದ್ಯಕೀಯ ತಪಾಸಣೆ, ಸೋಂಕು ಬಂದಾಗ ಸೂಕ್ತ ಚಿಕಿತ್ಸೆಗಳ ಬಗ್ಗೆ ಗಮನವಿಡಬೇಕು. ಸೋಂಕುಗಳಿಗೆ ತಕ್ಷಣವೇ ಚಿಕಿತ್ಸೆ ಪಡೆಯಬೇಕು. ದೇಹದಿಂದ ಅತಿ ಹೆಚ್ಚು ಪ್ರಮಾಣದಲ್ಲಿ ನೀರು (ಜಲಾಂಶ) ಅಥವಾ ರಕ್ತ ಸೋರಿಕೆಯಾದರೆ ಕೂಡಲೇ ಚಿಕಿತ್ಸೆ ಪಡೆಯಬೇಕು. ಪ್ರೊಸ್ಟೇಟ್ ಗ್ಲಾಂಡ್ ಗಾತ್ರದಲ್ಲಿ ದೊಡ್ಡದಾಗಿದ್ದರೆ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದರು.

ದೀರ್ಘಾವಧಿ ಮೂತ್ರಪಿಂಡ ವೈಫಲ್ಯವಾದಾಗ ಅಜೀವ ಪರ್ಯಂತ ರಕ್ತ ಶುದ್ದೀಕರಣ (ಡಯಾಲಿಸಿಸ್) ಡಯಾಲಿಸಿಸ್‌ನಲ್ಲಿ ಕೃತಕ ಫಿಲ್ಟರ್ ಸಹಾಯದಿಂದ ರಕ್ತವನ್ನು ವಾರಕ್ಕೆ 2–3 ಬಾರಿ ಶುದ್ದೀಕರಿಸಲಾಗುತ್ತದೆ. ಹಾಗೂ ಮೂತ್ರಪಿಂಡದ ಕಸಿ ಮಾಡುವಿಕೆ (ಟ್ರಾನ್ಸ್ ಪ್ಲಾನ್‌ಟೇಷನ್) ರಕ್ತವನ್ನು ಶುದ್ದೀಕರಿಸುವ ಕಾರ್ಯವನ್ನು ನಿರ್ವಹಿಸಲು ಬೇರೊಬ್ಬ ವ್ಯಕ್ತಿಯಿಂದ ಹೊಸ ಮೂತ್ರಪಿಂಡವನ್ನು ಪಡೆಯುವ ಚಿಕಿತ್ಸೆಯಾಗಿದೆ ಎಂದು ಮಾಹಿತಿ ನೀಡಿದರು.


ಕಾರ್ಯಕ್ರದಲ್ಲಿ ಮಕ್ಕಳ ಆಸ್ಪತ್ರೆಯ ನಿರ್ದೇಶಕ ಡಾ. ಜಿ. ಗುರುಪ್ರಸಾದ್, ಡಾ. ಸುರೇಶ ಬಾಬು, ಡಾ. ಕೌಜಲಗಿ, ಡಾ. ನವೀನ್ ನಾಡಿಗ್, ಮಕ್ಕಳ ಪೋಷಕರು, ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

### ಕಾಲ್ತುಳಿತದಲ್ಲಿ ಟೆಕ್ಕಿ ಸಹನಾ ದುರಂತ ಸಾವು,

## ಮುಗಿಲು ಮುಟ್ಟಿದ ಪೋಷಕರ ಆಕ್ರಂದನ

**ಕೋಲಾರ, ಜೂ.5–** ಬಾಳಿ ಬದುಕಿ ಮದುವೆಯಾಗಿ ಹಾರ ಹಾಕಿಸಿಕೊಳ್ಳಬೇಕಾಗಿದ್ದ ನನ್ನ ಮಗಳು ಆರ್‌ಸಿಬಿ ಸಂಭ್ರಮಾಚರಣೆಯ ಕಾಲ್ತುಳಿತದಲ್ಲಿ ಮೃತಪಟ್ಟು ಸಾವಿನ ಮಾಲೆ ಹಾಕಿಸಿಕೊಂಡಿದ್ದಾಳೆ ಎಂದು ತಂದೆ ಮಮ್ಮಲ ಮರುಗಿದ್ದಾರೆ.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ಸಂಭ್ರಮಾಚರಣೆ ಸಂದರ್ಭದಲ್ಲಿ ಕಾಲ್ತುಳಿತದಿಂದ ಕೆಜಿಎಫ್ ತಾಲ್ಲೂಕಿನ ಬುಡಮಾಕನಹಳ್ಳಿಯ ಟೆಕ್ಕಿ ಸಹನಾ (24) ದುರಂತ ಅಂತ್ಯ ಕಂಡಿದ್ದು ಪೋಷಕರಲ್ಲಿ



ಆಕ್ರಂದನ ಮುಗಿಲುಮುಟ್ಟಿತ್ತು.

ಶಿಕ್ಷಕ ದಂಪತಿ ಸುರೇಶ್‌ಬಾಬು ಮತ್ತು ಮಂಜುಳ ದಂಪತಿ ಪುತ್ರಿ ಸಹನಾ ಬುದ್ದಿವಂತಳಾಗಿದ್ದು, ಇತ್ತೀಚೆಗಷ್ಟೇ ಬೆಂಗಳೂರಿನಲ್ಲಿ ಇಂಜಿನಿಯರ್ ಪದವಿ ಪೂರೈಸಿ ಬೆಂಗಳೂರಿನಲ್ಲಿ ಖಾಸಗಿ ಕಂಪನಿಯೊಂದರಲ್ಲಿ ಟೆಕ್ಕಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರು.

ನಿನ್ನೆ ಆರ್‌ಸಿಬಿ ತಂಡ ಬೆಂಗಳೂರಿಗೆ ಆಗಮಿಸಿದ ಹಿನ್ನೆಲೆಯಲ್ಲಿ ಕ್ರೀಡಾಪಟುಗಳನ್ನು ಕಣ್ಣುಂಬಿಕೊಳ್ಳಲು ಸಹನಾ ಸ್ನೇಹಿತರೊಂದಿಗೆ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ತೆರಳಿದ್ದರು. ಜನಸಾಗರದ ನಡುವೆ ಸಿಲುಕಿ ಯುವತಿ ಸಾವನ್ನಪ್ಪಿದ್ದಾರೆ.

ವಿದ್ಯಾಭ್ಯಾಸಕ್ಕಾಗಿ ಕೋಲಾರದಲ್ಲಿ ಕುಟುಂಬ ನೆಲೆಸಿದ್ದು, ನಗರದ ಎಜಿ ಬಡಾವಣೆಯ ನಿವಾಸಕ್ಕೆ ಪಾರ್ಥಿವ ಶರೀರವನ್ನು ಪೊಲೀಸ್ ಹಾಗೂ ಎಸ್ಕಾರ್ಟ್ ಮೂಲಕ ಆ್ಯಂಬುಲೆನ್ಸ್‌ನಲ್ಲಿ ಕರೆತರಲಾಯಿತು. ಮಗಳ ಮೃತದೇಹವನ್ನು ಕಂಡ ಪೋಷಕರ ದುಃಖದ ಕಟ್ಟೆ ಒಡೆಯಿತು. ಆಕ್ರಂದನ ಮುಗಿಲು ಮುಟ್ಟಿತ್ತು.

## ಆರ್‌ಸಿಬಿ ಅಭಿಮಾನಿಗಳ ಸಾವಿಗೆ ಹೊಣೆ ಯಾರು..?

**ಬೆಂಗಳೂರು :** ಆರ್‌ಸಿಬಿಗೆ ಅಪಾರ ಅಭಿಮಾನಿ ಬಳಗವಿದೆ. ಲಕ್ಷಾಂತರ ಜನ ಸಂಭ್ರಮಾಚರಣೆಗೆ ಸೇರುತ್ತಾರೆ ಎನ್ನುವ ಅಂದಾಜಿದ್ದರೂ ಕರ್ನಾಟಕ ಸರ್ಕಾರ ಹಾಗೂ ಪೊಲೀಸರು ಯಾವುದೇ ಪೂರ್ವ ಸಿದ್ಧತೆಯನ್ನು ಮಾಡಿಕೊಂಡಿರಲಿಲ್ಲ ಎನ್ನುವ ಗಂಭೀರವಾದ ಆರೋಪ ಕೇಳಿ ಬಂದಿದೆ. ಇಲಾಖೆ ವೈಫಲ್ಯವನ್ನು ಕಂಡಿತೇ ಎನ್ನುವ ಅನುಮಾನ ಕಾಡಲಾರಂಭಿಸಿದೆ.

ಚಿನ್ನಸ್ವಾಮಿ ಮೈದಾನಕ್ಕೆ ಪಾಸ್ ಇದ್ದವರನ್ನು ಮಾತ್ರ ಬಿಡಲಾಗುವುದು ಎಂದು ಹೇಳಲಾಗುತ್ತಿತ್ತು. ಆದರೆ, ಎಲ್ಲಿ ಸಂವಹನದ ಕೊರತೆ ಎದುರಾಯಿತೋ ಎನ್ನುವ ಹಾಗೇ, ಮೈದಾನದ ಒಳಗೆ ಹೋಗಲು ಭಾರೀ ನೂಕುನುಗ್ಗಲು ಶುರುವಾಯಿತು. 40 ಸಾವಿರ ಸಾಮರ್ಥ್ಯದ ಕ್ರೀಡಾಂಗಣದ ಸುತ್ತಮುತ್ತ 60 ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ಜಮಾಯಿಸಿದ್ದರು.

ಅಸಲಿಗೆ, ಎಚ್‌ಎಎಲ್ ವಿಮಾನ ನಿಲ್ದಾಣದಿಂದ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಆಟಗಾರರನ್ನು ಕರೆತರುವ ಪ್ರೋಗ್ರಾಂ ಹಾಕಲಾಗಿತ್ತು. ರಾಯಲ್ ಚಾಲೆಂಜರ್ಸ್ ತಂಡ ಇದನ್ನು ತಮ್ಮ ಸಾಮಾಜಿಕ ಖಾತೆಯಲ್ಲೂ ಪ್ರಕಟಿಸಿತ್ತು. ಆದರೆ, ತೆರೆದ ವಾಹನದಲ್ಲಿ ಮೆರವಣಿಗೆ ಮಾಡಲು ಸರ್ಕಾರ ಅನುಮತಿಯನ್ನು ನೀಡಿರಲಿಲ್ಲ.

## ‘ಅಭಿಮಾನಿಗಳ ಸುರಕ್ಷತೆಯೇ ಮುಖ್ಯ’.. ದುರಂತದ ಬಳಿಕ ವಿರಾಟ್ ಕೊಯ್ಲಿ ಮೊದಲ ಪ್ರತಿಕ್ರಿಯೆ

ಬೆಂಗಳೂರು: ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ 11 ಮಂದಿ ಸಾವನ್ನಪ್ಪಿದ ದುರಂತ–ಕ್ಕೆ ಸಂಭವಿಸಿದಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಇದೇ ಮೊದಲ ಬಾರಿಗೆ ತನ್ನ ಪ್ರತಿಕ್ರಿಯೆ ನೀಡಿದೆ.

ಐಪಿಎಲ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಮಣಿಸಿದ್ದ ಆರ್ ಸಿಬಿ ತಂಡ 18 ವರ್ಷಗಳ ಬಳಿಕ ತನ್ನ ಚೊಚ್ಚಲ ಐಪಿಎಲ್ ಪ್ರಶಸ್ತಿ ಎತ್ತಿ ಹಿಡಿದಿದ್ದು, ಇದೇ ಖುಷಿಯನ್ನು ಬೆಂಗಳೂರಿನಲ್ಲಿ ತನ್ನ ಅಭಿಮಾನಿಗಳೊಂದಿಗೆ ಹಂಚಿಕೊಳ್ಳಲು ಮುಂದಾಗಿತ್ತು.

ಆಟಗಾರರ ಬಿಸಿ ಶೆಡ್ಯೂಲ್ ನಡುವೆಯೂ ಆರ್ ಸಿಬಿ ತಂಡ ಆಟಗಾರರನ್ನು ಬೆಂಗಳೂರಿಗೆ ಕರೆತಂದು ಅಭಿಮಾನಿಗಳ ಜೊತೆ ಸಂಭ್ರಮಾಚರಣೆ ಮಾಡಲು ನಿರ್ಧರಿಸಿತ್ತು. ಇದಕ್ಕಾಗಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾರ್ಯಕ್ರಮ ಕೂಡ ಆಯೋಜನೆ ಮಾಡಲಾಗಿತ್ತು. ಆದರೆ ಇದೇ ಚಿನ್ನಸ್ವಾಮಿ ಕ್ರೀಡಾಂಗಣ ಇದೀಗ ಸೂತಕ ಮನೆಯಂತಾಗಿದೆ.

ದುರಂತದ ಬಳಿಕ ಆರ್ ಸಿಬಿ ಮೊದಲ ಪ್ರತಿಕ್ರಿಯೆ :



ಇನ್ನು 11 ಜನರ ಸಾವಿಗೆ ಕಾರಣವಾದ ಕಾಲ್ತುಳಿತ ದುರಂತ–ಕ್ಕೆ ಸಂಬಂಧಿಸಿದಂತೆ ಇದೇ ಮೊದಲ ಬಾರಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪ್ರತಿಕ್ರಿಯೆ ನೀಡಿದ್ದು, ಈ ಕುರಿತು ಎಕ್ಸ್ ಖಾತೆಯನ್ನು ಪತ್ರಿಕಾ ಪ್ರಕಟಣೆ ಹೊರಡಿಸಿದೆ.

ಪ್ರಕಟಣೆಯಲ್ಲಿ, ಇಂದು ಮಧ್ಯಾಹ್ನ ತಂಡದ ಆಗಮನದ ನಿರೀಕ್ಷೆಯಲ್ಲಿ ಬೆಂಗಳೂರಿನಾದ್ಯಂತ ಸಾರ್ವಜನಿಕ ಸಭೆಗಳ ಕುರಿತು ಮಾಧ್ಯಮ ವರದಿಗಳ ಮೂಲಕ ಬೆಳಕಿಗೆ ಬಂದಿರುವ ದುರದೃಷ್ಟಕರ ಘಟನೆಗಳಿಂದ ನಾವು ತೀವ್ರ ದುಃಖಿತರಾಗಿದ್ದೇವೆ. ಎಲ್ಲರ ಸುರಕ್ಷತೆ ಮತ್ತು ಯೋಗಕ್ಷೇಮ ನಮಗೆ ಅತ್ಯಂತ ಮುಖ್ಯವಾಗಿದೆ. ಜೀವಹಾನಿಗೆ ಆರ್‌ಸಿಬಿ ಶೋಕ ವ್ಯಕಪಡಿಸುತದೆ ಮತ್ತು ಪೀಡಿತ ಕುಟುಂಬಗಳಿಗೆ ನಮ್ಮ ಸಂತಾಪವನ್ನು ವ್ಯಕ್ತಪಡಿಸುತ್ತೇವೆ ಎಂದು ಟ್ವೀಟ್ ಮಾಡಿದೆ. ಅಂತೆಯೇ, ಪರಿಸ್ಥಿತಿಯ ಬಗ್ಗೆ ತಿಳಿದ ತಕ್ಷಣ, ನಾವು ನಮ್ಮ ಕಾರ್ಯಕ್ರಮವನ್ನು ತ್ವರಿತವಾಗಿ ತಿದ್ದುಪಡಿ ಮಾಡಿದ್ದೇವೆ. ಸ್ಥಳೀಯ ಆಡಳಿತದ ಮಾರ್ಗದರ್ಶನ ಮತ್ತು ಸಲಹೆಯನ್ನು ಅನುಸರಿಸಿದ್ದೇವೆ. ದಯವಿಟ್ಟು ಸುರಕ್ಷಿತವಾಗಿರಲು ನಮ್ಮ ಎಲ್ಲಾ ಬೆಂಬಲಿಗರನ್ನು ನಾವು ಒತ್ತಾಯಿಸುತ್ತೇವೆ ಎಂದು ಮನವಿ ಮಾಡಿಕೊಂಡಿದೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ನೀವು ಒಂದು ಹೊಸ ವ್ಯಾಪಾರ ಪಾಲುದಾರಿಕೆಯನ್ನು ಪರಿಗಣಿಸುತ್ತಿದ್ದಲ್ಲಿ – ನೀವು ಯಾವುದೇ ಬದ್ಧತೆಯನ್ನು ಮಾಡುವ ಮೊದಲು ಎಲ್ಲಾ ಸತ್ಯಾಸತ್ಯತೆಗಳನ್ನು ಅರಿತುಕೊಳ್ಳುವುದು ಅಗತ್ಯ

### ವೃಷಭ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ

### ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ.

### ಕರ್ಕ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರುತ್ತದೆ.

### ಸಿಂಹ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು.

### ಕನ್ಯಾ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

### ತುಲಾ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

### ವೃಶ್ಚಿಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಧನು ರಾಶಿ

ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ. ತಮ್ಮ ಬಿಡುವಿನ ವೇಳೆಯಲ್ಲಿ ಈ ರೀತಿಯ ಚಟುವಟಿಕೆಗಳನ್ನು ಮಾಡಲು ಅವರಿಗೆ ಪ್ರೋತ್ಸಾಹಿಸಿ.

### ಮಕರ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು.

### ಕುಂಭ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ.

### ಮೀನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಸಹೋದ್ಯೋಗಿಗಳು ನಿಮಗೆ ಕೆಲಸದಲ್ಲಿ ಕ್ರಿಯಾತ್ಮಕ ಮತ್ತು ಪ್ರಗತಿಪರ ಬದಲಾವಣೆಯನ್ನು ಮಾಡಲು ಬೆಂಬಲಿಸುತ್ತಾರೆ.

# ನಾಲ್ವಡಿ ಕೃಷ್ಣರಾಜ ಒಡೆಯರ್ ನಾಡಿಗೆ ನೀಡಿದ ಕೊಡುಗೆಗಳು ಅಪಾರ ಡಾ. ಎನ್. ಕರಿಬಸಪ್ಪ



**ದಾವಣಗೆರೆ:** ಕನ್ನಡ ಸಾಹಿತ್ಯ ಪರಿಷತ್ತಿನ ಸ್ಥಾಪಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕನ್ನಡ ನಾಡಿಗೆ ನೀಡಿದ ಕೊಡುಗೆಗಳು ಅಸಂಖ್ಯಾತ ಹಾಗೂ ಅವಿಸ್ಮರಣೀಯವಾದುವುಗಳಾಗಿವೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರದ ಕನ್ನಡ ಸಹ ಪ್ರಾಧ್ಯಪಕರು ಆದ ಡಾ. ಎನ್. ಕರಿಬಸಪ್ಪ ಮಾತನಾಡಿದರು.

ಇಂದು ಸಂಜೆ ಕುವೆಂಪು ಕನ್ನಡ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 141 ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಕನ್ನಡ ನಾಡು ನುಡಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ನೀಡಿದ ಕೊಡುಗೆಗಳನ್ನು ಕುರಿತು ಉಪನ್ಯಾಸ ನೀಡಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ತಮ್ಮ ಆಡಳಿತಾವಧಿಯಲ್ಲಿ ಶಿಕ್ಷಣ, ಆರೋಗ್ಯ ಮತ್ತು ನೀರಾವರಿ ಯೋಜನೆಗಳಿಗೆ ಅತೀ ಹೆಚ್ಚಿನ ಮಹತ್ವ ನೀಡಿದರು. ವಿದೇಶಗಳಲ್ಲಿ ಲಭ್ಯವಿದ್ದಂತಹ ಸೌಲಭ್ಯಗಳನ್ನು ಕನ್ನಡನಾಡಿಗೆ ನೀಡಬೇಕೆಂಬುದು ಅವರ ಕನಸಾಗಿತ್ತು. ತಮ್ಮ ಆಡಳಿತದಲ್ಲಿ ಆಡಳಿತಾತ್ಮಕ ಬದಲಾವಣೆಗಳನ್ನು ತಂದು ನಾಡನ್ನು ಪ್ರಜಾಸತ್ತಾತ್ಮಕವಾಗಿ ಪರಿವರ್ತಿಸಬೇಕೆಂಬುದು ಅವರ ಆಶಯವಾಗಿತ್ತು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದೂರದರ್ಶಿತ್ವ ಚಿಂತನೆಯ ಫಲವಾಗಿ 1915 ರಲ್ಲಿ ಸ್ಥಾಪನೆಗೊಂಡ ಕನ್ನಡ ಸಾಹಿತ್ಯ ಪರಿಷತ್ತು ಇಂದು 110 ವರ್ಷಗಳ ಭವ್ಯವಾದ ಇತಿಹಾಸ ಮತ್ತು ಪರಂಪರೆಯನ್ನು ಹೊಂದಿದೆ. ಕನ್ನಡ ನಾಡು ನುಡಿಯ ಉನ್ನತಿಗಾಗಿ ವರ್ಷಪೂರ್ತಿ ಕೆಲಸ ಮಾಡುವ ಯಾವುದಾದರೂ ಸಂಸ್ಥೆ ಕನ್ನಡ ನಾಡಿನಲ್ಲಿ ಇದೆ ಅಂತಾದರೆ ಅದು ಕನ್ನಡ ಸಾಹಿತ್ಯ ಪರಿಷತ್ತು ಮಾತ್ರ. ಇಂತಹ ಸರ್ವ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯನ್ನು ಸ್ಥಾಪಿಸಿದವರು ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಸ್ಮರಿಸಿದರು.

ಕನ್ನಡ ನಾಡಿಗೆ ಕೆಆರ್‌ಎಸ್ ಅಣೆಕಟ್ಟು, ವಾಣಿ ವಿಲಾಸ ಸಾಗರ, ಶಿವನಸಮುದ್ರ ಜಲ ವಿದ್ಯುತ್ ಯೋಜನೆ, ಮೈಸೂರು ಬ್ಯಾಂಕ್, ಮೈಸೂರು ವಿಶ್ವವಿದ್ಯಾಲಯ, ಬೆಂಗಳೂರು ವಿಶ್ವವಿದ್ಯಾಲಯ, ಮೈಸೂರು ಮೆಡಿಕಲ್ ಕಾಲೇಜು, ನಿಮ್ಹಾನ್ಸ್ ಆಸ್ಪತ್ರೆ, ಮಿಂಟೋ ಆಸ್ಪತ್ರೆ ಮೊದಲಾದ ಹಲವಾರು ಶಾಶ್ವತ ಯೋಜನೆಗಳನ್ನು, ಕೊಡುಗೆಗಳನ್ನು ಕನ್ನಡ ನಾಡಿಗೆ ನೀಡುವ ಮೂಲಕ ಜನ ಸ್ನೇಹಿ ಆಡಳಿತವನ್ನು ನಡೆಸಿದ್ದರಿಂದ ಅವರ ಆಡಳಿತಾವಧಿಯು ಸುವರ್ಣ ಯುಗವೆಂದು ಕರೆಯಬಹುದು ಎಂದು ವಾಮದೇವಪ್ಪ ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಕಾರ ಭಾರತೀಯ ಜಿಲ್ಲಾಧ್ಯಕ್ಷ ಬಿ. ದಿಳ್ಳೆಪ್ಪ ಮತ್ತು ಭಾರತಾಂಜಲಿ ಅಕಾಡೆಮಿಯ ನಿರ್ದೇಶಕಿ ವಿದೂಷಿ ಡಾ. ಮಂಗಳಾ ಶೇಖರ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ದಾವಣಗೆರೆ ತಾಲ್ಲೂಕು ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ ಉಪಸ್ಥಿತರಿದ್ದು ಮಾತನಾಡಿದರು. ಜಿಲ್ಲಾ ಕಸಾಪ ಗೌರವ ಕೋಶಾಧ್ಯಕ್ಷ ಕೆ. ರಾಘವೇಂದ್ರ ನಾಯರಿ ಹಾಗೂ ಸತ್ಯಭಾಮಾ ಸನ್ಮಾನಿತರ ಅಭಿನಂದನಾ ನುಡಿಗಳನ್ನಾಡಿದರು.

ಆರಂಭದಲ್ಲಿ ವಿನೂತನ ಮಹಿಳಾ ಸಮಾಜದ ರೇಖಾ ಓಂಕಾರಪ್ಪ ಮತ್ತು ತಂಡದವರು ನಾಡಗೀತೆ ಮತ್ತು ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತಾದ ಸಾಧನಾ ಗೀತೆ ಹಾಡಿದರು. ಜಿಲ್ಲಾ ಕಸಾಪ ಸಂಘಟನಾ ಕಾರ್ಯದರ್ಶಿ ಜಿಗಳಿ ಪ್ರಕಾಶ್ ಸ್ವಾಗತಿಸಿದರು. ನಿರ್ದೇಶಕ ಬಿ.ಎಂ. ಭೈರೇಶ್ ವಂದಿಸಿದರು. ಸಂಘಟನಾ ಕಾರ್ಯದರ್ಶಿ ಸಿ. ಜಿ. ಜಗದೀಶ್ ಕೂಲಂಬಿ ಕಾರ್ಯಕ್ರಮ ನಿರೂಪಿಸಿ ಆಶಯ ನುಡಿಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಭಾರತಾಂಜಲಿ ಅಕಾಡೆಮಿಯ ಮಕ್ಕಳು ನೃತ್ಯ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾ ಸಾ ಪ ನಿರ್ದೇಶಕರಾದ ರುದ್ರಾಕ್ಷಿಬಾಯಿ ಪುಟ್ಟನಾಯಕ್ , ಎಸ್ ಎಂ ಮಲ್ಲಮ್ಮ, ತಾಲ್ಲೂಕು ಕ ಸಾ ಪ ನಿರ್ದೇಶಕರಾದ ಷಡಕ್ಷರಪ್ಪ ಎಂ ಬೇತೂರು, ಶಿವಕುಮಾರ್ ಆರ್, ವೀಣಾ ಕೃಷ್ಣಮೂರ್ತಿ,ದಾಗಿನಕಟ್ಟೆ ಪರಮೇಶಪ್ಪ ಹಾಗೂ ಉಪನ್ಯಾಸಕ ಜಿ ಆರ್ ರೇವಣಸಿದ್ದಪ್ಪ,ಸರ್ಕಾರಿ ನೌಕರರ ಮಾಜಿ ಅಧ್ಯಕ್ಷ ಕೆ ಶಿವಶಂಕರ, ಸಿಂಗಾಪುರದ ಎ ಪರಮೇಶ್ವರಪ್ಪ, ಗೋಪಾನಾಳ್ ಕರಿಬಸಪ್ಪ,ಶ್ರೀಮತಿ ಶೈಲಜಾ ಮತ್ತಿತರರು ಉಪಸ್ಥಿತರಿದ್ದರು.

## ಕಾಗದರಹಿತ ಸೇವೆ ಉತ್ತೇಜಿಸಲು ಲ್ಯಾಪ್‌ಟಾಪ್ ವಿತರಣೆ: ತಮ್ಮಯ್ಯ



**ಚಿಕ್ಕಮಗಳೂರು:** ಸರ್ಕಾರ ಪೇಪರ್‌ಲೆಸ್ ಸೇವೆ ಉತ್ತೇಜಿಸುವಉದ್ದೇಶದೊಂದಿಗೆರಾಜ್ಯದಕಂದಾಯ ಇಲಾಖೆ ಅಧಿಕಾರಿಗಳಿಗೆ ಅನುಕೂಲವಾಗುವಂತೆ ಲ್ಯಾಪ್‌ಟಾಪ್ ವಿತರಣೆಗೆ ಮುಂದಾಗಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರುಇಂದುಇಲ್ಲಿನತಾಲ್ಲೂಕುಕಚೇರಿಯಲ್ಲಿಏರ್ಪಡಿಸಲಾಗಿದ್ದ ಲ್ಯಾಪ್‌ಟಾಪ್ ವಿತರಣಾಕಾರ್ಯಕ್ರಮದಲ್ಲಿಕಂದಾಯ ಇಲಾಖೆ ಅಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದರು.

ಲ್ಯಾಪ್‌ಟಾಪ್ ಪಡೆದುಕೊಂಡಕಂದಾಯ ಇಲಾಖೆ ಅಧಿಕಾರಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು, ಬೇರೆಯವರಿಗೆ ಲ್ಯಾಪ್‌ಟಾಪ್‌ಕೊಡುವ ಮೂಲಕ ಸರ್ಕಾರದಅಗತ್ಯ ಮಾಹಿತಿಗಳು ಸೋರಿಕೆಯಾಗದಂತೆ ಮುಂಜಾಗ್ರತಾಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಇದೂವರೆಗೆಗ್ರಾಮ ಲೆಕ್ಕಾಧಿಕಾರಿಗಳು ಮೊಬೈಲ್‌ನಲ್ಲಿದಾಖಲೆ ಪತ್ರಗಳನ್ನು ಸಿದ್ಧಪಡಿಸುವ ಮೂಲಕ ಸೇವೆ ಸಲ್ಲಿಸುತ್ತಿದ್ದರು. ಇದನ್ನರಿತಕಂದಾಯ ಸಚಿವಕೃಷ್ಣಭೈರೇಗೌಡ ಹಾಗೂ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರಕುಮಾರ್‌ಕಠಾರಿಯಾ ಅವರುಗಳು ಚರ್ಚಿಸಿ ರಾಜ್ಯದಎಲ್ಲಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಿಲು ನಿರ್ಧರಿಸಿದ್ದಾರೆ ಎಂದರು.

ಪ್ರತೀ ಲ್ಯಾಪ್‌ಟಾಪ್‌ಗೆ 40 ಸಾವಿರರೂ ವೆಚ್ಚವಾಗುತ್ತಿದ್ದು, ಈಗಾಗಲೇ ಕಂದಾಯಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಜಿಲ್ಲಾ ಅಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಶೀಲ್ದಾರ್, ಗ್ರಾಮ ಲೆಕ್ಕಾಧಿಕಾರಿಗಳು, ಗ್ರಾಮ ಸಹಾಯಕರಿಗೆಒತ್ತಡವನ್ನು ಮುಕ್ತಗೊಳಿಸುವ ಗುರಿಯೊಂದಿಗೆ ಸರ್ಕಾರ ಈ ಸೌಲಭ್ಯ ನೀಡಲು ಮುಂದಾಗಿದೆಎಂದರು.

ಲ್ಯಾಪ್‌ಟಾಪ್ ಪಡೆದುಕೊಂಡಎಲ್ಲಾಕಂದಾಯ ಇಲಾಖೆ ಅಧಿಕಾರಿಗಳು ರಾಜ್ಯಕಂದಾಯ ಇಲಾಖೆಗೆ ಜಿಲ್ಲೆಯ ಸಮಗ್ರ ಮಾಹಿತಿಯನ್ನು ನೀಡುವುದರಜೊತೆಗೆ ಸಾರ್ವಜನಿಕರಿಗೆ, ಬಡವರಿಗೆ ಸರಳವಾಗಿ ಉತ್ತಮರೀತಿಯಲ್ಲಿ ಸೇವೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ತಹಶೀಲ್ದಾರ್ ರೇಷ್ಮಾ ಮಾತನಾಡಿ, ಕಂದಾಯ ಇಲಾಖೆಗೆ ಸಂಬಂಧಿಸಿದ ಬಗರ್ ಹುಕ್ಕುಂ, 1–5 ಸೇರಿದಂತೆಎಲ್ಲಾರೀತಿಯ ಯೋಜನೆಗಳನ್ನು ಲ್ಯಾಪ್‌ಟಾಪ್‌ನಲ್ಲಿದಾಖಲು ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಇದೂವರೆಗೆಇಲಾಖೆಯಲ್ಲಿ ಮೂಲ ಸೌಕರ್ಯವಿಲ್ಲ, ನೆಟ್‌ವರ್ಕ್ ಸಿಗಲ್ಲ ಎಂಬಿತ್ಯಾದಿ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಿ ಲ್ಯಾಪ್‌ಟಾಪ್ ವಿತರಿಸಲಾಗಿದ್ದು, ಇದರಿಂದಗ್ರಾಮ ಲೆಕ್ಕಾಧಿಕಾರಿಗಳಿಗೆ ಅನುಕೂಲವಾಗಲಿದೆಎಂದರು.

ಒಟ್ಟು 44 ಗ್ರಾಮ ಲೆಕ್ಕಾಧಿಕಾರಿಗಳಿದ್ದು, ಇದರಲ್ಲಿಅವಶ್ಯಕತೆಗನುಗುಣವಾಗಿ 34 ಜನರ ಪಟ್ಟಿ ಮಾಡಿದ್ದು, ಶಾಸಕ ಹೆಚ್.ಡಿ.ತಮ್ಮಯ್ಯ ನೇತೃತ್ವದಲ್ಲಿ ವಿತರಣೆ ಮಾಡಿದ್ದೇವೆಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿರಸ್ತೇದಾರ್ ಪ್ರಸನ್ನ, ಕಂದಾಯಇಲಾಖೆಯರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳು ಮತ್ತಿತರರು ಭಾಗವಹಿಸಿದ್ದರು.

## ಅಧಿಕಾರಿಗಳು ಸರ್ಕಾರಿ ಯೋಜನೆಗಳನ್ನು ಜನರಿಗೆ ತಲುಪಿಸಿ : ಶಾರದಾ ರ‍್ಯನಾಯ್ಕ



**ಶಿವಮೊಗ್ಗ:** ಸರ್ಕಾರದ ಯೋಜನೆಗಳನ್ನು ಅಧಿಕಾರಿಗಳು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು. ಯೋಜನೆಗಳ ಬಗ್ಗೆ ಸರಿಯಾದ ಮಾಹಿತಿ ನೀಡಬೇಕು. ಇದರಿಂದ ಸರ್ಕಾರಿ ಯೋಜನೆಯ ಅನುಕೂಲ ಪಡೆದುಕೊಳ್ಳಲು ಜನರಿಗೆ ಸಹಕಾರಿಯಾಗುತ್ತದೆ ಎಂದು ಶಾಸಕರಾದ ಶಾರದಾ ಪೂರ್ಯನಾಯ್ಕ್ ತಿಳಿಸಿದರು.

ಬುಧವಾರ ನಗರದ ತಾಲ್ಲೂಕು ಕಾರ್ಯಾಲಯದಲ್ಲಿ ಏರ್ಪಡಿಸಿದ್ದ 2024–25 ನೇ ಸಾಲಿನ ಮೂರನೇ ಮತ್ತು ನಾಲ್ಕನೇ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕುಗಳಲ್ಲಿ ನಾಯಿ ಕಡಿತ, ಡೆಂಗ್ಯೂ ಕಾಯಿಲೆಗಳಿಗೆ ಔಷಧಿಯ ಕೊರತೆ ಇದ್ದು, ಅದರ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕಿದೆ. ಹೊಳಲೂರು,

ಆಯನೂರು ಸೇರಿದಂತೆ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಚ್ಚು ಈ ಪ್ರಕರಣಗಳು ಗಮನಕ್ಕೆ ಬಂದಿದ್ದು, ಸಾರ್ವಜನಿಕರಿಗೆ ಸರಿಯಾದ ಕ್ರಮದಲ್ಲಿ ಚಿಕಿತ್ಸೆ ಹಾಗೂ ಔಷಧಿ ಸೌಲಭ್ಯವನ್ನು ದೊರಕುವಂತೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಗ್ರಾಮಗಳ ಜನರಿಗೆ ಖಾಸಗಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಲು ಆಗುವುದಿಲ್ಲ. ಆದ್ದರಿಂದ ಅವರೆಲ್ಲಾ ಸರ್ಕಾರಿ ಆಸ್ಪತ್ರೆಯನ್ನು ಅವಲಂಬಿಸಿದ್ದಾರೆ. ಅವರ ಆರೋಗ್ಯದ ಜವಾಬ್ದಾರಿ ನಮ್ಮೆಲ್ಲರದ್ದಾಗಿದ್ದು ತಾಲ್ಲೂಕು ಆರೋಗ್ಯ ಅಧಿಕಾರಿಗಳು ಇದರ ಬಗ್ಗೆ ಹೆಚ್ಚಿನ ಗಮನ ಹರಿಸಿ ಕಾರ್ಯೋನ್ಮುಖರಾಗಬೇಕೆಂದು ಸೂಚನೆ ನೀಡಿದರು. ಈ ಬಾರಿಯ ಮಳೆಯಿಂದ ರೈತರಿಗೆ ಅನಕೂಲಕರವಾದ ವಾತಾವರಣವು ನಿರ್ಮಾಣವಾಗಿದೆ. ಉತ್ತಮ ಮಳೆಯಿಂದ ರೈತರಿಗೆ ಬಿತ್ತನೆ ಕೆಲಸದಲ್ಲಿ ಯಾವುದೇ ಸಮಸ್ಯೆಗಳು ಉಂಟಾಗುವುದಿಲ್ಲ. ಭತ್ತ, ಮುಸುಕಿನ ಜೋಳ, ಅಡಿಕೆಯಂತಹ ಬೆಳೆಗಳನ್ನು ಬೆಳೆಯಲು ಸಹಕಾರಿಯಾಗುತ್ತದೆ. ಕೃಷಿ ಇಲಾಖೆಯು ಬೆಳೆಗಳಿಗೆ ಬಳಸಲಾಗುವ ಗೊಬ್ಬರದ ಬಗ್ಗೆ ರೈತರಿಗೆ ಮಾಹಿತಿಯನ್ನು ನೀಡಬೇಕು. ರೈತ ಸಂಪರ್ಕ ಕೇಂದ್ರಗಳು ಜನವಸತಿ ಬಳಿ ಇದರ ಬಗ್ಗೆ ಹೆಚ್ಚು ಪ್ರಚಾರ ಮಾಡಬೇಕು. ಇದರಿಂದ ರೈತರಿಗೆ ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಹಣ್ಣು, ತರಕಾರಿ ಮಾರಾಟ ಮಾಡುವ ವ್ಯಾಪಾರಿಗಳು ಎಪಿಎಂಸಿ ಅಡಿಯಲ್ಲಿ ಬರುತ್ತಾರೆ. ಆದರೆ ಬೀದಿಬದಿ ವ್ಯಾಪಾರಿಗಳು ಯಾಕೆ ಬರುವುದಿಲ್ಲ. ಈ ಬಗ್ಗೆ ಸಂಪೂರ್ಣವಾಗಿ ಮಾಹಿತಿ ನೀಡಬೇಕು ಎಂದು ಎಪಿಎಂಸಿ

ಕಾರ್ಯದರ್ಶಿಗೆ ತಿಳಿಸಿದ ಅವರು, ಕೆಲ ಹಳ್ಳಿಗಳಲ್ಲಿ ರೈತರಿಗೆ ರಸ್ತೆ ಸಂಪರ್ಕ ಸಮರ್ಪಕವಾಗಿಲ್ಲ, ಇದರಿಂದ ರೈತರಿಗೆ ಸಮಸ್ಯೆಗಳು ಉಂಟಾಗುತ್ತಿದೆ. ಆದಷ್ಟು ಬೇಗ ಈ ಸಮಸ್ಯೆಗೆ ಶಾಶ್ವತ ಪರಿಹಾರ ಮಾಡಿ ರೈತರ ಓಡಾಟಕ್ಕೆ ಅನುಕೂಲ ಮಾಡಿಕೊಡಿ ಎಂದರು.

ಸಭೆಯಲ್ಲಿ ತಾಲ್ಲೂಕು ಕೆಡಿಪಿ ನಾಮ ನಿರ್ದೇಶಿತ ಸದಸ್ಯರುಗಳಾದ ಶಿವಾನಂದಪ್ಪ, ಹೆಚ್.ಪಿ.ರುದ್ರೇಶ್, ಶಿವಕುಮಾರ್, ಜಯಕೀರ್ತಿ, ಗೀತಾ, ತಾಲ್ಲೂಕು ಆಡಳಿತಾಧಿಕಾರಿ ನಂದಿನಿ, ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿ ಎನ್. ತಾರಾ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

### ಮೆಗ್ಗಾನ್ ಆಸ್ಪತ್ರೆ ಆವರಣದಲ್ಲಿ ಉಚಿತ ಅನ್ನದಾನ

## ಹಸಿದವರಿಗೆ ಮಾತ್ರ ಗೊತ್ತು ಅನ್ನದ ಅಗುಳಿನ ಮಹತ್ವ



**ಶಿವಮೊಗ್ಗ:** ಅನ್ನ ಮನುಷ್ಯನ ಜೀವಧಾತು. ಅನ್ನದ ಬಗ್ಗೆ ಅಹಂಕಾರ ಸಲ್ಲದು. ಅನ್ನದ ಅಗುಳಿನ ಮಹತ್ವ ಹಸಿದವನಿಗೆ ಚೆನ್ನಾಗಿ ತಿಳಿದಿರುತ್ತದೆ. ಅನ್ನ ಪರಬ್ರಹ್ಮ. ಬದುಕಿಗೆ ನೀಡುವಷ್ಟೇ ಪ್ರಾಧಾನ್ಯತೆಯನ್ನು ಅನ್ನಕ್ಕೂ ನೀಡಬೇಕೆಂದು ಜೋತಿಷ್ಯ ಪ್ರಾಜ್ಞೆ, ವಾಸ್ತು ಪ್ರವೀಣೆ ಶ್ವೇತಾ ಶಿಕಾರಿಪುರ ಹೇಳಿದರು.

ನವ್ಯಶ್ರೀ ಈಶ್ವರವನ ಚಾರಿಟೆಬಲ್ ಟ್ರಸ್ಟ್ ಮತ್ತು ಯೂನಿವರ್ಸಲ್ ನಾಲೆಡ್ಜ್ ಸಹಯೋಗದಲ್ಲಿ 03/06/2025 ಮಂಗಳವಾರ ಮಧ್ಯಾಹ್ನ ಒಂದು ಗಂಟೆಗೆ ನಗರದ ಮೆಗ್ಗಾನ್ ಆಸ್ಪತ್ರೆ ಆವರಣದಲ್ಲಿ ನಡೆದ 59ನೇ ಉಚಿತ ಅನ್ನದಾನ ಕಾರ್ಯಕ್ರಮದಲ್ಲಿ ಕೃಷಿಕರು, ಕಾಂಡಿಮೆಂಟ್ಸ್ ವ್ಯಾಪಾರಿಗಳೂ ಆದ ಸುಬ್ರಹ್ಮಣ್ಯ ಎಸ್. ಇವರ ಅರವತ್ತನೇ ಹುಟ್ಟುಹಬ್ಬದ ಪ್ರಯುಕ್ತ ಸಿಹಿಯೂಟ ವಿತರಣಾ ಸೇವೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಅನ್ನದ ಒಂದು ಅಗುಳಿನ ಉಳಿತಾಯ ನೂರು ಅಗುಳಿನ ಉತ್ಪಾದನೆಗಿಂತಲೂ ಮಹತ್ವದ್ದು ಎಂಬುದನ್ನು ಎಲ್ಲರೂ ಅರಿಯಬೇಕು. ನಾಲ್ಕು ಅಗುಳು ಕಡಿಮೆ ತಿಂದರೂ ಪರವಾಗಿಲ್ಲ, ಹತ್ತು ಅಗುಳು ಹಾಳಾಗದಂತೆ ನೋಡಿಕೊಳ್ಳಬೇಕು. ಆಹಾರವನ್ನು ವ್ಯರ್ಥ ಮಾಡಿ ಮಾಡಬಾರದು ಎಂದರು.

ಅತ್ಯಂತ ಶ್ರೇಷ್ಠ ದಾನಗಳಲ್ಲಿ ಅನ್ನದಾನ ಸಹ ಒಂದು. ಮನುಷ್ಯನಿಗೆ ಧನ, ಕನಕ, ಆಸ್ತಿ ಅಥವಾ ಮತ್ತಿನ್ಯಾವ ಸಂಪತ್ತನ್ನು ದಾನವಾಗಿ ನೀಡಿದರೂ ಸಂತೃಪ್ತಿ ಪಡಿಸಲು ಸಾಧ್ಯವಿಲ್ಲ. ಇನ್ನಷ್ಟು ಬೇಕು, ಮತ್ತಷ್ಟು ಸಿಕ್ಕಿದ್ದರೆ ಚೆನ್ನಾಗಿತ್ತು ಎಂಬ ಲಾಲಸೆ ಸಹಜ. ಆದರೆ ಹಸಿದವನಿಗೆ ಅನ್ನವನ್ನು ಹೊಟ್ಟೆ ತುಂಬಾ ನೀಡಿದರೆ ಆತ ಸಂತೃಪ್ತನಾಗುತ್ತಾನೆ. ಹೊಟ್ಟೆ ತುಂಬಿದ ನಂತರ ತಿನ್ನಲು ಮತ್ತಷ್ಟು ಅನ್ನ ನೀಡಿದರೂ ಆತ ಅದನ್ನು ಸೇವಿಸುವುದಿಲ್ಲ ಎಂದು ತಿಳಿಸಿದರು.

ಮನುಷ್ಯನ ಹಸಿವಿನ ಪ್ರಮಾಣವು ಆಹಾರದ ರುಚಿ ಮತ್ತು ಮೌಲ್ಯವನ್ನು ಹೆಚ್ಚಿಸುತ್ತದೆ. ಮನೆಯಲ್ಲಾಗಲಿ ಅಥವಾ ಮದುವೆ, ಗೃಹ ಪ್ರವೇಶ ಮತ್ತಿತರೆ ಮಂಗಳ ಕಾರ್ಯಗಳಲ್ಲಿ ನಮಗೆ ಎಷ್ಟು ಬೇಕೋ ಅಷ್ಟು ಆಹಾರವನ್ನು ಮಾತ್ರ ಬಡಿಸಿಕೊಳ್ಳಬೇಕು. ಹೆಚ್ಚು ಆಹಾರವನ್ನು ಬಡಿಸಿಕೊಂಡು ತಿನ್ನದೆ ವ್ಯರ್ಥ ಮಾಡಬಾರದು ಎಂದು ಹೇಳಿದರು.

ಅನ್ನವನ್ನು ತಿನ್ನುವ ಹಕ್ಕಿದೆಯೇ ವಿನಾ ಅದನ್ನು ಬಿಸಾಡುವ ಹಕ್ಕಿಲ್ಲ. ನಾವು ತಿನ್ನುವ ಪ್ರತಿಯೊಂದು ಅಗುಳಿನ ಮೇಲೂ ಅದನ್ನು ತಿನ್ನುವವನ ಹೆಸರು ಬರೆದಿರುತ್ತದೆ ಎಂಬ ಮಾತು ಜನಜನಿತ. ಸಮಾರಂಭಗಳಲ್ಲಿ ಮನುಷ್ಯನ ಹೊಟ್ಟೆ ಸೇರಬೇಕಾದ ಅನ್ನ ಸ್ವೇಚ್ಛಾಚಾರ, ಆಡಂಬರ, ತೋರ್ಪಡಿಕೆಯಿಂದಾಗಿ ಕಸದ ಬುಟ್ಟಿ ಸೇರುತ್ತಿದೆ ಎಂದು ವಿಷಾಧಿಸಿದರು.

ಎಲ್ಲಾ ಮಾನವರ ಮೂಲಭೂತ ಅವಶ್ಯಕತೆ ಅನ್ನ. ಈ ವಿಶ್ವದ ಉತ್ಪತ್ತಿ ಮತ್ತು ಬೆಳವಣಿಗೆ ಅನ್ನವನ್ನು ಆಧರಿಸಿದೆ. ವೇದಗಳಲ್ಲಿ ಹೇಳಿದಂತೆ ಹಸಿದವರಿಗೆ ಮಾಡುವ ಅನ್ನ ದಾನದಿಂದ ಪುಣ್ಯಲೋಕ ಪ್ರಾಪ್ತಿಯಾಗುವುದು. ಸಕಲ ಜೀವ ರಾಶಿಗಳಿಗೆ ಶಕ್ತಿಯನ್ನು ಕೊಡುವುದೇ ಅನ್ನ. ಅದಕ್ಕಾಗಿಯೇ ಶಂಕರಾಚಾರ್ಯರು ಶಕ್ತಿ ಸ್ವರೂಪಿಣಿಯಾದ ಜಗನ್ಮಾತೆಯನ್ನು "ಅನ್ನಪೂರ್ಣೇ ಸದಾಪೂರ್ಣೇ ಶಂಕರ ಪ್ರಾಣವಲ್ಲಭೇ ಎಂದು ಸ್ತುತಿಸಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುನ್ನೂರಕ್ಕೂ ಹೆಚ್ಚು ಮಂದಿಗೆ ಊಟ ವಿತರಿಸಲಾಯಿತು. ನವ್ಯಶ್ರೀ ಈಶ್ವರವನ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ನವ್ಯಶ್ರೀ ನಾಗೇಶ್, ನಾಗರಾಜ್ ಶೆಟ್ಟರ್, ಸುಬ್ರಹ್ಮಣ್ಯ ಎಸ್., ಜ್ಯೋತಿ, ಪ್ರದೀಪ್ ಪಿ., ದಿನೇಶ್ ಬಾಬು, ಬಾಲಚಂದ್ರ ಎಂ.ಕೆ., ಮನೋಹರ ವಿಜಾಪುರ ಮತ್ತಿತರರು ಭಾಗವಹಿಸಿದ್ದರು.

## ಭದ್ರಾವತಿ: ವಿದ್ಯಾರ್ಥಿವೇತನ ಪಡೆಯಲು ಒನ್ ಟೈಂ ರಿಜಿಸ್ಟ್ರೇಷನ್ ಸಂಖ್ಯೆ ಕಡ್ಡಾಯ

**ಶಿವಮೊಗ್ಗ** : ಭದ್ರಾವತಿ ಸಮಾಜ ಕಲ್ಯಾಣ ಇಲಾಖೆಯು 2025–26ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಡೆಯಲು ಭಾರತ ಸರ್ಕಾರದ ಮಿನಿಸ್ಟ್ರೀ ಆಫ್ ಎಲೆಕ್ಟ್ರಾನಿಕ್ ಆಂಡ್ ಇನ್ಫರ್ಮೇಷನ್ ಟೆಕ್ನಾಲಜಿರವರು ಅಭಿವೃದ್ಧಿ ಪಡಿಸಿರುವ ನ್ಯಾಷನಲ್ ಸ್ಕಾಲರ್‌ಷಿಪ್ ಪೋರ್ಟಲ್‌ನಲ್ಲಿ ಒನ್ ಟೈಂ ರಿಜಿಸ್ಟ್ರೇಷನ್ ಸಂಖ್ಯೆಯನ್ನು ಪಡೆದು, ನಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಬೇಕಾಗಿದ್ದು, ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳು ವೆಬ್‌ಸೈಟ್ https://scholarships.gov.in ರಲ್ಲಿ ಒನ್ ಟೈಂ ರಿಜಿಸ್ಟ್ರೇಷನ್ ಸಂಖ್ಯೆಯನ್ನು ಪಡೆಯುವಂತೆ ಭದ್ರಾವತಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.


**ಜಗಳೂರು ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯದಲ್ಲಿ**

**ಸಿ.ಆರ್.ಮಿಸ್ ನಂ: 470/2025**

**ಅರ್ಜಿದಾರರು:** 1) ನಾಗರಾಜಪ್ಪ ಬಿನ್ ಚನ್ನಬಸಪ್ಪ, ವಯಸ್ಸು ಸುಮಾರು 65 ವರ್ಷ,ವ್ಯವಸಾಯ ಗುತ್ತಿದುರ್ಗ ಗ್ರಾಮ. ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ. 2) ಚನ್ನಮ್ಮ ಬಿನ್ ಚನ್ನಬಸಪ್ಪ, ವಯಸ್ಸು ಸುಮಾರು 63 ವರ್ಷ, ವ್ಯವಸಾಯ ಹುಲ್ಲೂರು ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ 3) ಕಲ್ಲಮ್ಮ ಕೋಂ ಷಣ್ಮುಖಪ್ಪ, ಬಿನ್ ಚನ್ನಬಸಪ್ಪ ವಯಸ್ಸು ಸುಮಾರು 60 ವರ್ಷ, ವ್ಯವಸಾಯ ಜಮ್ಮಾಪುರ ಗ್ರಾಮದ ವಾಸಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್ ರವರ ಮತ್ತು ಜನನ ಮರಣ ನೋಂದಣಾಧಿಕಾರಿಗಳು. ಜಗಳೂರು ತಾಲ್ಲೂಕು. ದಾವಣಗೆರೆ ಜಿಲ್ಲೆ.

**ಸಾರ್ವಜನಿಕ ಪ್ರಕಟಣೆ**

ಮೇಲ್ಕಂಡ ಅರ್ಜಿದಾರರು ಎದುರುದಾರರ ವಿರುದ್ಧ ಘನ ನ್ಯಾಯಾಲಯದಲ್ಲಿ ತಂದೆಯವರಾದ **ಚನ್ನಬಸಪ್ಪ ಬಿನ್ ಕಲ್ಲಪ್ಪ** ಇವರು **ದಿನಾಂಕ: 15–12–1995** ರಂದು ಜಗಳೂರು – ತಾಲ್ಲೂಕು ಬಿಳಿಚೋಡು ಹೋಬಳಿ, ಗುತ್ತಿದುರ್ಗ ಗ್ರಾಮದಲ್ಲಿ ಮರಣ ಹೊಂದಿದ್ದು, ಸದರಿ ಮೃತರ ಮರಣ ಪ್ರಮಾಣ ಪತ್ರವನ್ನು ಕೋರಿ ಎದುರುದಾರರ ವಿರುದ್ಧ ಅರ್ಜಿಯನ್ನು ಘನ – ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಸದರಿ ಅರ್ಜಿಗೆ ಸಂಬಂಧಿಸಿದಂತೆ ಮೇಲ್ಕಂಡ ಎದುರುದಾರರನ್ನು ಒಟ್ಟು ಬೇರೆ ಯಾರದರೂ ವಾರಸುದಾರರು ಇದ್ದರೆ ಅಥವಾ ಬೇರೆ ಯಾರಿಗಾದರೂ ತಂಟೆ ತಕರಾರುಗಳು ಏನಾದರೂ ಇದ್ದಲ್ಲಿ ದಿನಾಂಕ: 10. 07 .2025 ರಂದು ಪೂರ್ವಹ್ನ 11–00 ಗಂಟೆಗೆ ಖುದ್ದಾಗಿಯಾಗಲೀ ಅಥವಾ ವಕೀಲರ ಮೂಲಕವಾಗಲೀ ಘನ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ – ಲಿಖಿತ ತಕರಾರು / ಆಕ್ಷೇಪಣೆಗಳು ಏನಾದರೂ ಇದ್ದರೆ ಸಲ್ಲಿಸತಕ್ಕದ್ದು, ತಪ್ಪಿದ ಪಕ್ಷದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಗೈರು ಹಾಜರಿಯಲ್ಲಿ ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಮುದ್ರೆ ನನ್ನ ಸಹಿಯೊಂದಿಗೆ ದಿನಾಂಕ: 03–06 2025ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರುಗಳ ಪರ ವಕೀಲರು
(ಶ್ರೀ. ವೇದಮೂರ್ತಿ ಜಿ.ಎಂ)
ವಕೀಲರು ಜಗಳೂರು

ಸಹಿ/–
ಶಿರಸ್ತೇದಾರರು
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಾ ದಂಡಧಿಕಾರಿಗಳು
ನ್ಯಾಯಾಲಯ ಜಗಳೂರು .

# ಎಲ್‌ಕೆಜಿ-ಯುಕೆಜಿ ತರಗತಿ ಪ್ರಾರಂಭ ಶ್ಲಾಘನೀಯ : ನಯನ

**ಚಿಕ್ಕಮಗಳೂರು:** ಗ್ರಾಮೀಣ ಮಟ್ಟದ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಮಾದರಿಯ ತರಗತಿಗಳನ್ನು ತೆರೆದು ಪೌಷ್ಠಿಕ ಆಹಾರ ಮತ್ತು ಗುಣಮಟ್ಟದ ಶಿಕ್ಷಣ ಪೂರೈಸುತ್ತಿರುವುದು ಶ್ಲಾಘನೀಯ ಎಂದು ಮೂಡಿಗೆರೆ ಶಾಸಕಿ ನಯನ ಮೋಟಮ್ಮ ಹೇಳಿದರು.

ತಾಲ್ಲೂಕಿನ ಮುಗುಳುವಳ್ಳಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದಾನಿಗಳು, ಸ್ಥಳೀಯರು ಹಾಗೂ ಶಾಲಾಡಳಿತ ಸಹಕಾರದಿಂದ 2025-26 ನೇ ಸಾಲಿನ ಆಂಗ್ಲ ಮತ್ತು ಕನ್ನಡಮಾಧ್ಯಮ ಎಲ್‌ಕೆಜಿ-ಯುಕೆಜಿ ತರಗತಿಗಳಿಗೆ ಗುರುವಾರ ಚಾಲನೆ ನೀಡಿ ಅವರು ಮಾತನಾಡಿದರು.

ಪಾಲಕರ ಆಶಯದಂತೆ ಗ್ರಾಮೀಣ ಭಾಗದಲ್ಲೂ ಎಲ್‌ಕೆಜಿ-ಯುಕೆಜಿ ತರಗತಿ ತೆರೆದು ಹೆಜ್ಜೆಯಿಟ್ಟಿರುವ ಮುಗುಳುವಳ್ಳಿ ಶಾಲೆ ಮೆಚ್ಚುವಂತ ಕೆಲಸ. ಎಳೆವಯಸ್ಸಿನಲ್ಲಿ ಮಕ್ಕಳನ್ನು ತಿದ್ದುವ ಮಹಾತ್ತರ ಕಾರ್ಯ ಶಿಕ್ಷಕರ ಮೇಲಿರುವ ಕಾರಣ ಹೆಚ್ಚಿನ ಜವಾಬ್ದಾರಿಯನ್ನು ಶಾಲಾಡಳಿತ ವಹಿಸಬೇಕು ಎಂದು ಸೂಚಿಸಿದರು.

ಪ್ರಸ್ತುತ ಅಂಗನವಾಡಿ ಕೇಂದ್ರಗಳಲ್ಲಿ ಪುಟ್ಟ ಮಕ್ಕಳ ಆರೈಕೆ ಮಾಡಲಾಗುತ್ತಿದೆ. ಕಾಲಕ್ರಮೇಣ ಖಾಸಗೀ ಶಾಲೆಗಳು ಬೆಳೆದಂತೆ ಪ್ರತಿ ತರಗತಿಗಳನ್ನು ಪ್ರಾರಂಭಿಸುತ್ತಿರುವ ಕಾರಣ ಸರ್ಕಾರಿ ಶಾಲೆಗಳನ್ನು ಕ್ಷೀಣಿಸಲಾರ ಂಭಿಸಿದವು. ಇದೀಗ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ-ಯುಕೆಜಿ ತೆರೆದು ಶಾಲೆಗಳನ್ನು ಉಳಿಸುವಂಥ ಕೆಲಸ ಸ್ಥಳೀಯರು ಮಾಡಿರುವುದು ಹೆಮ್ಮೆಯ ಸಂಗತಿ ಎಂದರು.




ರಾಜ್ಯಸರ್ಕಾರ ಕಳೆದ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ-ಯುಜಿಕೆ ಆರಂಭಿಕವಾಗಿ ತೆರೆದು ಯಶಸ್ವಿಗೊಂಡಿತು. ಈ ಸಾಲಿನಲ್ಲಿ ತರಗತಿ ತೆರೆಯಲು ಪ್ರಕ್ರಿಯೆಯಲ್ಲಿದ್ದು ಸದ್ಯದಲ್ಲೇ ಸಂಬಂಧಿಸಿದ ಸಚಿವ ರೊಂದಿಗೆ ಭೇಟಿ ಮಾಡಿ ಗ್ರಾಮೀಣ ಬಡಮಕ್ಕಳಿಗೆ ಖಾಸಗೀ ಶಾಲೆಗಳಂತೆ ಎಲ್ಲಾ ಸೌಕರ್ಯಗಳನ್ನು ಒದಗಿ ಸುವುದಾಗಿ ಭರವಸೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಹಾಗೂ ಪರಿಸರವನ್ನು ಅಚ್ಚುಕಟ್ಟಾಗಿರಬೇಕು. ಮಕ್ಕಳಿಗೆ ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು. ಮನುಷ್ಯನಿಗೆ ಶಿಕ್ಷಣವಿಲ್ಲದಿದ್ದರೆ ಯಾರು ಬೇಕಾದರೂ ಯ ಮಾರಿಸಬಹುದು. ಶಿಕ್ಷಣವೆಂಬ ದೊಡ್ಡಅಸ್ತ್ರ ಕೈಯಲಿದ್ದಾರೆ ದಾರಿತಪ್ಪಿಸಲು ಸಾಧ್ಯವಿಲ್ಲ. ಹೀಗಾಗಿ ಮಕ್ಕಳು ವಿದ್ಯಾವಂತರಾಗಬೇಕು ಎಂದು ಕಿವಿಮಾತು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಸಿ.ರವೀಶ್ ಮಾತನಾಡಿ ತಾಲ್ಲೂಕಿನಲ್ಲಿ ಸುಮಾರು 27 ಶಾಲೆಗಳಲ್ಲಿ ಎಲ್ ಕೆಜಿ-ಯುಕೆಜಿ ತರಗತಿ ತೆರೆಯಲು ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಲಾಗಿದ್ದು ಅನುದಾನ ಬಿಡುಗಡೆಗೊಳ್ಳಬೇಕಿದೆ. ಅಲ್ಲದೇ ಶಾಲೆಗಳಲ್ಲಿ ಶಿಕ್ಷಕರ ಸಮಸ್ಯೆ ಸರಿದೂಗಿಸಲು ಅತಿಥಿ ಶಿಕ್ಷಕ ವರ್ಗವನ್ನು ನೇಮಿಸಿಕೊಂಡು ಸಮಗ್ರ ವಿದ್ಯಾಭ್ಯಾಸ ಪೂರೈಸುತ್ತಿದೆ ಎಂದರು.

ಇತ್ತೀಚೆಗೆ ಕಡುಬಡವನು ನೆರೆಯವರ ವ್ಯಾಮೋಹದಿಂದ ಖಾಸಗೀ ಶಾಲೆಗೆ ದಾಖಲಿಸಿ ಶುಲ್ಕ ಕಟ್ಟಲು ಒದ್ದಾಡುವ ಸ್ಥಿತಿಯಿದೆ. ಈ ನಡುವೆ ಸರ್ಕಾರಿ ಶಾಲೆ ಶಿಕ್ಷಣ, ಸಮವಸ್ತ್ರ ಸೇರಿದಂತೆ ಸಕಲ ಸವಲತ್ತನ್ನು ಉಚಿ ತವಾಗಿ ನೀಡಿದರೂ ಬರುತ್ತಿಲ್ಲ. ಈ ಬಗ್ಗೆ ಪೋಷಕರು ಎಚ್ಚೆತ್ತುಕೊಂಡು ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ದಾಖಲಿಸಬೇಕು ಎಂದು ಸಲಹೆ ಮಾಡಿದರು.

ಶಾಲೆಯ ಮುಖ್ಯೋಪಾಧ್ಯಾಯ ಶೇಖರ್‌ನಾಯ್ಕ ಮಾತನಾಡಿ ಪ್ರಸ್ತುತ ಶಾಲೆಯಲ್ಲಿ ಎಲ್‌ಕೆಜಿ ತರಗತಿ ಗೆ 16 ಮತ್ತು ಯುಕೆಜಿಗೆ 17 ಮಕ್ಕಳು ದಾಖಲಾಗಿದ್ದಾರೆ. ಜೊತೆಗೆ ಈರ್ವರು ಶಿಕ್ಷಕರು, ಓರ್ವ ಆಯಾ ಕೆಲಸ ಕ್ಕೆ ಹೊರಗುತ್ತಿಗೆಯಲ್ಲಿ ನೇಮಿಸಿಕೊಳ್ಳಲಾಗಿದ್ದು ಮಕ್ಕಳಿಗೆ ಸಮವಸ್ತ್ರ, ಬ್ಯಾಗ್, ಶೂ, ಲೇಖನಿ, ನೋಟ್‌ಪುಸ್ತಕ ಹಾಗೂ ಶಿಕ್ಷಕರಿಗೆ ವೇತನದ ಸಂಪೂರ್ಣ ವೆಚ್ಚವನ್ನು ದಾನಿ, ಸ್ಥಳೀಯರು ಹಾಗೂ ಶಾಲಾಡಳಿತ ವಹಿಸಿ ಕೊಂಡಿದೆ ಎಂದರು.

ಅಂಬಳೆ ಹೋಬಳಿ ಕಾಂಗ್ರೆಸ್ ಅಧ್ಯಕ್ಷ ವಿಜಯ್‌ಕುಮಾರ್ ಮಾತನಾಡಿ ರಾಜ್ಯಸರ್ಕಾರ ಗ್ರಾಮೀಣ ಮ ಕ್ಕಳು ಶಿಕ್ಷಣದಿಂದ ವಂಚಿತರಾಗದೇ ಮೂಲಸವಲತ್ತು ನೀಡಿ ಪ್ರೋತ್ಸಾಹಿಸುತ್ತಿದೆ. ಆ ಹಿನ್ನೆಲೆ ಪಾಲಕರು ಯಾ ವುದೇ ವ್ಯಾಮೋಹಕ್ಕೆ ಒಳಗಾಗದೇ ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲಿಸಬೇಕು ಎಂದ ಅವರು ದೇಶದ ಗಣ್ಯರು ಬದುಕಿನಲ್ಲಿ ಸಾಧನೆ ಮಾಡಲು ಸರ್ಕಾರಿ ಶಾಲೆಗಳು ಕಲಿತಂಥ ವಿದ್ಯೆಯೇ ಕಾರಣ ಎಂದರು.

ಈ ಸಂದರ್ಭದಲ್ಲಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ರೂಪ, ಗ್ರಾ.ಪಂ ಮಾಜಿ ಅಧ್ಯಕ್ಷ ಎಂ.ಡಿ.ರವಿ, ಪಿಡಿಓ ಸುಮಾ, ಅಕ್ಷರ ದಾಸೋಹ ಸಂಯೋಜ-ಕ ನೀಲಕಂಠಪ್ಪ, ಉಪಸ್ಥಿತರಿದ್ದರು.

## ಜೋಳದಾಳು ಗ್ರಾಮದಲ್ಲಿ ಮದ್ಯವರ್ಜನ ಶಿಬಿರ ಉದ್ಘಾಟನೆ

# ಮದ್ಯಸೇವನೆ ತ್ಯಜಿಸುವ ಸಂಕಲ್ಪ ಮಾಡಲು ಕೃಷ್ಣೇಗೌಡ ಕರೆ



**ಚಿಕ್ಕಮಗಳೂರು:** ಮನುಷ್ಯನ ಜೀವ ಮತ್ತು ಜೀವನಕ್ಕೆ ಮಾರಕವಾಗಿರುವ ಮದ್ಯ ಮತ್ತು ಮಾದಕ ದ್ರವ್ಯ ಸೇವನೆಯನ್ನು ತ್ಯಜಿಸುವ ಸಂಕಲ್ಪವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಮಂಜುನಾಥಸ್ವಾಮಿಯವರ ಹೆಸರಿನಲ್ಲಿ ಮಾಡುವಂತೆ ಖ್ಯಾತ ಮಕ್ಕಳ ತಜ್ಞ ಡಾ. ಜೆ.ಪಿ. ಕೃಷ್ಣೇಗೌಡ ಹೇಳಿದ್ದಾರೆ.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಚಿಕ್ಕಮಗಳೂರು ತಾಲ್ಲೂಕು 1932ನೇ ಮದ್ಯವರ್ಜನ ಶಿಬಿರದ ವ್ಯವಸ್ಥಾಪನಾ ಸಮಿತಿ, ಆವುತಿ ವಲಯ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಚಿಕ್ಕಮಗಳೂರು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು, ಪೊಲೀಸ್ ಇಲಾಖೆ, ಸಮುದಾಯ ಆರೋಗ್ಯ ಕೇಂದ್ರ, ಗ್ರಾಮ ಪಂಚಾಯಿತಿ, ಮೈಲಿಮನೆ, ಬೈಗೂರು, ಶಿರವಾಸೆ, ಆವುತಿ, ಬ್ಯಾರವಳ್ಳಿ, ಶೌರ್ಯ ವಿಪತ್ತು ಘಟಕ, ಚಿಕ್ಕಮಗಳೂರು ಮತ್ತು ವಿವಿಧ ಸಂಘಟನೆಗಳ ಆಶ್ರಯದಲ್ಲಿ ಜೋಳದಾಳು ಗ್ರಾಮದಲ್ಲಿ ನಿನ್ನೆ ಆರಂಭವಾದ ಮದ್ಯವರ್ಜನ ಶಿಬಿರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆಯವರನ್ನು ನಡೆದಾಡುವ ದೇವರೆಂದೇ ಜನ ಭಾವಿಸಿದ್ದಾರೆ. ಗ್ರಾಮೀಣ ಭಾಗದ ಮಹಿಳೆಯರಲ್ಲಿ ಸ್ವಾವಲಂಬನೆ ಮೂಲಕ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಇಡೀ ರಾಜ್ಯದಲ್ಲೇ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಮೂಲಕ ಕೆಲಸ ಮಾಡಲಾಗುತ್ತಿದೆ. ಇದರ ಜೊತೆಗೆ ಬಡ ಕುಟುಂಬಗಳ ಬದುಕಿಗೆ ಮಾರಕವಾಗಿರುವ ಕುಡಿತ ಮತ್ತು ಮಾದಕ ವಸ್ತುಗಳ ಸೇವನೆ ಚಟಕ್ಕೆ ಬಲಿಯಾಗಿರುವವರನ್ನು ಈ ಚಟದಿಂದ ದೂರ ಮಾಡಲು ಮದ್ಯವರ್ಜನ ಶಿಬಿರವನ್ನು ನನ್ನ ಸ್ವಗ್ರಾಮ ಜೋಳದಾಳು ಗ್ರಾಮದಲ್ಲಿ ಹಮ್ಮಿಕೊಂಡಿದೆ ಎಂದರು.

ಮದ್ಯಪಾನ ಸೇವನೆಯಿಂದ ಸಾವಿರಾರು ಕುಟುಂಬಗಳು ಬೀದಿಪಾಲಾಗುತ್ತಿದ್ದಾರೆ. ಕತ್ತಲೆ ತುಂಬಿದ ಕುಟುಂಬಗಳಲ್ಲಿ ಬೆಳಕು ಚೆಲ್ಲುವ ಹಿತದೃಷ್ಟಿಯಿಂದ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ 8 ದಿನಗಳ ಮದ್ಯವರ್ಜನ ಶಿಬಿರವವನ್ನು ಇಲ್ಲಿ ಹಮ್ಮಿಕೊಂಡಿದೆ. ಮಕ್ಕಳ ಭವಿಷ್ಯದ ದೃಷ್ಟಿಯಿಂದ ಕುಡಿತದ ಚಟಕ್ಕೆ ಬಲಿಯಾಗಿರುವವರು ಈ ಶಿಬಿರದ ಪ್ರಯೋಜನ ಪಡೆದುಕೊಂಡು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಬದುಕಬೇಕೆಂದು ಮನವಿ ಮಾಡಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕರಾದ ಸದಾನಂದ ಬಂಗೇರ ಮಾತನಾಡಿ, ಚಿಕ್ಕಮಗಳೂರು ರಾಜ್ಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಸ್ಥಿತ್ವಕ್ಕೆ ಬಂದ ನಂತರ ಈವರೆಗೆ 1931 ಮದ್ಯವರ್ಜನ ಶಿಬಿರಗಳನ್ನು ನಡೆಸಲಾಗಿದ್ದು, ಈ ಶಿಬಿರದ ಪ್ರಯೋಜನ ಪಡೆದು ಕುಡಿತದ ಚಟದಿಂದ ಹೊರಬಂದ ಸಾವಿರಾರು ಜನರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನಡೆಸುತ್ತಿರುವ ಇಂತಹ ಶಿಬಿರಗಳಲ್ಲಿ ಸ್ವಯಂ ಪ್ರೇರಿತರಾಗಿ ಕೆಲಸ ಮಾಡುತ್ತಿದ್ದಾರೆ. ಕುಡಿತದ ಚಟದಿಂದ ನರಕದ ಜೀವನ ನಡೆಸುತ್ತಿದ್ದ ಕುಟುಂಬಗಳಲ್ಲಿ ಬೆಳಕು ನೀಡುವ ಕೆಲಸವನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಮಾಡಲಾಗುತ್ತಿದೆ ಎಂದು ವಿವರಿಸಿದರು.

ಸಮಾರಂಭದಲ್ಲಿ ಶಿಬಿರದ ಯೋಜನಾಧಿಕಾರಿ ನಾಗರಾಜ್ ಕುಲಾಲ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮದ್ಯವರ್ಜನ ಶಿಬಿರದ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ನಾಗೇಶ್ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಶಿಬಿರದ ಯಶಸ್ಸಿಗೆ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಮಲ್ಲಂದೂರು ಪೊಲೀಸ್ ಠಾಣೆಯ ಠಾಣಾಧಿಕಾರಿ ಗುರುಸಜ್ಜನ್, ಮಲ್ಲಂದೂರು ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಚೇತನ, ಅಖಿಲ ಕರ್ನಾಟಕ ಜನಜಾಗೃತಿ ಸಮಿತಿ ಅಧ್ಯಕ್ಷ ಎ.ಸಿ. ಚಂದ್ರಪ್ಪ, ಸದಸ್ಯ ಹಾಗೂ ನಗರದ ಮಾಡೆಲ್ ಶಾಲೆಯ ಪ್ರಾಂಶುಪಾಲ ಎಂ.ಎನ್. ಷಡಕ್ಷರಿ, ಜೋಳದಾಳು ಗ್ರಾಮದ ಬೀನಾಅನುರಾಜೇಗೌಡ ಮಾತನಾಡಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ರೂಪ ಜೆ. ಜೈನ್ ಸ್ವಾಗತಿಸಿದರು. ಯೋಜನೆಯ ತಾಲ್ಲೂಕು ಕೃಷಿ ಅಧಿಕಾರಿ ಬಿ. ಉಮೇಶ್ ಕಾರ್ಯಕ್ರಮ ನಿರೂಪಿಸಿದರು. ಶಿಬಿರದ ಗೌರವಾಧ್ಯಕ್ಷ ಮಲ್ಲಂದೂರು ಧರ್ಮರಾಜ್ ವಂದಿಸಿದರು.

# ದಲಿತ ಮುಖಂಡನ ಮೇಲೆ ಹಲ್ಲೆ ನಡೆಸಿದವರ ಬಂಧನಕ್ಕೆ ಆಗ್ರಹ

**ಕಡೂರು:** ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಚಿಂತಾಮಣಿ ತಾಲೂಕಿನ ಕೋಡಿಗಲ್ ಗ್ರಾಮದ ರಮೇಶ್ ಮತ್ತು ಅವರ ಕುಟುಂಬದ ಮೇಲೆ ಹಲ್ಲೆ ಮಾಡಿರುವವರನ್ನು ಕೂಡಲೇ ಬಂಧಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಕಡೂರು ಕೃಷ್ಣಪ್ಪ ಒತ್ತಾಯ ಮಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಮೇಶ್ ಸಂಘಟನೆಯಲ್ಲಿ ಉತ್ತುಂಗ ಸ್ಥಾನದಲ್ಲಿರುವುದನ್ನು ಸಹಿಸದೆ ನಿವೃತ್ತ ಡಿವೈಎಸ್‌ಪಿ ಕೋನಪ್ಪ ರೆಡ್ಡಿ ಮುಂದಾಳತ್ವದಲ್ಲಿ ಸುಬ್ಬಾರೆಡ್ಡಿ, ಚಂದ್ರಪ್ಪ, ವೆಂಕಟರಮಣ ಗೋಪಾಲ, ರಂಗನಾಥ್‌ರೆಡ್ಡಿ, ಭಾಸ್ಕರ್ ರೆಡ್ಡಿ ಇವರುಗಳು ಕೋಡಿಗಲ್ ರಮೇಶ್ ವಿರುದ್ಧ ಸುಳ್ಳು ಮಾಹಿತಿ ನೀಡಿ ಕೇಸ್ ದಾಖಲಿಸಿದ್ದು, ಪೊಲೀಸ್ ಇಲಾಖೆ ಕೂಡಲೇ ಇವರನ್ನು ಬಂಧಿಸಲಿ ಎಂದರು.

ಈ ಹಿಂದೆ ಕೋಡಿಗಲ್ ರಮೇಶ್ ಅವರಿಗೆ ಜೀವ ಬೆದರಿಕೆಯಿಂದ ಗನ್‌ಮ್ಯಾನ್ ನೀಡಲಾಗಿತ್ತು, ಸರ್ಕಾರ ಗನ್‌ಮ್ಯಾನ್‌ಅನ್ನು ವಾಪಸ್ ಕರೆಯಿಸಿಕೊಂಡ ಹಿನ್ನೆಲೆಯಲ್ಲಿ 8 ಜನರ ಗುಂಪು ರಮೇಶ್ ಅವರ ಮೇಲೆ ಹಲ್ಲೆಮಾಡಿ, ಅವರ ಕುಟುಂಬದವರಿಗೆ ಅವಾಚ್ಯ ಶಬ್ಧಗಳಿಂದ ನಿಂಧಿಸಿರುತ್ತಾರೆ. ರಮೇಶ್ ಅವರು ಪೊಲೀಸ್



ಠಾಣೆಗೆ ದೂರು ನೀಡಿ ಜಾತಿನಿಂದನೆ ಕೇಸ್ ದಾಖಲಿಸಲು ಮನವಿ ಮಾಡಿದ್ದು, ಚಿಂತಾಮಣಿ ಡಿವೈಎಸ್‌ಪಿ ಮುರುಳಿ ಅವರು ಕೇಸ್ ಮಾಡಿದ್ದರೂ ಸಹ ಇದುವರೆವಿಗೂ 8 ಜನರನ್ನು ಬಂಧಿಸದೇ ಇರುವುದನ್ನು ಖಂಡಿಸುತ್ತೇವೆ, ಕೂಡಲೆ ಮುರುಳಿ ಅವರನ್ನು ಅಮಾನತ್ತು ಮಾಡಬೇಕು ಎಂದು ಆಗ್ರಹಿಸಿದರು.

ಸಂಘಟನೆಯ ಮಹಿಳಾ ಘಟಕದ ರಾಜ್ಯ ಸಂಚಾಲಕಿ ಸುನಿತಾ ರಾಜ್ ಮಾತನಾಡಿ, ರಾಜ್ಯದಲ್ಲಿ ದಲಿತ ಹೋರಾಟಗಾರರ ಮೇಲೆ ಸುಮ್ಮನೆ ಆರೋಪ ಮಾಡಿ ಕೊಲೆ ಬೆದರಿಕೆ ಹಾಕುತ್ತಿರುವ ಬೆಳವಣಿಗೆ ರಾಜ್ಯದಲ್ಲಿ ನಡೆಯುತ್ತಿದ್ದು, ದಲಿತರ ಹಕ್ಕನ್ನು ಹತ್ತಿಕ್ಕುವ ಹುನ್ನಾರ ನಡೆಯುತ್ತಿದೆ, ದಲಿತರಿಗೆ ಸರ್ಕಾರ ಮತ್ತು ಪೊಲೀಸ್ ರಕ್ಷಣೆ ನೀಡಬೇಕು ಎಂದರು.

# ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಸೌಲಭ್ಯ

**ಚಿಕ್ಕಮಗಳೂರು:** ಹಿಂದುಳಿದ ವರ್ಗಗಳ ಪ್ರವರ್ಗ-2ಎ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಫಲಾನುಭವಿಗಳಿಗೆ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಸೇವಾ ಸಿಂಧು ತಂತ್ರಾಂಶ (http://sevasindhu.karnataka.gov.in)ದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಅರ್ಹರು ಸೇವಾ ಸಿಂಧು ಪೋರ್ಟಲ್ ಆನ್‌ಲೈನ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 2ರೊಳಗೆ ಅರ್ಜಿ ಸಲ್ಲಿಸಬಹುದು.

# ಬೆಂಗಳೂರು: ಈ ವರ್ಷ ಶಾಲಾ ಶುಲ್ಕ ಶೇ.10ಕ್ಕಿಂತ ಹೆಚ್ಚು ಏರಿಕೆ; ಪೋಷಕರು ಹೈರಾಣ

**ಬೆಂಗಳೂರು:** ನಗರದ ಖಾಸಗಿ ಶಾಲೆಗಳು 2025-26 ರ ಶೈಕ್ಷಣಿಕ ವರ್ಷಕ್ಕೆ ಸಜ್ಜಾಗುತ್ತಿವೆ, ಇದರ ಬೆನ್ನಲ್ಲೇ ಗಮನಾರ್ಹ ಸಂಖ್ಯೆಯ ಪೋಷಕರು ಶಾಲೆಗಳ ತೀವ್ರ ಶುಲ್ಕ ಏರಿಕೆಯಿಂದ ಹೈರಾಣಾಗಿದ್ದಾರೆ ಎಂದು ಸಮೀಕ್ಷೆಯೊಂದು ಬಹಿರಂಗಪಡಿಸಿದೆ, ಇದು ಪೋಷಕರ ಮೇಲೆ ಆರ್ಥಿಕ ಹೊರೆಯನ್ನು ಹೆಚ್ಚಿಸುತ್ತದೆ.

ಲೋಕಲ್ ಸರ್ಕಲ್ಸ್ ನಡೆಸಿದ ಸಮೀಕ್ಷೆಯ ಪ್ರಕಾರ, ಬೆಂಗಳೂರಿನ ಶೇ. 48 ರಷ್ಟು ಪೋಷಕರು ಶಾಲಾ ಶುಲ್ಕದಲ್ಲಿ ಶೇ.10ಕ್ಕಿಂತ ಅಥವಾ ಅದಕ್ಕಿಂತ ಹೆಚ್ಚು ಶುಲ್ಕ ಹೆಚ್ಚಳವಾಗಲಿದೆ ಎಂದು ವರದಿ ಮಾಡಿದ್ದಾರೆ. ಶೇ. ತಮ್ಮ ಶಾಲೆಗಳು ಇನ್ನೂ ಪರಿಷ್ಕೃತ ಶುಲ್ಕವನ್ನು ಘೋಷಿಸಿಲ್ಲ ಎಂದು 46 ರಷ್ಟು ಜನರು ಹೇಳಿದ್ದಾರೆ, ಇದು ಅನೇಕರನ್ನು ಅನಿಶ್ಚಿತತೆಗೆ ದೂಡಿದೆ.

ನಗರದ 2,711 ಪೋಷಕರ ಪ್ರತಿಕ್ರಿಯೆಗಳನ್ನು ಆಧರಿಸಿದ ಸಂಶೋಧನೆಗಳು, ಈಗಾಗಲೇ ಹೆಚ್ಚುತ್ತಿರುವ ಜೀವನ ವೆಚ್ಚ ಮತ್ತು ಶಿಕ್ಷಣ ಸಂಬಂಧಿತ ವೆಚ್ಚಗಳನ್ನು ಎದುರಿಸುತ್ತಿರುವ ಕುಟುಂಬಗಳಿಗೆ ಆತಂಕಕಾರಿ ಚಿತ್ರಣವನ್ನು ಚಿತ್ರಿಸುತ್ತವೆ. 21% ಜನರು ಹೆಚ್ಚಳವು 20% ಮತ್ತು 30% ರ ನಡುವೆ ಇದೆ ಎಂದು ಹೇಳಿದರೆ, ಸುಮಾರು 19% ಜನರು 10-20% ಹೆಚ್ಚಳವನ್ನು ಕಂಡಿದ್ದಾರೆ ಮತ್ತು ಒಂದು ಸಣ್ಣ ಭಾಗವು 5-10% ಹೆಚ್ಚಳವನ್ನು ವರದಿ ಮಾಡಿದೆ. ಶುಲ್ಕದಲ್ಲಿ ಯಾವುದೇ ಬದಲಾವಣೆಯಾಗಿಲ್ಲ ಎಂದು ಕೇವಲ 2% ಜನರು ಹೇಳಿದ್ದಾರೆ, ಆದರೆ ಯಾರೂ 5% ಕ್ಕಿಂತ ಕಡಿಮೆ ಹೆಚ್ಚಳವನ್ನು ವರದಿ ಮಾಡಿಲ್ಲ.

ರಾಷ್ಟ್ರೀಯವಾಗಿ, ಖಾಸಗಿ ಶಾಲೆಗಳಲ್ಲಿ ಮಕ್ಕಳಿರುವ ಪೋಷಕರಲ್ಲಿ ಶೇ. 81 ರಷ್ಟು ಜನರು ಕಳೆದ ವರ್ಷಕ್ಕೆ ಹೋಲಿಸಿದರೆ ಶುಲ್ಕ ಶೇ. 10 ಕ್ಕಿಂತ ಹೆಚ್ಚು ಹೆಚ್ಚಾಗಿದೆ ಎಂದು ವರದಿ ಮಾಡಿದ್ದಾರೆ. ನವದೆಹಲಿ, ಬೆಂಗಳೂರು ಮತ್ತು ಹೈದರಾಬಾದ್‌ನಂತಹ ನಗರಗಳಲ್ಲಿ, ಶಾಲಾ ಶುಲ್ಕ ಏರಿಕೆಯು ವ್ಯಾಪಕ ಕಳವಳವನ್ನು ಹುಟ್ಟುಹಾಕಿದೆ



ಮತ್ತು ಕೆಲವು ಪ್ರದೇಶಗಳಲ್ಲಿ ಪ್ರತಿಭಟನೆಗಳನ್ನು ಸಹ ನಡೆಸಿದೆ ಎಂದು ಸಮೀಕ್ಷೆಯು ಎತ್ತಿ ತೋರಿಸಿದೆ.

ದೆಹಲಿಯ ಡಿಪಿಎಸ್ ದ್ವಾರಕಾದಲ್ಲಿ, ಪೋಷಕರು ಶುಲ್ಕ ಏರಿಕೆಯನ್ನು ಪದೇ ಪದೇ ಪ್ರತಿಭಟಿಸುತ್ತಿದ್ದಾರೆ, ಇದು ವಾರ್ಷಿಕ ಶುಲ್ಕವನ್ನು 1.4 ಲಕ್ಷ ರೂ.ಗಳಿಗೆ ಹೆಚ್ಚಿಸಿದೆ, 2020 ರಿಂದ ಪ್ರತಿ ವರ್ಷ ಶೇ.8-20 ರಷ್ಟು ಬೋಧನಾ ಶುಲ್ಕ ಹೆಚ್ಚಳವಾಗಿದೆ. ಅಧಿಕಾರಿಗಳ ಹಸ್ತಕ್ಷೇಪದ ಹೊರತಾಗಿಯೂ, ಅನೇಕ ಶಾಲೆಗಳು ವಿವಿಧ ಶೀರ್ಷಿಕೆಗಳ ಅಡಿಯಲ್ಲಿ ಶುಲ್ಕವನ್ನು ಹೆಚ್ಚಿಸುತ್ತಲೇ ಇವೆ.

ಕರ್ನಾಟಕದಲ್ಲಿಯೂ ಸಹ, ಶಾಲಾ ಶಿಕ್ಷಣ ಇಲಾಖೆಯು ಪೋಷಕರ ಕಳವಳಗಳಿಗೆ ಪ್ರತಿಕ್ರಿಯಿಸಿ, ಎಲ್ಲಾ ಶಾಲೆಗಳು ವಿವರವಾದ ಶುಲ್ಕ ವಿವರ ಮತ್ತು ಮೀಸಲಾತಿ ನೀತಿಗಳನ್ನು ಪ್ರಕಟಿಸಬೇಕೆಂದು ಸುತ್ತೋಲೆಯನ್ನು ಹೊರಡಿಸಿದೆ. ಶಾಲೆಗಳು ಕುಂದು-ಕೊರತೆ ಪರಿಹಾರ ಕಾರ್ಯವಿಧಾನಗಳನ್ನು ಸ್ಥಾಪಿಸಲು ಸಹ ಸೂಚಿಸಲಾಗಿದೆ, ಜೊತೆಗೆ ಶಿಕ್ಷಣ ಅಧಿಕಾರಿಗಳಿಗೆ ದೂರುಗಳ ಮೇಲೆ ವಿಳಂಬವಿಲ್ಲದೆ ಕಾರ್ಯನಿರ್ವಹಿಸಲು ನಿರ್ದೇಶಿಸಲಾಗಿದೆ.ದೇಶಾದ್ಯಂತ ಶೇ. 44 ರಷ್ಟು ಪೋಷಕರು ಕಳೆದ ಮೂರು ವರ್ಷಗಳಲ್ಲಿ ಶೇ. 50-80ರಷ್ಟು ಶುಲ್ಕಗಳು ಅಥವಾ ಅದಕ್ಕಿಂತ ಹೆಚ್ಚು ಹೆಚ್ಚಾಗಿದೆ ಎಂದು ಹೇಳುತ್ತಾರೆ. ಅನೇಕ ಕುಟುಂಬಗಳು ಹೆಚ್ಚುತ್ತಿರುವ ಶಿಕ್ಷಣ ವೆಚ್ಚವನ್ನು ನಿರ್ವಹಿಸಲು ಸಾಲಗಳತ್ತ ಮುಖ ಮಾಡುತ್ತಿವೆ. ಪ್ರೌಢಶಾಲೆಗಳಲ್ಲಿ ಮಕ್ಕಳಿರುವವರಿಗೆ, ತರಬೇತಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯ ತಯಾರಿಯ ಹೆಚ್ಚುವರಿ ಒತ್ತಡವು ಆರ್ಥಿಕವಾಗಿ ಸಮರ್ಥನೀಯವಲ್ಲ ಎಂದು ಸಾಬೀತಾಗುತ್ತಿದೆ ಎಂದು ಸಮೀಕ್ಷೆಯು ಬಹಿರಂಗಪಡಿಸಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶಾಲಾ ಶುಲ್ಕ ಹೆಚ್ಚಳವನ್ನು ನಿಯಂತ್ರಿಸಲು ಮತ್ತು ಯಾವುದೇ ಮಿತಿಗಳನ್ನು ತಳಮಟ್ಟದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ಪೋಷಕರು ಒತ್ತಾಯಿಸಿದ್ದಾರೆ.

# ನೀರನ್ನು ವ್ಯರ್ಥ ಮಾಡದೇ ಮಿತವಾಗಿ ಶುಚಿಯಾಗಿ ತಪ್ಪದಂತೆ ಬಳಸಿ : ಜಿಲ್ಲಾಧಿಕಾರಿ

**ದಾವಣಗೆರೆ :** ನೀರನ್ನು ಸುಖಾಸುಮ್ಮನೆ ವ್ಯರ್ಥವಾಗಿ ಪೋಲು ಮಾಡದೇ ಮಿತವಾಗಿ ತುಪ್ಪದ ರೀತಿಯಲ್ಲಿ ಬಳಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಮಂಗಳವಾರ ಮಳೆನೀರು ಕೊಯ್ಲು ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಭೂಮಿಯ ಮೇಲೆ ಶೇ.71ರಷ್ಟು ನೀರಿದ್ದರೂ ಬಳಕೆ ಮತ್ತು ಸೇವನೆಗೆ ಕೇವಲ ಶೇ.0.03ರಷ್ಟು ಮಾತ್ರ ಯೋಗ್ಯವಾಗಿದೆ. ನೀರು ಮೂಲಭೂತವಾಗಿ ಅತ್ಯಮೂಲ್ಯವಾದ ವಸ್ತು. ಆದ್ದರಿಂದ ನೀರನ್ನು ವ್ಯರ್ಥವಾಗಿ ಹರಿಯಲು ಬಿಡದೇ ಮಿತವಾಗಿ ಬಳಸಲು ಕ್ರಮವಹಿಸಬೇಕು. ರಾಜ್ಯವನ್ನು ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದ್ದಲ್ಲಿ ಅತ್ಯಂತ ನಿಕೃಷ್ಟಸ್ಥಿತಿಯಲ್ಲಿದೆ. ಇಡೀ ದೇಶದಲ್ಲಿಯೇ ನಮ್ಮ ರಾಜ್ಯವು 2ನೇ ಅತೀ ದೊಡ್ಡ ಮರುಭೂಮಿ ರಾಜ್ಯವಾಗಿದೆ. ಜಿಲ್ಲೆಯಲ್ಲಿ ವಾರ್ಷಿಕ 650 ಸೆ.ಮೀ ಮಳೆಯಾಗುತ್ತದೆ ಅಲ್ಲದೇ ಜಿಲ್ಲೆಗೆ ಹೊಂದಿಕೊಂಡು ತುಂಗಭದ್ರಾ ನದಿ ಹರಿಯುತ್ತಿದ್ದರೂ ಸಹ ಬೇಸಿಗೆಯಲ್ಲಿ ಕುಡಿಯುವ ನಿರಿಗೆ ತೊಂದರೆಯಾಗುತ್ತಿದೆ. ಆದುದರಿಂದ ಸರ್ಕಾರಿ ಕಟ್ಟಡಗಳಿಗೆ, ಶಾಲಾ ಕಾಲೇಜು, ಹಾಸ್ಟೆಲ್‌ಗಳಿಗೆ ಮಳೆ ನೀರು ಕೊಯ್ಲು ಅಳವಡಿಸಬೇಕು. ಈ ಯೋಜನೆ ಅಳವಡಿಸಲು ಸ್ಥಳದ ಅಭಾವವಿದ್ದಲ್ಲಿ ಕೊಳವೆ ಬಾವಿ ಸುತ್ತಲೂ ಇಂಗು ಗುಂಡಿ ನಿರ್ಮಿಸಬೇಕು. ಹಾಗೆಯೇ ನಗರಸಭೆ, ಜಿಲ್ಲಾ ಪಂಚಾಯತಿ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ಹೊಸದಾಗಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡುವ ಮೊದಲು ಕಡ್ಡಾಯವಾಗಿ ಮಳೆನೀರು ಕೊಯ್ಲು ಅಳವಡಿಸಿಕೊಳ್ಳಲು ನಿರ್ದೇಶನ ನೀಡಬೇಕು.

# ಸಂಚಾರಿ ಇಲಾಖೆ ಬಡವರನ್ನ ಬದುಕಲು ಅವಕಾಶ ಕಲ್ಪಿಸಿಕೊಡಬೇಕು : ಡಾ.ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ:** ಫುಟ್ಪಾತ್ ಮೇಲೆ ವ್ಯಾಪಾರ ಮಾಡಿದಾಗ ಕಾನೂನು ವಿರೋಧವಾಗುತ್ತದೆ ಎಂದಾಗ, ಬಡ ಜನರು ತಳ್ಳುವ ಗಾಡಿಯಲ್ಲಿ ಸಾಮಾನುಗಳನ್ನು ತಳ್ಳಿಕೊಂಡು ಹೋಗಿ, ಮನೆ ಮನೆಗಳಿಗೆ ತಲುಪಿಸುತ್ತಿದ್ದಂತವರು, ವಯಸ್ಸಾದ ನಂತರ, ಸಾಮಾನುಗಳ ಗಾತ್ರ ಹೆಚ್ಚಾದಷ್ಟು, ತಳ್ಳಲು ಸಾಧ್ಯವಾಗದಿದ್ದಾಗ, ಅವರು ಪೆಟ್ರೋಲ್ ಸಹಾಯದಿಂದ ತಳ್ಳುವ ಗಾಡಿಗಳಿಗೆ ಇಂಜಿನ್ ಗಳನ್ನು ಕೂಡಿಸಿಕೊಂಡು, ಹಳ್ಳಿಗಳಲ್ಲಿ, ನಗರದ ಬಡಾವಣೆಗಳಲ್ಲಿ, ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ, ಇಂತಹ ವಾಹನಗಳಿಗೂ ಸಹ ಸಂಚಾರಿ ಇಲಾಖೆ ನಿಯಮಗಳನ್ನು ಹಾಕಿ, ಅವುಗಳಿಗೂ ಸಹ ಇನ್ಸೂರೆನ್ಸ್, ರೋಡ್ ಟ್ಯಾಕ್ಸ್, ಡ್ರೈವಿಂಗ್ ಲೈಸೆನ್ಸ್ ಪಡೆದು, ಅವುಗಳು ಸಹ ರಸ್ತೆಯ ಮೂಲಕ ಸಂಚರಿಸಿ ವ್ಯಾಪಾರ ಮಾಡುವಂತಹ ಅವಕಾಶ ಕಲ್ಪಿಸಿ ಕೊಡಬೇಕು, ಇಲ್ಲದಿದ್ದರೆ ಅನಧಿಕೃತವಾಗಿ ಈ ತರಹದ ಗಾಡಿಗಳು, ರಸ್ತೆಗಳಲ್ಲಿ ಹೆಚ್ಚಾಗುತ್ತಾ ಬಂದು, ಸಂಚಾರಿ ಇಲಾಖೆಗೂ ಕಿರಿಕಿರಿಯಾಗುತ್ತದೆ, ಸಾರ್ವಜನಿಕರಿಗೂ ಸಹ ಇಂತಹ ಉದ್ಯೋಗಗಳ ಬಗ್ಗೆ ನಂಬಿಕೆ ಹೋಗುತ್ತದೆ, ಜನರು ಕಳ್ಳ ಮಾರ್ಗದಲ್ಲಿ ವ್ಯಾಪಾರ ಮಾಡುವ ದಾರಿಗಳನ್ನ ಹುಡುಕಿಕೊಳ್ಳುತ್ತಾರೆ, ಆದ್ದರಿಂದ ಸಂಚಾರಿ ಇಲಾಖೆ ಇಂತಹ ವಾಹನಗಳಿಗೂ ಸಹ ಒಂದಿಷ್ಟು ಅನುಮತಿಯನ್ನು ನೀಡಿ, ಅದಕ್ಕೆ ಬೇಕಾದಂತ ಶುಲ್ಕವನ್ನು ವಸೂಲಿ ಮಾಡಿ, ಮುಖ್ಯ ರಸ್ತೆಗಳಲ್ಲಿ ಸಂಚರಿಸದಂತೆ, ಹಳ್ಳಿಗಳಲ್ಲಿ, ಒಳ ರಸ್ತೆಗಳಲ್ಲಿ ಸಂಚರಿಸಿಕೊಂಡು ವ್ಯಾಪಾರ ಮಾಡಲು ಅವಕಾಶ ಕಲ್ಪಿಸಿ ಕೊಡಬೇಕಾಗಿದೆ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಸರ್ಕಾರ ಮತ್ತು ಜಿಲ್ಲಾಡಳಿತವನ್ನು ವಿನಂತಿಸಿಕೊಂಡಿದ್ದಾರೆ.

ಕಾಲ ಬದಲಾದಂತೆ ವ್ಯಾಪಾರದ ವ್ಯವಸ್ಥೆಗಳು ಸಹ ಬದಲಾಗುತ್ತಾ ಬರುತ್ತದೆ, ವ್ಯಾಪಾರವಿಲ್ಲದೆ ದೇಶ ಅಭಿವೃದ್ಧಿ ಹೊಂದುವುದಿಲ್ಲ, ಉತ್ಪಾದನೆಯಾದ ವಸ್ತುಗಳನ್ನ ಹಳ್ಳಿಗಳಿಗೆ, ಮಾರುಕಟ್ಟೆ ಮಾಡಿ, ವ್ಯಾಪಾರ ಮಾಡುವುದು ಒಂದು ಕಲೆ. ಈಗ ತಳ್ಳಿಕೊಂಡು ಹೋಗಿ ಗಾಡಿಯಲ್ಲಿ ವ್ಯಾಪಾರ ಮಾಡುವುದು ಅಸಾಧ್ಯವಾದ ಕೆಲಸವಾಗಿದೆ, ಉತ್ಪಾದನೆ ವಸ್ತುಗಳನ್ನ, ಪೆಟ್ರೋಲ್ ಗಾಡಿಗಳ ಮುಖಾಂತರ, ಹಳೆ ಗಾಡಿಗಳನ್ನು ಖರೀದಿ ಮಾಡಿ, ಅವುಗಳ ಚಾಸಿಸ್ ಅನ್ನ ಬದಲಾಯಿಸಿ, ಸಾಮಾನುಗಳನ್ನು ಇಟ್ಟುಕೊಂಡು, ನಿಧಾನವಾಗಿ ಸಂಚರಿಸುತ್ತಾ ದಿನಕ್ಕೆ 10 ರಿಂದ 20 ಕಿಲೋಮೀಟರ್ ದೂರ ವ್ಯಾಪಾರವನ್ನು ಮಾಡಿಕೊಂಡು ಜೀವನ ಸಾಗಿಸುತ್ತಿರುವ ಹಲವಾರು ಕುಟುಂಬಗಳಿವೆ. ಅವುಗಳನ್ನ ಪ್ರೋತ್ಸಾಹಿಸಬೇಕಾದ್ದು ನಮ್ಮ ಈಗಿನ ಕರ್ತವ್ಯವಾಗಿದೆ, ಇಲ್ಲದಿದ್ದರೆ ಇಂಥ ಗಾಡಿಗಳನ್ನ ರಸ್ತೆ ಬದಿಗಳಲ್ಲಿ ನಿಲ್ಲಿಸಿ, ದಂಡ ಹಾಕುವುದು, ಅವುಗಳಿಂದ ಲಂಚ ಪಡೆಯುವುದು ಮಾಡಲು ಅನುಕೂಲಕರವಾಗುತ್ತದೆ. ಲಂಚ ಪಡೆಯುವಂಥ ಅಧಿಕಾರಿಗಳಿಗೆ ಅವಕಾಶ ನೀಡಿದಂತಾಗುತ್ತದೆ, 500 ರಿಂದ ಸಾವಿರ ರೂಪಾಯಿ ಲಂಚ ಪಡೆದು ಅವರ



ದಿನದ ದುಡಿಮೆಯನ್ನು ಪಡೆಯುವುದಕ್ಕಿಂತ, ಅದರ ಬದಲು ಇವರನ್ನ ಕಾನೂನು ಬದ್ಧವಾಗಿ ವ್ಯಾಪಾರ ಮಾಡುವಂತೆ ಅವಕಾಶ ಕಲ್ಪಿಸಿ, ತೆರಿಗೆ ವಸೂಲಿಯನ್ನ ಸರ್ಕಾರದ ಖಜಾನೆಗೆ ಬಂದು ತಲುಪುವಂತೆ ಮಾಡುವುದು ಒಳ್ಳೆಯದು, ಇಲ್ಲದಿದ್ದರೆ ಇಂಥ ವ್ಯಾಪಾರಸ್ಥರಿಂದ ಹಣ ಪಡೆದು, ಜೋಬು ತುಂಬಿಕೊಳ್ಳುವಂತಹ ಅಧಿಕಾರಿಗಳ ವರ್ಗ ಸೃಷ್ಟಿಯಾಗುತ್ತದೆ, ದಾರಿ ದಾರಿಗಳಲ್ಲಿ ಇವರನ್ನ ತಡೆಹಿಡಿದು, 1000 ರೂಪಾಯಿ ದಂಡ ಹಾಕುತ್ತಿರುವ ಸಾರಿಗೆ ಇಲಾಖೆಯವರು, ಇವುಗಳಿಗೆ ಒಂದು ನ್ಯಾಯವಾದ ಮಾರ್ಗವನ್ನು ಕಂಡುಹಿಡಿಯಬೇಕೆಂದು, ಈ ತರದ ವ್ಯಾಪಾರಸ್ಥರೆಲ್ಲಾ ವಿನಂತಿಸಿಕೊಂಡಿದ್ದಾರೆ.

ನಾವು ಕಾಲಕಾಲಕ್ಕೆ ಸಂಚಾರಿ ನಿಯಮಗಳನ್ನ ಬದಲಾಯಿಸಿಕೊಳ್ಳಬೇಕಾಗುತ್ತದೆ. ಈಗಾಗಲೇ ರಸ್ತೆ ಬದಿಯಲ್ಲಿ ತಟ್ಟೆ ಇಡ್ಲಿ ಮಾಡುವವರು, ತಿಂಡಿ ಮಾರುವವರು, ಈ ರೀತಿ ಆಟೋ ಗಳಿಗೆ ಚಾಸಿಸ್ ಬದಲಿಸಿಕೊಂಡು, ತಮಗೆ ಬೇಕಾದಂತಹ ಸಾಮಗ್ರಿಗಳನ್ನ ಇಟ್ಟುಕೊಂಡು, ಸಂಜೆ ವ್ಯಾಪಾರ ಮಾಡಿ, ಮನೆಗೆ ಹೋಗುವಂತ ದೃಶ್ಯವನ್ನು ನಾವೆಲ್ಲ ಕಡೆ ಕಾಣಬಹುದು, ಆದರೆ ಅವು ಒಂದು ಕಡೆ ನಿಂತು ವ್ಯಾಪಾರ ಮಾಡುವಂತ ಗಾಡಿಗಳು, ಆದರೆ ಇವು ದಿನಕ್ಕೆ 20 ರಿಂದ 30 ಕಿಮೀ ಚಲಿಸಿ ವ್ಯಾಪಾರ ಮಾಡುವಂತ ಗಾಡಿಗಳು. ಇವುಗಳ ವಿಭಾಗವನ್ನೇ ಬೇರೆ ತೆರೆದು, ಇವರಿಗೂ ಸಹ ಎಲ್ಲಾ ವಾಹನಗಳಿಗೆ ಇರುವಂತೆ, ಇವರಿಗೂ ಸಹ ಲೈಸೆನ್ಸ್ ನೀಡಿ, ಗಾಡಿಯ ಚಾಸಿಸ್ ನಂಬರಿಗೆ ಅನುಮತಿ ನೀಡಿ, ಅದಕ್ಕೆ ಬೇಕಾದಂತ ತೆರಿಗೆ ವಸೂಲಿ ಮಾಡಿ, ನಿಯಮಗಳನ್ನ ಬದಲಾಯಿಸಿಕೊಟ್ಟರೆ, ಇನ್ನು ಮುಂದೆ ಈ ರೀತಿ ಗಾಡಿಗಳು ಲಕ್ಷಾಂತರವಾಗಬಹುದು, ಆದ್ದರಿಂದ ಈ ಸಮಸ್ಯೆಯ ಬಗ್ಗೆ ಅಧಿಕಾರಿಗಳು ಯೋಚಿಸಬೇಕಾಗಿದೆ ಎಂದು ವಿನಂತಿಸಿಕೊಂಡಿದ್ದಾರೆ.

ಈ ತರದ ಗಾಡಿಗಳು ಮುಖ್ಯ ರಸ್ತೆಯಲ್ಲಿ ಸಂಚಾರ ಪ್ರಾರಂಭ ಮಾಡಿದಾಗ, ಬೇರೆಯವರಿಗೆ ಕಿರಿಕಿರಿಯಾಗಬಹುದು, ವಾಹನದ ಸಂಚಾರ ದಟ್ಟಣೆಯಾಗಬಹುದು, ಅಪಘಾತಗಳಾಗಬಹುದು, ಆದ್ದರಿಂದ ನಿಯಮ ಬದ್ಧವಾಗಿ, ಇವರಿಗೆ ಯಾವ ರೀತಿ ಕಾನೂನಿನಲ್ಲಿ ಅವಕಾಶಗಳಿವೆ ಎಂಬುದನ್ನು ಪರಿಶೀಲನೆ ಮಾಡಿ, ಈ ಗಾಡಿಗಳನ್ನು ಸಹ ಅಧಿಕೃತಗೊಳಿಸಬೇಕಾಗಿದೆ, ಇಲ್ಲದಿದ್ದರೆ ಅನಧಿಕೃತವಾಗಿ ಈ ಗಾಡಿಗಳು ಸಂಚರಿಸಲು, ವ್ಯಾಪಾರ ಮಾಡುವುದು, ದಿನನಿತ್ಯ ಇವರ ಮನಸ್ಸಿಗೆ ಕಿರಿಕಿರಿಯಾಗುತ್ತಿದೆ ಮತ್ತು ಕೀಳರಿಮೆ ಉಂಟಾಗುತ್ತಿದೆ. ನಾವು ಯಾವುದೋ ಕಳ್ಳ ಮಾರ್ಗದಲ್ಲಿ ದುಡಿದು ಸಂಸಾರ ಸಾಗಿಸುತ್ತೇವೆ ಎಂಬ ಭಾವನೆ ಮೂಡುತ್ತಿದೆ, ಅವರಿಗೂ ಸಹ ಸತ್ಯವಾಗಿ ಬದುಕಿ, ನ್ಯಾಯವಾಗಿ ದುಡಿದು, ಸಂಸಾರವನ್ನು ನಿಭಾಯಿಸಬೇಕು ಎಂಬ ಭಾವನೆ ಉಳ್ಳ ಜನರಾಗಿದ್ದಾರೆ, ಒಳ್ಳೆಯ ಜನರಿಗೆ ನಾವು ಸತ್ಯದ ದಾರಿಯಲ್ಲಿ ನಡೆಯಲು ಅವಕಾಶ ಕಲ್ಪಿಸಿ ಕೊಡಬೇಕಾದ್ದು ನಮ್ಮ ಧರ್ಮವಾಗಿದೆ. ಆದ್ದರಿಂದ ಸರ್ಕಾರ ಇದರ ಬಗ್ಗೆ ಶೀಘ್ರವಾಗಿ ಪರಿಶೀಲನೆ ಮಾಡಿ, ಯಾವ ಮಾರ್ಗದಲ್ಲಿ ಇವರಿಗೆ ನಿಯಮ ಬದ್ಧ ವಾದ ಅನುಮತಿಗಳನ್ನು ನೀಡಬಹುದು ಮತ್ತು ಎಷ್ಟು ತೆರಿಗೆಯನ್ನು ವಸೂಲಿ ಮಾಡಿಕೊಳ್ಳಬಹುದು, ಇವರಿಗೆ ಇನ್ಸೂರೆನ್ಸ್ ಮತ್ತು ಡ್ರೈವಿಂಗ್ ಲೈಸೆನ್ಸ್ ಪಡೆದುಕೊಳ್ಳುವುದರ ಬಗ್ಗೆ ಮಾಹಿತಿ ನೀಡಿ, ಇಂತಹ ನೂರಾರು ಗಾಡಿಗಳನ್ನ, ಜಿಲ್ಲೆಗೆ ಸಾವಿರಾರು ಗಾಡಿಗಳನ್ನ, ರಾಜ್ಯಕ್ಕೆ ಲಕ್ಷಾಂತರ ಗಾಡಿಗಳನ್ನ ಅಧಿಕೃತ ಮಾಡಿ ಕೊಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

ಇವರು ಸಹ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ, ಗಾಡಿ ರಿಪೇರಿ ಮಾಡಿಸಿಕೊಳ್ಳಲು 80000 ಖರ್ಚು ಮಾಡಿ, ತಮ್ಮ ಜೀವನವನ್ನು ನಿರ್ವಹಿಸುತ್ತಿರುವುದು ಒಂದು ಒಳ್ಳೆಯ ಲಕ್ಷಣವೇ, ನ್ಯಾಯಯುತವಾಗಿ ದುಡಿಯುವ ಜನರಿಗೆ ದಾರಿ ತೋರಿಸಬೇಕಾಗಿದ್ದು ಜಿಲ್ಲಾಡಳಿತ ಮತ್ತು ಸರ್ಕಾರದ ಕರ್ತವ್ಯವಾಗಿದೆ. ನಾವು ಪ್ರತಿಸಾರಿಯು ಬ್ರಿಟಿಷರ ಆಡಳಿತದಂತೆ ಹಳೆಯ ವಿಚಾರಗಳನ್ನು ಇಟ್ಟುಕೊಂಡು, ಕಾನೂನು ರೂಪಿಸುವುದಕ್ಕಿಂತ, ಕಾಲಕಾಲಕ್ಕೆ ನಾವು ಕಾನೂನುಗಳನ್ನ ಬದಲಾಯಿಸಿಕೊಂಡು, ಜನರಿಗೆ ನ್ಯಾಯವಾಗಿ ದುಡಿಯುವಂತಹ ಅವಕಾಶ ಕಲ್ಪಿಸಿ ಕೊಡಬೇಕಾಗಿದೆ ಎಂದು ವಿನಂತಿಸಿಕೊಂಡಿದ್ದಾರೆ.

## ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಸೌಲಭ್ಯ

**ಚಿಕ್ಕಮಗಳೂರು:** ಹಿಂದುಳಿದ ವರ್ಗಗಳ ಪ್ರವರ್ಗ-2ಎ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಫಲಾನುಭವಿಗಳಿಗೆ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಸೇವಾ ಸಿಂಧು ತಂತ್ರಾಂಶ (http://sevasindhu.karnataka.gov.in)ದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಅರ್ಹರು ಸೇವಾ ಸಿಂಧು ಪೋರ್ಟಲ್ ಆನ್‌ಲೈನ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 2ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್ (http://www.dbcdc.karnataka.gov.in) ವಿಳಾಸವನ್ನು ಅಥವಾ ತಮ್ಮ ಕಚೇರಿ(08262-295815)ಯನ್ನು ಸಂಪರ್ಕಿಸಬಹುದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ ಸೌಲಭ್ಯ

ಚಿಕ್ಕಮಗಳೂರು: ಹಿಂದುಳಿದ ವರ್ಗಗಳ ಪ್ರವರ್ಗ-3ಎ ಒಕ್ಕಲಿಗ ಸಮುದಾಯಕ್ಕೆ ಸೇರಿದ ಫಲಾನುಭವಿಗಳಿಗೆ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಸೇವಾ ಸಿಂಧು ತಂತ್ರಾಂಶ (http://sevasindhu.karnataka.gov.in)ದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ಒಕ್ಕಲಿಗ ಸಮುದಾಯಕ್ಕೆ ಸೇರಿದ ಅರ್ಹರು ಸೇವಾ ಸಿಂಧು ಪೋರ್ಟಲ್ ಆನ್‌ಲೈನ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 2ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್ (http://www.dbcdc.karnataka.gov.in) ವಿಳಾಸವನ್ನು ಅಥವಾ ತಮ್ಮ ಕಚೇರಿ(08262-295815)ಯನ್ನು ಸಂಪರ್ಕಿಸಬಹುದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರ ಆಶ್ರಯ ಸಮಿತಿ ಸಭೆ

**ಚಿಕ್ಕಮಗಳೂರು:** ನಗರ ಆಶ್ರಯ ಸಮಿತಿ ಸಭೆಯು ನಗರಸಭೆಯ ಸಭಾಂಗಣದಲ್ಲಿ ಜೂ.9 ರಂದು ಮಧ್ಯಾಹ್ನ 3.30 ಗಂಟೆಗೆ ಸಮಿತಿ ಅಧ್ಯಕ್ಷರೂ, ಚಿಕ್ಕಮಗಳೂರು ಕ್ಷೇತ್ರದ ಶಾಸಕರೂ ಆದ ಹೆಚ್.ಡಿ.ತಮ್ಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಡಿನಿಂದ ನಾಡಿಗೆ ಬಂದ ಕರಡಿಗಳು, ಜನರಲ್ಲಿ ಆತಂಕ

**ಕೊರಟಗೆರೆ,ಜೂ.4**- ಆಹಾರ ಅರಸಿ ಕಾಡಿನಿಂದ ನಾಡಿಗೆ ಬಂದ ಎರಡು ಕರಡಿಗಳು ಪ್ರತ್ಯೇಕವಾಗಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಕಾಣಿಸಿಕೊಂಡಿರುವುದು ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾದಂತಾಗಿದೆ.

ಪಟ್ಟಣದ ಪ್ರಮುಖ ರಾಜ್ಯ ರಸ್ತೆ ಮಧುಗಿರಿ-ತುಮಕೂರು ಪ್ರಮುಖ ರಸ್ತೆಯಲ್ಲಿ ಒಂದು ಕರಡಿ ಕಾಣಿಸಿಕೊಂಡರೆ, ಕಾಳಿದಾಸ ಪ್ರೌಢಶಾಲೆಯ ಹಿಂಭಾಗದ ರಸ್ತೆಯಲ್ಲಿ ಮತ್ತೊಂದು ಕರಡಿ ಕಾಣಿಸಿಕೊಂಡಿದ್ದು ರಾತ್ರಿ ವೇಳೆ ಸಾರ್ವಜನಿಕರು ಓಡಾಡಲು ಭಯ ಮೂಡಿದಂತಾಗಿದೆ.


ಕಾಡಮೃಗಗಳು ಇತ್ತೀಚಿಗೆ ಆಹಾರ ಅರಸಿ ನಾಡಿನತ್ತ ಧಾವಿಸುತ್ತಿದ್ದು, ಕೊರಟಗೆರೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಎರಡು ಕಡೆ ಪ್ರತ್ಯೇಕವಾಗಿ ರಾತ್ರಿ ವೇಳೆ ಕರಡಿಗಳು ರಾಜ ಗಾಂಭೀರ್ಯವಾಗಿ ನಡೆದಾಡುತ್ತಿರುವುದು ಸಿ ಸಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಯಾವುದೇ ಭಯವಿಲ್ಲದೆ ರಸ್ತೆಯಲ್ಲಿ ಬೀದಿ ದೀಪಗಳ ನಡುವೆ ನಡೆದಾಡುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

## ಶಿವಮೊಗ್ಗ: ಆರ್‌ಸಿಬಿ ವಿಜಯೋತ್ಸವದ ವೇಳೆ ಬೈಕ್ ಗಳ ಮುಖಾಮುಖಿ ಡಿಕ್ಕಿ; ಅಪಘಾತದಲ್ಲಿ ಯುವಕ ಸಾವು

**ಶಿವಮೊಗ್ಗ:** ಐಪಿಎಲ್ ಫೈನಲ್ ನಲ್ಲಿ ಆರ್‌ಸಿಬಿ ತಂಡ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಮಂಗಳವಾರ ತಡರಾತ್ರಿ ಸಂಭ್ರಮಾಚರಣೆ ವೇಳೆ ಎರಡು ಬೈಕ್ ಗಳ ನಡುವೆ ನಡೆದ ಮುಖಾಮುಖಿ ಡಿಕ್ಕಿಯಲ್ಲಿ ಯುವಕ ಸಾವಿಗೀಡಾಗಿದ್ದಾನೆ.ವೆಂಕಟೇಶ ನಗರದ ನಿವಾಸಿ ಅಭಿನಂದನ್ (21) ಮೃತ ಯುವಕ. ಉಷಾ ನರ್ಸಿಂಗ್ ಹೋಂ ಸರ್ಕಲ್ ಬಳಿಯ ರವೀಂದ್ರ ನಗರ ಗಣಪತಿ ದೇವಸ್ಥಾನದ ಮುಂದೆ ಅಪಘಾತ ಸಂಭವಿಸಿದೆ.

ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಗೆ ಯುವಕರು ಬೈಕ್ ಗಳಲ್ಲಿ ಹೊರಟಿದ್ದರು. ಈ ಸಂದರ್ಭ ಎರಡು ಬೈಕುಗಳು ಮುಖಾಮುಖಿ ಡಿಕ್ಕಿಯಾಗಿವೆ. ತೀವ್ರ ಗಾಯಗೊಂಡಿದ್ದ ಅಭಿನಂದನ್ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ. ಘಟನೆಯಲ್ಲಿ ಇನ್ನೊಂದು ಬೈಕ್‌ನಲ್ಲಿದ್ದ ಮಿಥುನ್ ಹಾಗೂ ಅಭಿಷೇಕ್ ಗಾಯಗೊಂಡಿದ್ದಾರೆ.

# ಹುಲಿ ಪಥ ನಾಶವೂ... ದುರಂತ ಕಥನವೂ..



ಈಗೊಂದು 75-80 ವರ್ಷಗಳ ಹಿಂದೆ ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ತ್ಯಾಗರ್ತಿ ಭಾಗದಲ್ಲಿ ಹುಲಿಗಳು ಹೇರಳವಾಗಿ ಇದ್ದವು. ಅಲ್ಲಿನ ಕಾಡುಗಳಲ್ಲಿ ಒಂದು ಜಾತಿಯ ಹುಲ್ಲು ಹೆಚ್ಚಾಗಿ ಬೆಳೆಯುತ್ತಿತ್ತು. ಇದನ್ನು ಗಮನಿಸಿದ ಆಗಿನ ಸರ್ಕಾರ ಹಳ್ಳಿಗರಿಗೆ ಜಾನುವಾರು ಸಾಕಲು ಪ್ರೋತ್ಸಾಹ ನೀಡಿದ್ದರಿಂದ, ಹುಲ್ಲು ಮೇಯಲು ಕಾಡಿಗೆ ಜಾನುವಾರುಗಳನ್ನು ಬಿಡುವ ಪರಿಪಾಟ ಪ್ರಾರಂ ಭವಾಯಿತು. ಆ ಕಾಡಿನ ಹುಲಿಯೊಂದಕ್ಕೆ ಕಾಡುಪ್ರಾಣಿಗಳನ್ನು ಬೇಟೆಯಾಡುವುದಕ್ಕಿಂತ ಸಾಕಿದ ಜಾನುವಾರುಗಳನ್ನು ಬೇಟೆಯಾಡುವುದೇ ಸುಲಭ ಮತ್ತು ಸುರಕ್ಷಿತವೆಂದು ತೋರಿತೆಂದು ಕಾಣುತ್ತದೆ. ಹಳ್ಳಿಗರ ಜಾನುವಾರುಗಳನ್ನು ಹಿಡಿಯಲು ಪ್ರಾರಂ ಭಿಸಿತು. ಬಲುಬೇಗನೆ ಅದು ವನ್ಯಪ್ರಾಣಿಗಳ ಬೇಟೆ ನಿಲ್ಲಿಸಿತು. ಸಾಕಿದ ದನಗಳನ್ನು ರಾಜಾರೋ ಷವಾಗಿ ಹಿಡಿದು ತಿನ್ನುವ ಹುಲಿಯನ್ನು ಹೇಗಾದರೂಮಾಡಿ ಕೊಲ್ಲಬೇಕೆಂಬ ಹಳ್ಳಿಗರ ಪ್ರಯತ್ನ ವಿಫಲವಾದ ಕಾರಣಕ್ಕೆ ಆ ಹುಲಿ ನರಭಕ್ಷಕವಾಗಿ ಪರಿವರ್ತಿ ತವಾಯಿತು. ನರಭಕ್ಷಕ ಹುಲಿಗಳನ್ನು ಕೊಲ್ಲುವ ಕೆನೆತ್ ಆಂಡರ್ಸನ್ ಬಂದು ಆ ಹುಲಿಯನ್ನು ಕೊಲ್ಲುತ್ತಾನೆ. ಈ ಘಟನೆಯನ್ನು ಕೆ.ಪಿ.ಪೂರ್ಣಚಂದ್ರ ತೇಜಸ್ವಿಯವರ 'ಬೆಳ್ಳಂದೂರಿನ ನರಭಕ್ಷಕ' ಎಂಬ ಕಾಡಿನಕಥೆಯಲ್ಲಿ ವಿವರಿಸಲಾಗಿದೆ.

ನಿರಂತರ ಬೇಟೆ ಕಾರಣಕ್ಕೆ ಈಗ್ಗೆ ನೂರು ವರ್ಷಗಳ ಹಿಂದೆ ಭಾರತದ ಕಾಡುಗಳಲ್ಲಿದ್ದ ಹುಲಿಗಳ ಸಂಖ್ಯೆ ಲಕ್ಷದಿಂದ ಸಾವಿರಕ್ಕಿಳಿಯಿತು. ಸ್ವಾತಂತ್ರ್ಯ ಪೂರ್ವದ ಬ್ರಿಟಿಷ್ ಆಡಳಿತ ಮತ್ತು ಸ್ವಾತಂತ್ರ್ಯೋತ್ತರ ಭಾರತ ಸರ್ಕಾರ ಹುಲಿ ಬೇಟೆಗೆ ಪ್ರೋತ್ಸಾಹ ನೀಡುತ್ತಿದ್ದವು. 1965ರವರೆಗೂ ಹುಲಿಯನ್ನು ಕೊಂದು ಅದರ ಬಾಲವನ್ನು ಜಿಲ್ಲಾಧಿಕಾರಿಗೆ ನೀಡಿ, ಒಂದು ನೂರು ರೂಪಾಯಿ ಇನಾಮು ಪಡೆಯಬಹುದಿತ್ತು. ಹುಲಿಯನ್ನು ಬೇಟೆಯಾಡುವುದು ಸಮಾಜದಲ್ಲಿ ಪ್ರತಿಷ್ಠೆಯ ಸಂಗತಿಯಾಗಿತ್ತು.

ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗ ವನ್ಯಜೀವಿಗಳ ಸಂರಕ್ಷಣೆಗಾಗಿ ವನ್ಯಜೀವಿ ಕಾಯ್ದೆ 1972 ಅನ್ನು ಜಾರಿಗೆ ತಂದರು. ಇದರಿಂದ ಹುಲಿ, ಸಿಂಹ, ಆನೆ, ಚಿರತೆಗಳಿಗೆ ಅತಿ ಹೆಚ್ಚು ರಕ್ಷಣೆ ದೊರಕಿತು. ಆಗಿನ ಕೇಂದ್ರ ಸರ್ಕಾರ ಹುಲಿಗಳ ಸಂ ರಕ್ಷಣೆಮಾಡಲೇ ಬೇಕು ಎಂದು ಸಂಕಲ್ಪ ತೊಟ್ಟು, 1973ರಲ್ಲಿ ಹುಲಿಯೋಜನೆಯನ್ನು

ಪ್ರಾರಂಭಿಸಿತು. ಈಗ ಭಾರತ ಹೆಚ್ಚು ಹುಲಿಗಳನ್ನು ಹೊಂದಿದ ದೇಶವೆಂದು ಪರಿಗಣಿಸಲ್ಪಟ್ಟಿದೆ. ಹಾಗಾದರೆ ಹುಲಿಗಳ ರಕ್ಷಣೆ ಬಹಳ ಸಮರ್ಥ ವಾಗಿ ಆಗುತ್ತಿದೆಯೇ ಎಂಬುದನ್ನು ಮುಂದೆ ನೋಡೋಣ.

ಹುಲಿಮೂಲತಃ ಅತ್ಯಂತ ನಾಚಿಕೆ ಸ್ವಭಾವದ ಪ್ರಾಣಿ. ದಟ್ಟವಾದ ಕಾಡಿನಲ್ಲಿ ನೀವು ಪ್ರತಿದಿನ ತಿರುಗಾಡುತ್ತೀರಿ, ಅದು ಹುಲಿಯ ಆವಾಸಸ್ಥಾನವೂ ಆಗಿದೆ ಎಂದುಕೊಳ್ಳಿ. ಹುಲಿ ತಜ್ಞರ ಪ್ರಕಾರ, ನೀವು ಹುಲಿಯನ್ನು ಎದುರಿಸುವ ಸಂದರ್ಭ ತೀರಾ ಕಡಿಮೆ. ಹುಲಿ ನಿಮ್ಮನ್ನು ನೂರು ಬಾರಿ ನೋಡಿದ್ದರೆ, ನೀವು ಹುಲಿಯನ್ನು ಒಮ್ಮೆ ಮಾತ್ರ ನೋಡಲು ಸಾಧ್ಯ. ಇದಕ್ಕೆ ಪೂರಕವಾದ ಒಂದು ಘಟನೆ ಹೀಗಿದೆ.

ದೀರ್ಘ ಪಯಣದ ಕಥೆ

ಮಹಾರಾಷ್ಟ್ರದ ತಾಡೋಬ ಹುಲಿ ಸಂರಕ್ಷಿತ ಪ್ರದೇಶದ ರಾಯಲ್ ಬೆಂಗಾಲ್ ಹುಲಿಯೊಂದು ಎರಡು ಸಾವಿರ ಕಿಲೋ ಮೀಟರ್ ದೂರದ ಅತಿ ದೀರ್ಘ ಪಯಣವನ್ನು ಪೂರ್ಣಗೊಳಿಸಿದ ಅಪೂರ್ವ ಪ್ರಸಂಗವಿದು. ಛತ್ತೀಸ್‌ಗಢ, ತೆಲಂಗಾಣ, ಆಂಧ್ರಪ್ರದೇಶಗಳನ್ನು ದಾಟಿ ಒಡಿಶಾ ತಲುಪಿದ ಅಸಾಧಾರಣ ರೋಚಕ ಘಟನೆ. ನಾಲ್ಕು ರಾಜ್ಯಗಳ, ಕಾಡುಮೇಡು, ಗುಡ್ಡಬೆಟ್ಟಗಳನ್ನು ಬಳಸಿಕೊಂಡು, ಕೃಷಿ ಜಮೀನು ಹಾದು, ಗಣಿ ಪ್ರದೇಶವನ್ನು ದಾಟಿ, ಅತ್ತ ಜನವಸತಿ ಪ್ರದೇಶಗಳನ್ನೂ ನಿರಾಯಾಸವಾಗಿ ಸಾಗಿ ತನ್ನ ಗಮ್ಯವನ್ನು ತಲುಪಿ, ಹೊಸನೆಲೆಯನ್ನು ಮತ್ತು ಸಂಗಾತಿಯನ್ನು ಸೇರಿಕೊಂಡಿದ್ದನ್ನು ದಾಖಲಿಸಲಾಗಿದೆ. ತಿಂಗಳುಗಟ್ಟಲೆ ಕ್ರಮಿಸಿದ ಈ ದೀರ್ಘ ಪಯಣದಲ್ಲಿ ಮನುಷ್ಯನ ಜೊತೆ ಒಂದೇ ಒಂದು ಸಂಘರ್ಷವಾದ ದಾಖಲೆಯಿಲ್ಲದಿರುವುದು ಈ ಹುಲಿಯ ಪಯಣದ ವಿಶಿಷ್ಟತೆಯಾಗಿದೆ.

ಮಹಾರಾಷ್ಟ್ರದ ಚಂದ್ರಪುರ ಜಿಲ್ಲೆಯ ತಾಡೋಬ ಹುಲಿ ಸಂರಕ್ಷಿತ ಪ್ರದೇಶದ ಬ್ರಹ್ಮಪುರಿ ಅರಣ್ಯ ವಿಭಾಗದ ವ್ಯಾಪ್ತಿಯಲ್ಲಿ 2021ರಲ್ಲಿ ಕ್ಯಾಮೆರಾ ಟ್ರ್ಯಾಪಿನಲ್ಲಿ ಈ ಹುಲಿಯ ಪಯಣವನ್ನು ಪತ್ತೆ ಮಾಡಲಾಗಿತ್ತು. ಪ್ರತಿ ಮನುಷ್ಯರ ಕೈಬೆರಳಚ್ಚು ಹೇಗೆ ಭಿನ್ನವಾಗಿರುತ್ತದೆಯೋ ಹಾಗೆಯೇ ಹುಲಿಗಳ ಪಟ್ಟೆಯೂಪ್ರತಿಯೊಂದರಲ್ಲೂ ಭಿನ್ನವಾಗಿರುತ್ತದೆ. ಈ ಪಟ್ಟೆಗಳನ್ನು ಆಧರಿಸಿಯೇ ಹುಲಿಯ ಚಲನವಲನವನ್ನು ಪತ್ತೆ ಮಾಡಬಹುದಾಗಿದೆ.

2023ರ ಜೂನ್-ಜುಲೈ ತಿಂಗಳಲ್ಲಿ ಒಡಿಶಾದ ರಾಯಗಢ ಜಿಲ್ಲೆಯಲ್ಲಿ ಮೊದಲ ಬಾರಿಗೆ ಹುಲಿ ಕಂಡು ಬಂದಿತು. ಆಂಧ್ರ ಪ್ರದೇಶದ ಶ್ರೀಕಾಕುಲಂ ಮತ್ತು ಮಹೇಂದ್ರಗಿರಿ ಅರಣ್ಯ ವಿಭಾಗದಲ್ಲಿ ಸಂಚರಿಸುತ್ತಿರುವಮಾಹಿತಿ ಅಲ್ಲಿನ ಅರಣ್ಯ ಇಲಾಖೆಯವರಿಗೆ ಇತ್ತು. ಸೆಪ್ಟೆಂಬರ್ 2023ರಲ್ಲಿ ಗಜಪತಿ ಜಿಲ್ಲೆಯ ಪರ್ಲಾಕೆಮುಂಡಿ ಅರಣ್ಯವಿಭಾಗದಲ್ಲಿ ಒಂದು ಹಸುವನ್ನು ಕೊಂದ ಘಟನೆ ದಾಖಲಾಯಿತು. ಈ ಭಾಗದಲ್ಲಿ ಕಳೆದುಮೂವತ್ತು ವರ್ಷಗಳಲ್ಲಿ ಹುಲಿ ಕಂಡು ಬಂದ ಘಟನೆ ದಾಖಲಾಗಿರಲಿಲ್ಲ.

ವಲಸೆ ಹುಲಿಯ ಚಲನವಲನದ ಮೇಲೆ ನಿಗಾ ಇಟ್ಟಿರುವ ಒಡಿಶಾ ಅರಣ್ಯ ಇಲಾಖೆಯು ಸ್ಥಳೀಯರಿಗೆ ರಾತ್ರಿ ಸಮಯದಲ್ಲಿ ಮನೆಯಿಂದ ಆಚೆ ಬಾರದಂತೆ ಎಚ್ಚರಿಕೆ ನೀಡುತ್ತಾ, ಹುಲಿ ಸಂರಕ್ಷಣೆಗೆ ಒತ್ತು ಕೊಡುತ್ತಿದೆ. ಜೊತೆಗೆ ಹಸುವನ್ನು ಕಳೆದುಕೊಂಡವರಿಗೆ ಪರಿಹಾರವನ್ನೂ ನೀಡುತ್ತಿದೆ.

ಅನೇಕ ಅಡಚಣೆಗಳನ್ನು ನಿವಾರಿಸಿಕೊಂಡು ಎರಡು ಸಾವಿರ ಕಿ.ಮೀ ದೂರದ ಸಾಹಸಮಯ ಪಯಣವನ್ನು ಪೂರೈಸಿ.ಹೊಸ ನೆಲೆಯನ್ನು ಹಾಗೂ ಸಂಗಾತಿಯನ್ನು ಕಂಡುಕೊಂಡ ಈ ಅಪೂರ್ವ ಘಟನೆಯು ಸಂರಕ್ಷಣೆಯಹೊಸ ಆಯಾಮಗಳಿಗೆ ನಾಂದಿಯಾಗಿದೆ. ಗಡಿ-ಭಾಷೆಗಳಿಲ್ಲದ ವನ್ಯ ಸಂತತಿಗಳಿಗೆ ಸರಾಗವಾಗಿ ಒಂದು ರಾಜ್ಯದಿಂದ ಮತ್ತೊಂದು ರಾಜ್ಯಕ್ಕೆ ಸಂಚರಿಸಲು ಅಡಚಣೆಯಾಗುವ ಅಣೆಕಟ್ಟು, ಗಣಿ ಪ್ರದೇಶ,ಹೊಸ ನಗರಗಳ ನಿರ್ಮಾಣ, ಹೆದ್ದಾರಿ, ರೈಲುಮಾರ್ಗಗಳು ಅಥವಾ ಇನ್ಯಾವುದೇ ರೀತಿಯ ಅಭಿವೃದ್ಧಿ ವರಸೆಗಳನ್ನು ಮರು ಪರಿಷ್ಕರಣೆಮಾಡುವ ಅಗತ್ಯವನ್ನು ಎತ್ತಿ ತೋರಿಸುತ್ತದೆ. ಬರೀ ಸೀಮಿತ ಪರಿಧಿಯಲ್ಲಿ ವನ್ಯಜೀವಿಗಳು ಬದುಕುವುದಕ್ಕೆ ಬಯಸುವುದಿಲ್ಲ. ಅವುಗಳ ಮುಕ್ತ ಸಂಚಾರಕ್ಕೆ ಅನುವಾಗುವಂತೆ ನಮ್ಮ ಅಭಿವೃದ್ಧಿ ಮಾದರಿ ಇರಬೇಕು ಎನ್ನುವುದಕ್ಕೆ ಈ ಘಟನೆ ಒಂದು ಜ್ವಲಂತ ನಿದರ್ಶನವಾಗಿದೆ.ಹೆಚ್ಚು ಸಾಂದ್ರತೆಹೊಂದಿರುವ ಪ್ರದೇಶದಿಂದ ಹುಲಿಗಳು ಕಡಿಮೆ ಸಾಂ ದ್ರತೆ ಇರುವ ಪ್ರದೇ ಶಕ್ಕೆ ತೆರಳುತ್ತವೆ ಎಂಬುದು ಇಲಾಖೆ ಮತ್ತು ಬಹಳಷ್ಟು ಹುಲಿ ತಜ್ಞರ ಸಾಮಾನ್ಯ ಅಭಿಪ್ರಾಯ. 2017ರಲ್ಲಿ ಕಡಿಮೆ

ಸಾಂದ್ರತೆಯಿರುವ ಭದ್ರಾ ಅಭಯಾರಣ್ಯದ ಆಲದಹಾರದ ಹುಲಿಯೊಂದು 2021ರಲ್ಲಿ ಹೆಚ್ಚು ಸಾಂದ್ರತೆಯಿರುವ ನಾಗರಹೊಳೆಯಲ್ಲಿ ಕಂಡು ಬಂದಿತು. ಇದು ಅರಣ್ಯ ಇಲಾಖೆಯ ಲೆಕ್ಕಾಚಾರವನ್ನು ಬುಡಮೇ ಲುಮಾಡಿದ ಘಟನೆ. ಇಂತಹ ಘಟನೆಯಿಂದ ಪಾಠ ಕಲಿಯುವ ಮೂಲಕ ಕರ್ನಾಟಕ ಅರಣ್ಯ ಇಲಾಖೆ ತನ್ನ ಧೋರಣೆಗಳನ್ನು ಇನ್ನಷ್ಟು ಪಕ್ವಗೊಳಿಸಿ ಕೊಳ್ಳಬೇಕು.ಹಾಸನ ಜಿಲ್ಲೆಯ ಬೇಲೂರು ಸಮೀಪದ ರಾಮದೇವರ ಹಳ್ಳದಲ್ಲಿ ಹುಲಿಯ ಮೃತದೇಹ ಅಲ್ಲಿ ಹುಲಿಯೊಂದು ಮಹಾರಾಷ್ಟ್ರದ ತಾಡೋಬದಿಂದ ಒಡಿಶಾಕ್ಕೆ ಹೊರಡುತ್ತಿರುವ ಹೊತ್ತಿನಲ್ಲೇ ಕರ್ನಾಟಕ ಅರಣ್ಯ ಇಲಾಖೆ ರೇಡಿಯೊಕಾಲರ್ ಅಳವಡಿಸಿದ ಹುಲಿಯನ್ನು ಎಚ್ಚರ ತಪ್ಪಿಸಿ ಮೈಸೂರು ಭಾಗದಿಂದ ಚಿಕ್ಕಮಗಳೂರಿನ ಭದ್ರಾ ಅಭಯಾರಣ್ಯಕ್ಕೆ ತಂದು ಬಿಟ್ಟಿತು. ಒಂದು ಪ್ರದೇಶದಲ್ಲಿ ನೈಸರ್ಗಿಕವಾಗಿ ಹುಲಿಗಳ ಸಂಖ್ಯೆ ಆ ಪ್ರದೇಶದ ಧಾರಣ ಸಾಮರ್ಥ್ಯಕ್ಕಿಂತ ಹೆಚ್ಚಾದಾಗ, ಒಂದೋಪ್ರಾಯದ ಗಂಡು ಹುಲಿ ವಯಸ್ಸಾದ ಗಂಡು ಹುಲಿಯನ್ನು ಬಲಿ ಹಾಕುತ್ತದೆ ಅಥವಾಹೊಸ ನೆಲೆಯನ್ನು ಹುಡುಕಿಕೊಂಡು ಹೋಗುತ್ತದೆ. ಮೈಸೂರು ಭಾಗದಲ್ಲಿ ಹುಲಿ ಸಂಖ್ಯೆ ಹೆಚ್ಚಳವಾಗಿದ್ದರೆ, ನೈಸರ್ಗಿಕವಾಗಿಯೇ ಅದನ್ನು ಸರಿಪಡಿಸಿಕೊಳ್ಳುವ ಸಾಮರ್ಥ್ಯ ಅವುಗಳಿಗೆ ಇತ್ತು. ಬಂಡಿ ಪುರದ ಮೂಲಕ ಭದ್ರಾ ಅಭಯಾರಣ್ಯಕ್ಕೆ ಬರಲು ನೈಸರ್ಗಿಕ ಪಥವೇ ಲಭ್ಯವಿತ್ತು. ರಾಷ್ಟ್ರೀಯ ಹುಲಿ ಪ್ರಾಧಿಕಾರದಮಾರ್ಗ ಸೂಚಿಯ ಪ್ರಕಾರ ಎರಡು ಅಭಯಾರಣ್ಯಗಳ ಮಧ್ಯೆ ಹುಲಿಗಳ ಸಂಚಾರಕ್ಕೆ ನೈಸರ್ಗಿಕ ಪಥ ಲಭ್ಯವಿದ್ದಾಗ, ಯಾವುದೇ ಕಾರಣಕ್ಕೂ ಹುಲಿಯನ್ನು ಹಿಡಿದು ಮತ್ತೊಂದು ಭಾಗದಲ್ಲಿ ಬಿಡುವ ಹಾಗಿಲ್ಲ. ಆದರೆ, ಇಲ್ಲಿ ಅರಣ್ಯ ಇಲಾಖೆ ಹಸ್ತಕ್ಷೇ ಪಮಾಡಿದ್ದರಿಂದ ಯಡವಟ್ಟಾಯಿತು. ರಾಷ್ಟ್ರೀಯ ಹುಲಿ ಪ್ರಾಧಿಕಾರದ ಹುಲಿ ಸ್ಥಳಾಂತರಿಸುವ ಮಾರ್ಗಸೂಚಿಯನ್ನು ಮೀರಿ, ಹುಲಿಯನ್ನು ಬಲವಂತವಾಗಿ ಸ್ಥಳಾಂತರಿಸಿದ್ದರಿಂದ ಭದ್ರಾ ಅಭಯಾರಣ್ಯದಲ್ಲಿ ಆ ಹುಲಿಗೆ ಸೂಕ್ತ ನೆಲೆ ಲಭಿಸಲಿಲ್ಲ. ನೆಲೆ ಗುರುತಿಸಿಕೊಳ್ಳುವ ಅದರ ಹುಟ್ಟುಗುಣ ಮನುಷ್ಯ ಹಸ್ತಕ್ಷೇಪದಿಂದ


ಏರುಪೇರಾಯಿತು. ದಿಕ್ಕು ತಪ್ಪಿದ ಹುಲಿ ಗೊತ್ತು ಗುರಿಯಿಲ್ಲದೇ ಅಲೆಯ ತೊಡಗಿತು. ಕಾಡಿನಲ್ಲಿ ನಿರಾಳವಾಗಿದ್ದ ಅದು, ಭದ್ರಾ ಅಭಯಾರಣ್ಯಕ್ಕೆ



ಬಲವಂತವಾಗಿ ಸ್ಥಳಾಂ ತರಿಸಿದ ನಂತರದಲ್ಲಿ, ತನ್ನ ಸ್ವಭಾವವನ್ನು ಬದಲಿಸಿಕೊಂಡಿತು. ಹತ್ತಾರು ಜಾನುವಾರುಗಳು ಆ ಹುಲಿಗೆ ಬಲಿಯಾದವು. ರೈತರ, ಹೈನುಗಾರರ,ಮೇ ಕೆ ಸಾಕುವವರ ಸಹನೆ ತಪ್ಪಿತು. ಹುಲಿಗೊಂದು ಗತಿ ಕಾಣಿಸಲು ಮುಂದಾದರು. ಫೆಬ್ರುವರಿ 10, 2025ರಂದು ಹಾಸನ ಜಿಲ್ಲೆಯ ಬೇಲೂರು ಸಮೀಪದ ರಾಮದೇವರ ಹಳ್ಳದಲ್ಲಿ ಆ ಹುಲಿಯ ಕಳೇ ಬರ ತೇಲುತ್ತಿತ್ತು. ತಡೋಬದ ಹುಲಿಗೆ ಇದ್ದ ಅದೃಷ್ಟ ಮೈಸೂರಿನಿಂದ ಬಲವಂತವಾಗಿ ಸ್ಥಳಾಂತರಿಸಿದ ಹುಲಿಗೆ ಇರಲಿಲ್ಲ.

ಯಥಾಪ್ರಕಾರ ಅರಣ್ಯ ಇಲಾಖೆ ನಿತ್ರಾಣದಿಂದ ಹುಲಿ ಸಾವನ್ನಪ್ಪಿದೆ ಎಂದು ಘೋಷಿಸಿ ಕೈತೊಳೆದುಕೊಂಡಿತು. ಈ ಮೊದಲೇ ಹೇಳಿದಂತೆ, ತ್ಯಾಗರ್ತಿ

ಭಾಗದಲ್ಲಿ ಸ್ಥಳೀಯವಾಗಿ ಹುಲಿ ಪ್ರಭೇದ ನಶಿಸಿಹೋಗಿಯಾವುದೋ ಕಾಲವಾಗಿತ್ತು. ರಾಷ್ಟ್ರ ಮಟ್ಟದಲ್ಲಿ ಹುಲಿಗಳ ಸಂಖ್ಯೆ ಭಾರತದ ಮಟ್ಟಿಗೆ ಹೆಚ್ಚಾಗಿದ್ದರೂ, ಪಶ್ಚಿಮಘಟ್ಟಗಳಲ್ಲಿ ಹುಲಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ. 2018ರ ಹುಲಿ ಗಣತಿಯಲ್ಲಿ ಪಶ್ಚಿಮಘಟ್ಟದಲ್ಲಿ 981 ಹುಲಿಗಳಿದ್ದವು.2022ರಹೊತ್ತಿಗೆ ಹುಲಿಗಳ ಸಂಖ್ಯೆ 824ಕ್ಕೆ ಇಳಿಯಿತು. ನಾಲ್ಕು ವರ್ಷಗಳಲ್ಲಿ 157 ಹುಲಿಗಳನ್ನು ಪಶ್ಚಿಮಘಟ್ಟ ಕಳೆದುಕೊಂಡಿದೆ. ಫೆಬ್ರುವರಿ 17, 2025 ರಂದು ಶಿವಮೊಗ್ಗ ಜಿಲ್ಲೆಯ ಸಾಗರ-ಶಿಕಾರಿಪುರ ಗಡಿಯಂಚಿನ ಅಂಬ್ಲಿಗೊಳ ಜಲಾಶಯದಲ್ಲಿ ಮೀನು ಹಿಡಿಯಲುಹೋದವರಿಗೆ ತೇಲುತ್ತಿರುವ ಹುಲಿಯ ಕಳೇ ಬರ ಕಂಡು ಬಂತು. ತಕ್ಷಣ ಅರಣ್ಯ ಇಲಾಖೆಗೆ ವಿಷಯ ತಿಳಿಸಿದರು. ಸಾಗರ ವಿಭಾಗದ ಅರಣ್ಯ ಇಲಾಖೆಯುಹುಲಿಯ ಮರಣೋತ್ತರ ಪರೀಕ್ಷೆ ನಡೆಸಿತು. ಮಾರ್ಗ ಸೂಚಿಯ ಪ್ರಕಾರ ಹುಲಿಯ ಮರಣೋತ್ತರ ಪರೀಕ್ಷೆಯ ಸಮಯದಲ್ಲಿ ಹುಲಿ ತಜ್ಞ ಹಾಗೂ ಹುಲಿ ಸಂರಕ್ಷಣೆಯಲ್ಲಿ ಕೆಲಸಮಾಡಿದ ಅನುಭವವಿರುವ ಸರ್ಕಾರೇ ತರ ಸಂಸ್ಥೆಯ ಪ್ರತಿನಿಧಿ ಹಾಜರಿದ್ದು, ದೃಢೀಕರಿಸಬೇಕು. ಹುಲಿ ಗುಂಡೇಟಿನಿಂದ ಸತ್ತಿದ್ದರೆ, ಅದನ್ನು ತಕ್ಷಣದಲ್ಲಿ ಪತ್ತೆ ಹಚ್ಚಲು ಮೆಟಲ್ ಡಿಟೆಕ್ಟರ್ ಸಾಧನವನ್ನು ಬಳಕೆಮಾಡಬೇಕು... ಇತ್ಯಾದಿಗಳು. ಸಾಗರ ಪ್ರಾದೇ ಶಿಕ ಅರಣ್ಯ ಇಲಾಖೆಯ ಅಧಿಕಾರಿಗಳು ಎಲ್ಲಾ ನಿಯಮಗಳನ್ನೂ ಗಾಳಿಗೆ ತೂರಿ ತಜ್ಞರಲ್ಲದವರನ್ನು ಕರೆಸಿ, ಮರಣೋತ್ತರ ಪರೀಕ್ಷೆಮಾಡಿಸಿದರು. ಅಂಬ್ಲಿಗೊಳ ಜಲಾಶಯದಲ್ಲಿ ಪತ್ತೆಯಾದ ಹುಲಿ ಆಕಸ್ಮಿಕವಾಗಿ ನೀರಿಗೆ ಬಿದ್ದು ಸತ್ತಿರಬಹುದು ಎಂಬ ಬಾಲಿಶ ಹೇಳಿಕೆಯನ್ನು ಅಧಿಕಾರಿಗಳು ಉಸುರಿದರು. ಇದಕ್ಕೆ ಸಾರ್ವ ಜನಿಕರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಂತೆ, ಮರಣೋತ್ತರ ಪರೀಕ್ಷೆಯ ನಂತರದಲ್ಲಿ ನಿಖರ ಕಾರಣ ತಿಳಿಯುತ್ತದೆ ಎಂದು ತಿಪ್ಪೆ ಸಾರಿಸಿದರು. ಹುಲಿಯ ಕತ್ತಿನಲ್ಲಿ ಬಲವಾದ ರಂಧ್ರವಿತ್ತು. ಅಂದರೆ, ಹುಲಿಗೆ ಗುಂಡುಹೊಡೆದು ಸಾಯಿಸಲಾಗಿದೆ ಎಂಬುದು ನಿರ್ವಿವಾದ. ಸ್ಥಳೀಯ ಮಾಹಿತಿದಾರರ ಪ್ರಕಾರ, ಒಂದು ವಾರದ ಮುಂಚೆ ಇದೇ ಹುಲಿ ಬೆಳಂದೂರಿನಲ್ಲಿ ಒಂದು ಕರುವನ್ನು ಹಿಡಿದು ತಿಂದಿತ್ತು. ಬಹುಶಃ ಈ ಹುಲಿಹೊಸ ನೆಲೆಯನ್ನು ಹುಡುಕಿಕೊಂಡು ಕಾಳಿ ಹುಲಿ ಸಂರಕ್ಷಣಾ ಪ್ರದೇಶದತ್ತ ಹೊರಟಿತ್ತೇನೋ? ವನ್ಯಜೀವಿಗಳ ಕುರಿತಾಗಿ ಬಹಳಷ್ಟು



## ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ವಿವಿಧ ಯೋಜನೆಯಡಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ :** ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮವು 2025–26ನೇ ಸಾಲಿಗೆ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆಯಲು ಹಿಂದುಳಿದ ವರ್ಗಗಳ ಪ್ರವರ್ಗ– 2ಎ ಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ ಮತ್ತು ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ) ಸಮುದಾಯಗಳ ಆಸಕ್ತರಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.

ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆನ್ನು ಸೀಡ್ ಮಾಡಿರಬೇಕು. ಒಂದು ಕುಟುಂಬದ ಒಬ್ಬರಿಗೆ ಮಾತ್ರ ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಲ್ಲ. 2023–24 ಮತ್ತು 2024–25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಆಸಕ್ತರು ಸೇವಾಸಿಂಧು ಪೋರ್ಟಲ್ ҁಣಣಠಿ:/ಜತಘಿಟಜಿಷುಣ. ಇಚಿಡಿಟಿಚಿಣಚಿಞಚಿ.ರಠಿತ.ಎಟ ಅಥವಾ ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾಕೇಂದ್ರಗಳಲ್ಲಿ ದಾಖಲೆಗಳ ಸಹಿತ ಜೂನ್ 30 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ರಂಗ ಶಿಕ್ಷಣ ಡಿಪ್ಲೋಮಾಕ್ಕೆ ಅರ್ಜಿ ಆಹ್ವಾನ

**ಗದಗ ;** ಕರ್ನಾಟಕ ರಾಜ್ಯ ಸರಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ್ ರಂಗಪ್ರಯೋಗಶಾಲೆಯ 2025–26 ನೇ ಸಾಲಿನ ರಂಗಶಿಕ್ಷಣಕ್ಕೆ ( ಡಿಪ್ಲೋಮಾ ಇನ್ ಡ್ರಾಮಾ ಆರ್ಟ್ಸ್ ) ಗೆ ಆಸಕ್ತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶಕ್ಕೆ ಕನಿಷ್ಠ ವಿದ್ಯಾರ್ಹತೆ ಎಸ್ ಎಸ್ ಎಲ್ ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆ ಆದ್ಯತೆ ಕೊಡಲಾಗಿದೆ. ರಂಗಭೂಮಿಯಲ್ಲಿ ಆಸಕ್ತಿಯಿದ್ದು ಸ್ವಲ್ಪಮಟ್ಟಿನ ಅನುಭವ ಇರಬೇಕಾದ್ದು ಅಗತ್ಯ. ವಿದ್ಯಾರ್ಥಿ / ವಿದ್ಯಾರ್ಥಿನಿಯರಿಗೆ ಉಚಿತ ಊಟ, ವಸತಿ ಸೌಲಭ್ಯವಿದೆ. ಕರ್ನಾಟಕ ಹಾಗೂ ಭಾರತದ ರಂಗ ತಜ್ಞರಿಂದ ಮತ್ತು ಅತಿಥಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥ ಭಂಡಾರ ಹಾಗೂ ದೃಶ್ಯ , ಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಯ ವಿದ್ಯಾರ್ಥಿಗಳಿಗೆ ಭಾರತೀಯ ರಂಗ ಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಶಿಕ್ಷಣದಲ್ಲಿ ರಂಗಭೂಮಿ ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ. ಅರ್ಜಿಗಾಗಿ ರಂಗಶಾಲೆಯ ವೆಬ್‌ಸೈಟ್ www.theatreschoolsanehalli.org ನಲ್ಲಿ ಪ್ರವೇಶ ಅರ್ಜಿಯನ್ನು ಡೌನ್ ಲೋಡ್ ಮಾಡಿಕೊಂಡು ಜೂನ್ 25 ರೊಳಗೆ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.

## ದ್ವಿತೀಯ ಪಿ.ಯು.ಸಿ. ಪರೀಕ್ಷೆ –3 ವೀಕ್ಷಕರ , ಮಾರ್ಗಾಧಿಕಾರಿಗಳ ಹಾಗೂ ತ್ರಿಸದಸ್ಯ ಸಮಿತಿ ನೇಮಕ

**ಗದಗ :** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2025 ರ ಜೂನ್ ತಿಂಗಳಲ್ಲಿ ಜರುಗುವ ದ್ವಿತೀಯ ಪಿ.ಯು.ಸಿ. ಪರೀಕ್ಷೆ –3 ಪರೀಕ್ಷೆಗಳನ್ನು ಜೂನ್ 9 ರಿಂದ 20 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರ , ಮಾರ್ಗಾಧಿಕಾರಿಗಳ, ತ್ರಿಸದಸ್ಯ ಸಮಿತಿಯನ್ನು ನೇಮಿಸಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಆದೇಶ ಹೊರಡಿಸಿದ್ದಾರೆ.

# ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಕಲುಷಿತವಾಗದಂತೆ ನೋಡಿಕೊಳ್ಳಲು ಸೂಚನೆ; ಪೌರಾಡಳಿತ ಸಚಿವರಾದ ರಹೀಂ ಖಾನ್

**ದಾವಣಗೆರೆ :** ನಗರೋತ್ಥಾನದಡಿ ಮೂರನೇ ಹಂತ ಪೂರ್ಣಗೊಳಿಸಿ 4 ನೇ ಹಂತದಲ್ಲಿ ಅನುದಾನವನ್ನು ನೀಡಲಾಗಿದ್ದು 15 ನೇ ಹಣಕಾಸು ಯೋಜನೆಯಡಿ ಟೆಂಡರ್ ಪ್ರಕ್ರಿಯೆಯನ್ನೆ ನಡೆಸದ ಅಧಿಕಾರಿಗಳ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಅಧಿಕಾರ ನೀಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಜಿಲ್ಲೆಯ ಹರಿಹರ, ಹೊನ್ನಾಳಿ, ಚನ್ನಗಿರಿ, ಮಲೇಬೆನ್ನೂರು, ನ್ಯಾಮತಿ, ಚನ್ನಗಿರಿ, ಜಗಳೂರು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನದಡಿ ಮೂರು ಮತ್ತು 4 ನೇ ಹಂತದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ಈಗಾಗಲೇ ಮೂರನೇ ಹಂತ ಸಂಪೂರ್ಣ ಮುಗಿದಿದೆ. ನಾಲ್ಕನೇ ಹಂತದ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನದಡಿ 70 ಕೋಟಿಗೆ ಕ್ರಿಯಾಯೋಜನೆ ರೂಪಿಸಿ 32.20 ಕೋಟಿ ಬಿಡುಗಡೆ ಮಾಡಲಾಗಿದೆ. ಇದರಲ್ಲಿ 210 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿತ್ತು. 110 ಕಾಮಗಾರಿಗಳು ಮುಕ್ತಾಯವಾಗಿದ್ದು 71 ಕಾಮಗಾರಿಗಳು ಪ್ರಗತಿಯಲ್ಲಿವೆ. ಇನ್ನೂ 13 ಕಾಮಗಾರಿಗಳು ಟ್ರೈರ್‌ನಲ್ಲಿವೆ, 16 ಕ್ಕೆ ಟೆಂಡರ್ ಕರೆಯಲಾಗಿದೆ. ಆದರೆ ಕಳೆದ ಎರಡು ವರ್ಷಗಳಿಂದ ಟೆಂಡರ್ ಹಂತದಲ್ಲಿಯೇ ಅಧಿಕಾರಿಗಳು ಕಾಲಕಳೆಯುತ್ತಿದ್ದು ಇವೆಲ್ಲಾ ಕಾಮಗಾರಿಗಳನ್ನು ಮುಕ್ತಾಯ ಮಾಡುವವರೆಗೆ ಮುಂದಿನ ಹಂತದ ಕಾಮಗಾರಿಗೆ ಅನುದಾನ ನೀಡುವುದಿಲ್ಲ. ಈ ಕಾಮಗಾರಿಗಳನ್ನು ವಿಳಂಬ ಮಾಡಿದ ಅಧಿಕಾರಿಗಳ ಮೇಲೆ ನೋಟಿಸ್ ನೀಡಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಅಧಿಕಾರ ನೀಡಲಾಗಿದೆ ಎಂದರು.

ಇದೇ ವೇಳೆ ಚನ್ನಗಿರಿ ಶಾಸಕರಾದ ಬಸವರಾಜ್ ವಿ.ಶಿವಗಂಗಾ ಮಾತನಾಡಿ ಚನ್ನಗಿರಿ ಪುರಸಭೆಯಲ್ಲಿ ನಗರೋತ್ಥಾನ ಕಾಮಗಾರಿಗಳು ಸೇರಿದಂತೆ ಯಾವುದೇ ಕಾಮಗಾರಿಗಳನ್ನು ಸರಿಯಾಗಿ ಅನುಷ್ಠಾನ ಮಾಡುತ್ತಿಲ್ಲ, ಮಾಹಿತಿಯನ್ನು ಸಹ ಶಾಸಕರಿಗೆ ನೀಡುವ ಸೌಜನ್ಯತೆ ಹೊಂದಿಲ್ಲ. ಪಟ್ಟಣಕ್ಕೆ ವಿಶೇಷ ಅನುದಾನವನ್ನು ತರಲಾಗಿದ್ದು ಅದರ ಪ್ರಗತಿಯನ್ನು ಅಧಿಕಾರಿಗಳು ಅನುಷ್ಠಾನಕ್ಕೆ ಮುಂದಾಗುತ್ತಿಲ್ಲ ಎಂದಾಗ ಎಲ್ಲಾ ಕಾಮಗಾರಿಗಳ ವಿವರವನ್ನು ಶಾಸಕರ ಗಮನಕ್ಕೆ ತಂದು ಅನುಷ್ಠಾನ ಮಾಡಬೇಕೆಂದು ಸಚಿವರು ಸೂಚನೆ ನೀಡಿದರು.

ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪನವರು ಮಾತನಾಡಿ ಅಧಿಕಾರಿಗಳು ಪರಿಶೀಲನೆಗೆ ಬಂದಾಗ ಶಾಸಕರನ್ನು ಭೇಟಿ ಮಾಡುವುದಿಲ್ಲ, ಸಾರ್ವಜನಿಕರು ನಮ್ಮ ಹತ್ತಿರ ಹಲವು ಸಮಸ್ಯೆಗಳನ್ನು ಪ್ರಸ್ತಾಪಿಸುತ್ತಾರೆ, ಅಧಿಕಾರಿಗಳು ಭೇಟಿ ಮಾಡಿದರೆ ಅವರ ಗಮನಕ್ಕೆ ಹೇಳಲು ಸಾಧ್ಯವಾಗುತ್ತದೆ ಎಂದು ಸಚಿವರಿಗೆ ಸೂಕ್ತ ನಿರ್ದೇಶನ ನೀಡಲು ಪ್ರಸ್ತಾಪಿಸಿದರು.

ಇಂದಿರಾ ಕ್ಯಾಂಟಿನ್; ದಾವಣಗೆರೆ ಪಾಲಿಕೆ ವ್ಯಾಪ್ತಿಯಲ್ಲಿ 8 ಸೇರಿದಂತೆ 11 ಇಂದಿರಾ ಕ್ಯಾಂಟಿನ್‌ಗಳು ಇದ್ದು ಇದರೊಂದಿಗೆ ಹೆಚ್ಚುವರಿಯಾಗಿ ಪಾಲಿಕೆಯಲ್ಲಿ 2 ಹಾಗೂ ಹೊನ್ನಾಳಿಯಲ್ಲಿ 1 ಕ್ಯಾಂಟಿನ್ ಪ್ರಾರಂಭಿಸಲಾಗುತ್ತಿದೆ.

ಸ್ವಚ್ಚ ಭಾರತ್ ಮಿಷನ್ 1 ರಲ್ಲಿ 71 ಕಾಮಗಾರಿಗಳನ್ನು ತೆಗೆದುಕೊಂಡು 70 ಪೂರ್ಣಗೊಳಿಸಿದ್ದು 1 ಪ್ರಗತಿಯಲ್ಲಿದೆ, ಇದಕ್ಕಾಗಿ ಒಟ್ಟು 9.55 ಕೋಟಿ ವೆಚ್ಚ ಮಾಡಲಾಗಿದೆ. ಎಸ್.ಬಿ.ಎಂ.2 ರಡಿ 37 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಇದರಲ್ಲಿ 30 ಪ್ರಗತಿ, 7 ಮುಕ್ತಾಯವಾಗಿವೆ. ಇದರಲ್ಲಿಯೇ ಘನತ್ಯಾಜ್ಯ ನಿರ್ವಹಣೆಯ 7 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು ಸಂಗ್ರಹವಾಗಿರುವ 50656 ಟನ್ ಪಾರಂಪರಿಕ ತ್ಯಾಜ್ಯ ವಿಂಗಡಣೆಗೆ ಕ್ರಮ ವಹಿಸಲಾಗಿದೆ.

15 ನೇ ಹಣಕಾಸು ಯೋಜನೆ ಅನಿರ್ಬಂಧಿತ ನಿಧಿಯಡಿ 2023–24 ರಲ್ಲಿ 3.32 ಕೋಟಿಯಲ್ಲಿ 93 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಆದರೆ ಇನ್ನೂ ಕೆಲವು ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. 2024–25 ರಲ್ಲಿ 3.5 ಕೋಟಿಯಲ್ಲಿ 98 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು 48 ಕಾಮಗಾರಿಗಳು ಮಾತ್ರ ಪ್ರಾರಂಭವಾಗಿವೆ.

ಕಾಮಗಾರಿಗಳ ಪ್ರಗತಿಯಲ್ಲಿ ಕುಂಠಿತವಾಗಿದ್ದು ಇದಕ್ಕೆ ಇಂಜಿನಿಯರ್‌ಗಳ ಕೊರತೆ ಇದೆ. ಸಾಕಷ್ಟು ಅನುದಾನವಿದ್ದರೂ ಟೆಂಡರ್ ಪ್ರಕ್ರಿಯೆಗಳನ್ನು ನಡೆಸಲು ಸಾಧ್ಯವಾಗದಿರುವುದನ್ನು ಮನಗಂಡು ಲಭ್ಯವಿರುವ ಇಂಜಿನಿಯರ್‌ಗಳಿಂದ ಟೆಂಡರ್ ದಾಖಲೆಗಳನ್ನು ಸಿದ್ದಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ಆದಷ್ಟು ಶೀಘ್ರವಾಗಿ ಎಲ್ಲೆಲ್ಲಿ ಕಾಮಗಾರಿ ವಿಳಂಬವಾಗಿದೆ ಎಂಬುದನ್ನು ಪರಿಶೀಲನೆ ನಡೆಸಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅವರು ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕರಾದ ಮಹಾಂತೇಶ್ ಅವರು ಜಿಲ್ಲೆಯಲ್ಲಿನ ಸ್ಥಳೀಯ ಸಂಸ್ಥೆಗಳ ಪ್ರಗತಿ ವಿವರವನ್ನು ಸಭೆಗೆ ತಿಳಿಸಿದರು.

# ಜನನ ಮತ್ತು ಮರಣ ನೋಂದಣಿಗೆ ಒತ್ತು ನೀಡಿ :ಜಿಲ್ಲಾಧಿಕಾರಿ ಸತ್ಯಭಾಮ




**ಹಾಸನ :** ಜನನ ಮತ್ತು ಮರಣ ನೋಂದಣಿ ಹೆಚ್ಚು ಒತ್ತು ನೀಡಿ ಶೇಕಡಾ ನೂರರಷ್ಟು ಪ್ರಗತಿ ಸಾಧಿಸುವಂತೆಜಿಲ್ಲಾಧಿಕಾರಿ ಸತ್ಯಭಾಮಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ನಾಗರೀಕ ನೋಂದಣಿ ಪದ್ಧತಿಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರುಆಸ್ಪತ್ರೆಯಲ್ಲಿ ಮಗು ಜನಿಸಿದ ತಕ್ಷಣಒಂದುಉಚಿತಜನನ ಪ್ರಮಾಣ ಪತ್ರದೊಂದಿಗೆತಾಯಿಯೊಂದಿಗೆ ಮನೆಗೆ ಕಳುಹಿಸುವ ದ್ಯೇಯೋದ್ದೇಶ ಸರ್ಕಾರದ್ದಾಗಿದ್ದು, ಈ ನಿಟ್ಟಿನಲ್ಲಿ ಉಪ ನೋಂದಣಿ ಘಟಕಗಳನ್ನು ಆರಂಭಿಸಲಾಗಿರುತ್ತದೆಎಂದು ತಿಳಿಸಿದರು.

ಅನಗತ್ಯ ನೋಂದಣಿಗಳನ್ನು ತಪ್ಪಿಸಲುಜನನ/ ಮರಣ ಘಟಿಸಿದ ಸ್ಥಳದಲ್ಲಿಯೇ ನೋಂದಣಿಯಾಗುವ ಬಗ್ಗೆ ಜನರಲ್ಲಿಜಾಗೃತಿ ಮೂಡಿಸುವುದು ಹಾಗೂ ಜನನ/ ಮರಣಎಲ್ಲಿ ಸಂಭವಿಸುತ್ತದೋ ಆ ವ್ಯಾಪ್ತಿಯ ನೋಂದಣಿಘಟಕದಲ್ಲಿಜನನ/ಮರಣ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರಿಗೆಅರಿವು ಮೂಡಿಸಬೇಕುಎಂದು ಹೇಳಿದರು.

ದತ್ತು ಪಡೆದ ಮಕ್ಕಳ ಮಾಹಿತಿ ಬಹಿರಂಗಪಡಿಸುವಂತಿಲ್ಲ ಈ ನಿಟ್ಟಿನಲ್ಲಿಎಚ್ಚರಿಕೆ ವಹಿಸಿಎಂದುಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಜನನ/ಮರಣ21 ದಿನಗಳವರೆಗೆಗ್ರಾಮ ಪಂಚಾಯಿತಿಕಾರ್ಯದರ್ಶಿ/ಸ್ಥಳೀಯ ಸಂಸ್ಥೆಗಳ ನೋಂದಣಾಧಿಕಾರಿಗಳು/ವೈದ್ಯಾಧಿಕಾರಿಗಳು ನೋಂದಣಿ ಶುಲ್ಕ ವಿಧಿಸುವಂತಿಲ್ಲ.

ಜನನ/ಮರಣ21 ದಿನಗಳ ನಂತರ ಮತ್ತು 30 ದಿನಗಳೊಳಗೆಗ್ರಾಮ ಪಂಚಾಯಿತಿ ಕಾರ್ಯದರ್ಶಿ/ಸ್ಥಳಿಯ ಸಂಸ್ಥೆಗಳ ನೋಂದಣಾಧಿಕಾರಿಗಳು/ವೈದ್ಯಾಧಿಕಾರಿಗಳು ಶುಲ್ಕ ರೂ.20 ಪಡೆದು ನೀಡಬಹುದಾಗಿದೆ.

ಜನನ/ಮರಣ30 ದಿನಗಳ ನಂತರ ಮತ್ತುಒಂದು ವರ್ಷದ ಒಳಗೆನೋಂದಣಿದಾರರು ತಹಶೀಲ್ದಾರ್‌ರು/ಆಯುಕ್ತರು/ ಮುಖ್ಯಾಧಿಕಾರಿಗಳಿಂದ ಲಿಖಿತಆದೇಶವನ್ನು ಪಡೆದು ನೋಂದಾಯಿಸಬೇಕಾಗಿರುತ್ತದೆ. ರೂ.50ಆಗಿರುತ್ತದೆ.

ಜನನ ಮರಣ ನೋಂದಣಿಗೆ ಸಂಬಂಧಿಸಿದಂತೆ ಅಧಿಸೂಚಕರಾಗಿ (Notifier) ನೇಮಿಸಲಾಗಿರುವಗ್ರಾಮ ಸಹಾಯಕರು, ಅಂಗನವಾಡಿಕಾರ್ಯಕರ್ತರು, ಆಶಾ ಕಾರ್ಯಕರ್ತರು, ಶಾಲಾ ಮುಖ್ಯೋಪಾಧ್ಯಾಯರುಗಳು ತಮ್ಮ ಹಂತದಲ್ಲಿಜನನ ಮರಣ ನೋಂದಣಿ ಬಗ್ಗೆ ಜನರಿಗೆಜಾಗೃತಿ ಮೂಡಿಸುವಕಾರ್ಯ ನಿರ್ವಹಿಸಬೇಕಾಗಿದೆಎಂದು ತಿಳಿಸಿದರು.

ಯಾವುದಾದರೂ ಸಮಸ್ಯೆಗಳು ಕಂಡು ಬಂದಲ್ಲಿಜಿಲ್ಲಾಜನನ ಮರಣ ನೋಂದಣಾಧಿಕಾರಿಗಳಾದ ಜಿಲ್ಲಾಧಿಕಾರಿಗಳಿಗೆ ಮೇಲ್ಮನವಿ ಸಲ್ಲಿಸಬಹುದಾಗಿರುತ್ತದೆಎಂದು ತಿಳಿಸಿದರು.

ಬೆಳೆ ಕಟಾವು ಸಮೀಕ್ಷೆಯನ್ನು ನಿಗಧಿತ ಅವಧಿಯೊಳಗೆ ಕ್ರಮಬದ್ಧವಾಗಿ ಮಾಡಿಸಲು ಗಮನಹರಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕ್ರಮಬದ್ಧವಾಗಿ ಮಾಡದಿದ್ದಲ್ಲಿರೈತರಿಗೆ ನಷ್ಟಉಂಟಾಗಲಿದೆ ಈ ನಿಟ್ಟಿನಲ್ಲಿ ಎಚ್ಚರಿಕೆವಹಿಸಿ ಎಂದು ತಿಳಿಸಿದರು.

ಜಿಲ್ಲಾಜಂಟಿ ಕೃಷಿ ನಿರ್ದೇಶಕರಾದರಮೇಶ್, ತೋಟಗಾರಿಕೆಇಲಾಖೆಯ ಉಪ ನಿರ್ದೇಶಕರಾದ ಮಂಗಳ, ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಡಾ. ಅನೀಲ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಶಾಝೀಯಾ ನಾಝ್ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿಬಂಧಕಾಜ್ಞೆ ಜಾರಿ

**ಗದಗ :** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2025 ರ ಜೂನ್ ತಿಂಗಳಲ್ಲಿ ಜರುಗುವ ದ್ವಿತೀಯ ಪಿ.ಯು.ಸಿ. ಪರೀಕ್ಷೆ –3 ಪರೀಕ್ಷೆಗಳನ್ನು ಜೂನ್ 9 ರಿಂದ 20 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಜೂನ್ 9 ರಿಂದ 20 ರ ಬೆಳಿಗ್ಗೆ 8 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಕ್ಯಾಮರಾ ಹೊಂಇದರದ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶವಿದ್ದು, ಉಳಿದ ಎಲ್ಲ ಪರೀಕ್ಷಾ ಸಿಬ್ಬಂದಿ/ ವಿದ್ಯಾರ್ಥಿಗಳು ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು / ಉಪಯೋಗಿಸುವುದನ್ನು ನಿಷೇಧಿಸಲಾಗಿದೆ.

## ಯುವ ರೆಡ್ ಕ್ರಾಸ್ ಘಟಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆಶ್ರಯದಲ್ಲಿ ರಕ್ತದಾನ ಅರಿವು ಜಾಗೃತಿ




**ದಾವಣಗೆರೆ :** ಯುವ ರೆಡ್ ಕ್ರಾಸ್ ಘಟಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ ಹಾಗೂ ಭಾರತೀಯ ರೆಡ್ ಕ್ರಾಸ್ ರಕ್ತ ನಿಧಿ ಮತ್ತು ಕರ್ನಾಟಕ ಹಿಮೋಫಿಲಿಯಾ ಸೊಸೈಟಿ ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ 03/06/2025 ರಂದು ರಕ್ತದಾನ ಅರಿವು ಜಾಗೃತಿ ಕಾರ್ಯಕ್ರಮ ಹಾಗೂ ದಿನಾಂಕ 04/06/2025 ರಂದು ರಕ್ತದಾನ ಶಿಬಿರ,ರಕ್ತ ಗುಂಪು ಪರೀಕ್ಷೆ ಹಾಗೂ ಹೆಣ್ಣು ಮಕ್ಕಳಿಗೆ ಹಿಮೋಗ್ಲೋಬಿನ್ ಪರೀಕ್ಷೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಭಾರತೀಯ ರೆಡ್ ಕ್ರಾಸ್ ರಕ್ತ ನಿಧಿಯ ವೈದ್ಯಾಧಿಕಾರಿಗಳಾದ ಡಾ. ಪಿ.ಕೆ. ಬಸವರಾಜ್ ರವರು ರವರು ರಕ್ತದಾನವು ಅತ್ಯಂತ ಪವಿತ್ರವಾದಂತಹ ದಾನ ಎನ್ನುವ ಮೂಲಕ ವಿದ್ಯಾರ್ಥಿಗಳಲ್ಲಿ ರಕ್ತದಾನ ಅರಿವು ಮೂಡಿಸಿದರು. ಕರ್ನಾಟಕ ಹಿಮೋಫಿಲಿಯಾ ಸೊಸೈಟಿಯ ಡಾ. ದೊಡ್ಡಿಕೊಪ್ಪದ್ ಎಂ. ಎಂ. ರಕ್ತದಾನ ಮಾಡುವುದರಿಂದ ಆಗುವ ಉಪಯೋಗಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊಫೆಸರ್ ಬಸವರಾಜ್ ಸಿ. ತಹಸಿಲ್ದಾರ್ ಪ್ರೊ ನಾಗೇಂದ್ರ ನಾಯ್ಕ ಮತ್ತು ಪ್ರೊ ವೆಂಕಟೇಶ್ ಬಾಬು ರವರು ರಕ್ತದಾನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದರು. ಕಾಲೇಜಿನ ರೆಡ್ ಕ್ರಾಸ್ ಘಟಕಗಳ ಸಂಚಾಲಕರಾದ ಡಾ. ಮಾದ ನಾಯ್ಕ ಹಾಗೂ ಡಾ. ನಾಗೇಂದ್ರ ನಾಯ್ಕ್ , ಡಾ. ಸ್ಮಿತಾ, ಎನ್. ಸಿ.ಸಿ. ಅಧಿಕಾರಿಗಳಾದ ಡಾ. ರೇಖಾ ಕಾರ್ಯಕ್ರಮದಲ್ಲಿ ಹಾಜರಿದ್ದರು. ಕಾಲೇಜಿಂದ 20ಕ್ಕೂ ಹೆಚ್ಚು ಬೋಧಕರು ಮತ್ತು 80ಕ್ಕೂ ಹೆಚ್ಚು ವಿದ್ಯಾರ್ಥಿಗಳು ರಕ್ತದಾನ ಮಾಡುವ ಮೂಲಕ ರಕ್ತದಾನ ಶ್ರೇಷ್ಠ ಎಂಬ ಮಾಹಿತಿಯನ್ನು ಪಸರಿಸಿದರು

# ಇಂದು ಕಲೇಸಂ ವಾರ್ಷಿಕೋತ್ಸವ: ಎರಡು ಕೃತಿಗಳ ಲೋಕಾರ್ಪಣೆ




**ದಾವಣಗೆರೆ:** ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಶಾಖೆಯ 5 ನೇ ವಾರ್ಷಿಕೋತ್ಸವ ಹಾಗೂ ಎರಡು ಕೃತಿಗಳ ಲೋಕಾರ್ಪಣೆ ಸಮಾರಂಭವನ್ನು ಜೂನ್ 6 ಶುಕ್ರವಾರ ಬೆಳಗ್ಗೆ 10.30 ಗಂಟೆಗೆ ರೋಟರಿ ಬಾಲಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಲೇಸಂ ಅಧ್ಯಕ್ಷೆ ವೀಣಾ ಕೃಷ್ಣಮೂರ್ತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಾವಣಗೆರೆಯಲ್ಲಿ ಕಲೇಸಂ ಘಟಕ ಆರಂಭವಾಗಿ 5 ವರ್ಷಗಳಾಗಿದ್ದು, ಆರನೇ ವರ್ಷಕ್ಕೆ ಕಾಲಿರಿಸುತ್ತಿದೆ. ನಮ್ಮ ಸಂಘದವತಿಯಿಂದ ಲೇಖಕಿಯರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತಿ ವರ್ಷದ ವಾರ್ಷಿಕೋತ್ಸವದಲ್ಲಿ ಲೇಖಕಿಯರ ಕೃತಿಗಳನ್ನು ಬಿಡುಗಡೆ ಮಾಡುವ ಚಟುವಟಿಕೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಈಗಾಗಲೇ ಮೂರು ಕೃತಿಗಳ ಲೋಕಾರ್ಪಣೆ ಆಗಿದ್ದು, ಶುಕ್ರವಾರದ ಸಮಾರಂಭದಲ್ಲಿ ಎರಡು ಕೃತಿಗಳ ಲೋಕಾರ್ಪಣೆ ನಡೆಯಲಿದೆ ಎಂದು ತಿಳಿಸಿದರು.

ಜೂ.5 ರಂದು ನಡೆಯುವ ಕಾರ್ಯಕ್ರಮದ ಉದ್ಘಾಟನೆಯನ್ನು ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ನೆರವೇರಿಸಲಿದ್ದು, ಅತಿಥಿಗಳಾಗಿ ಚಿತ್ರದುರ್ಗ ಸಾಹಿತಿ ಶೈಲಾ ಜಯಕುಮಾರ್, ಎಸ್.ಎಸ್. ಆಸ್ಪತ್ರೆ ಪೆಥಾಲಜಿ ವಿಭಾಗದ ಮುಖ್ಯಸ್ಥೆ ಡಾ. ಶಶಿಕಲಾ ಕೃಷ್ಣಮೂರ್ತಿ, ದಾವಣಗೆರೆ ತಾಲ್ಲೂಕು ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಕಲೇಸಂ ಜಿಲ್ಲಾಧ್ಯಕ್ಷೆ ವೀಣಾ ಕೃಷ್ಣಮೂರ್ತಿ ವಹಿಸಲಿದ್ದಾರೆ.

ಇದೇ ವೇಳೆ ಕಲೇಸಂ ಜಿಲ್ಲಾ ಸದಸ್ಯರ ಸಂಕಲನ ಕೃತಿ ' ವನಿತೆ–ಕಥೆ–ಕವಿತೆ' ಹಾಗೂ ಮಂಜುಳ ಮಂಜಪ್ಪನವರು 'ನುಡಿಬಾಣ–ಸತ್ಯದರ್ಶನ' ಕೃತಿಗಳ ಲೋಕಾರ್ಪಣೆ ನಡೆಯಲಿದೆ. ನಂತರ ಕೃತಿಯ ಲೇಖಕಿಯರಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದರು.

'ನುಡಿಬಾಣ–ಸತ್ಯದರ್ಶನ' ಕೃತಿಯ ಲೇಖಕಿ ಮಂಜುಳ ಮಂಜಪ್ಪ ಮಾತನಾಡಿ, ನುಡಿಬಾಣ ಒಂದು ವಿಡಂಬನಾತ್ಮಕ ಕೃತಿಯಾಗಿದ್ದು, ಪ್ರಸ್ತುತ ಜನರು ನಡಾವಳಿ ಕುರಿತು ಬರೆಯಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಕಲೇಸಂ ಉಪಾಧ್ಯಕ್ಷೆ ಎಸ್.ಎಂ. ಮಲ್ಲಮ್ಮ, ಲೇಖಕಿಯರಾದ ಟಿ.ಎಸ್. ಶೈಲಜಾ, ಉಮಾದೇವಿ ಇನ್ನಿತರರು ಉಪಸ್ಥಿತರಿದ್ದರು.

**ರಾಜ್ಯಸಂಘದಿಂದ ಯಾವುದೇ ಸಹಕಾರವಿಲ್ಲ....**

ರಾಜ್ಯ ಲೇಖಕಿಯರ ಸಂಘದಿಂದ ಜಿಲ್ಲಾ ಸಂಘಕ್ಕೆ ಯಾವುದೇ ಅನುದಾನವಾಗಲಿ, ಸಹಕಾರವಾಗಲಿ ಅಥವಾ ನೈತಿಕ ಬೆಂಬಲವಾಗಲಿ ದೊರಕುತ್ತಿಲ್ಲ. ಇದು ನಮ್ಮ ಮನದಾಳದ ನೋವಾಗಿದೆ ಎಂಬ ಬೇಸರವನ್ನು ಲೇಖಕಿಯರು ತೋಡಿಕೊಂಡರು.

# ಎಲ್ಲಾ ವರ್ಗದ ಬಡವರನ್ನು ಸಮಾಜದ ಮುನ್ನಲೆಗೆತರಲು ಸರ್ಕಾರ ಬದ್ಧ : ಶಾಸಕ ತಮ್ಮಯ್ಯ



**ಚಿಕ್ಕಮಗಳೂರು:** ಶೋಷಿತ ವರ್ಗದವರು ಸೇರಿದಂತೆಎಲ್ಲಾಜಾತಿ, ಜನಾಂಗದ ಬಡವರು ಸಮಾಜದ ಮುನ್ನಲೆಗೆ ಬರಬೇಕೆಂಬ ಉದ್ದೇಶದಿಂದರಾಜ್ಯಸರ್ಕಾರ ಗಂಗಾ ಕಲ್ಯಾಣಯೋಜನೆಯನ್ನು ಅನುಷ್ಠಾನಗೊಳಿಸಿ ರೈತರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಅವರುಇಂದುಕ್ಷೇತ್ರದ ಹಳೇ ಲಕ್ಯಾಗ್ರಾಮದಲ್ಲಿ 2023–24 ಮತ್ತು 2024–25ನೇ ಸಾಲಿನಲ್ಲಿ 1.75 ಕೋಟಿರೂ.ವೆಚ್ಚದಲ್ಲಿ ಪ್ರತಿ ಫಲಾನುಭವಿಗೆ 3.75 ಲಕ್ಷ ರೂಗಳಂತೆ ಒಟ್ಟು 47 ಫಲಾನುಭವಿಗಳ ಭೂಮಿಯಲ್ಲಿ ಬೋರ್‌ವೆಲ್‌ಕೊರೆಯಲು ಚಾಲನೆ ನೀಡಿ ಮಾತನಾಡಿದರು.

ರಾಜ್ಯಸರ್ಕಾರಅಧಿಕಾರಕ್ಕೆ ಬಂದ ಬಳಿಕ ಗಂಗಾ ಕಲ್ಯಾಣಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆಮಾಡಿ ಬೋರ್‌ವೆಲ್‌ಕೊರೆಸುವಯೋಜನೆಗೆ ಇಂದು ಪ್ರಾರಂಭೋತ್ಸವ ನಡೆಸಲಾಗಿದೆಎಂದು ಹೇಳಿದರು.

ಹಿಂದೆ ಗಂಗಾ ಕಲ್ಯಾಣಯೋಜನೆಯಡಿ ಪ್ರತಿ ಫಲಾನುಭವಿಗೆ 2.50 ಲಕ್ಷರೂ ನೀಡುತ್ತಿದ್ದು, ಕೊಳವೆ ಬಾವಿಗೆ ಸಂಬಂಧಿಸಿದ ಎಲ್ಲಾ ವಸ್ತುಗಳ ಬೆಲೆ ಹೆಚ್ಚಳವಾಗಿರುವುದರಿಂದ ರಾಜ್ಯಸರ್ಕಾರಇದನ್ನು ಮನಗಂಡು 3.75 ಲಕ್ಷ ರೂಗಳಿಗೆ ಹೆಚ್ಚಿಸಿದೆ ಎಂದು ಶ್ಲಾಘಿಸಿದರು.

ಫಲಾನುಭವಿಗಳು ಗಂಗಾ ಕಲ್ಯಾಣಯೋಜನೆಯ ಸದುಪಯೋಗ ಪಡೆದುಕೊಂಡುಉತ್ತಮ ಬೆಳೆ ಬೆಳೆಯುವ ಮೂಲಕ ಆರ್ಥಿಕ ಸದೃಢರಾಗುವಜೊತೆಗೆತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಬೇಕೆಂದು ಮನವಿ ಮಾಡಿದರು.

ರಾಜ್ಯಸರ್ಕಾರ ಶಿಕ್ಷಣ, ಆರೋಗ್ಯ, ಬಡವರಿಗೆ ಬದುಕುಕಟ್ಟಿಕೊಡಲು ಬದ್ಧವಾಗಿದೆ. ಇದಕ್ಕೆ ವಿದ್ಯಾರ್ಥಿ ಪೋಷಕರು ಹೆಚ್ಚು ಒತ್ತುನೀಡಿತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿದಾಗ ಸರ್ಕಾರದಯೋಜನೆ ಫಲಪ್ರದವಾಗುತ್ತದೆಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಸರ್ಕಾರದ ಮೇಲೆ ಒತ್ತಡ ಹಾಕಿ ಹೆಚ್ಚು ಫಲಾನುಭವಿಗಳಿಗೆ ಗಂಗಾ ಕಲ್ಯಾಣಯೋಜನೆಯ ಸೌಲಭ್ಯ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.ಡಿ. ದೇವರಾಜುಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಜಿಲ್ಲಾ ವ್ಯವಸ್ಥಾಪಕರಾಕೇಶ್ ಮಾತನಾಡಿ, 2023–24, 2024–25 ನೇ ಸಾಲಿನಲ್ಲಿ ಚಿಕ್ಕಮಗಳೂರು ವಿಧಾನಸಭಾಕ್ಷೇತ್ರದ ವಿವಿಧ ಭಾಗಗಳಲ್ಲಿ ಒಟ್ಟು 47 ಫಲಾನುಭವಿಗಳನ್ನು ಆಯ್ಕೆಮಾಡಲಾಗಿದ್ದು, ಇಂದು ಶಾಸಕರ ನೇತೃತ್ವದಲ್ಲಿ ಬೋರ್‌ವೆಲ್‌ಕೊರೆಸಲು ಚಾಲನೆ ನೀಡಲಾಗಿದೆಎಂದರು.

2025–26ನೇ ಸಾಲಿಗೆ ಗಂಗಾ ಕಲ್ಯಾಣಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಿದ್ದು, ಜೂ.30 ಅಂತಿಮ ದಿನವಾಗಿದ್ದು, ಅಗತ್ಯಇರುವರೈತರುಕೂಡಲೇಅರ್ಜಿ ಸಲ್ಲಿಸಿ ಪ್ರಯೋಜನ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಲಕ್ಯಾಗ್ರಾ.ಪಂ ಅಧ್ಯಕ್ಷ ಹನೀಫ್, ಮಾಜಿಅಧ್ಯಕ್ಷ ನಾಗಣ್ಣ, ಸಿದ್ದೇಶ್, ಪುಟ್ಟೇಗೌಡ, ಸಂತೋಷ್, ಶಶಿ, ಕಾಂತರಾಜ್, ಕೆಂಗೇಗೌಡ, ಮಧು, ಸಿದ್ದೇಗೌಡ ಮತ್ತಿತರರು ಉಪಸ್ಥಿತರಿದ್ದರು.

## ರಂಗಶಿಕ್ಷಣಕ್ಕೆ ಅರ್ಜಿಆಹ್ವಾನ

**ಹಾಸನ :** ಕರ್ನಾಟಕರಾಜ್ಯ ಸರಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗಪ್ರಯೋಗಶಾಲೆಯ 2025–26ನೇ ಸಾಲಿನ ರಂಗಶಿಕ್ಷಣಕ್ಕೆ (ಡಿಪ್ಲೋಮಾಇನ್‌ಡ್ರಾಮಾಆರ್ಟ್ಸ್)ಗೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಆಹ್ವಾನಿಸಲಾಗಿದೆ.ಪ್ರವೇಶಕ್ಕೆಕನಿಷ್ಠ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆಆದ್ಯತೆಕೊಡಲಾಗಿದೆ.

ರಂಗಭೂಮಿಯಲ್ಲಿಆಸಕ್ತಿಯಿದ್ದು ಸ್ವಲ್ಪಮಟ್ಟಿನಅನುಭವಇರಬೇಕಾದದ್ದುಅಗತ್ಯ. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆಉಚಿತ ಊಟ, ವಸತಿ ಸೌಲಭ್ಯವಿದೆ. ಕರ್ನಾಟಕ ಹಾಗೂ ಭಾರತದರಂಗತಜ್ಞರಿಂದ ಮತ್ತುಅತಿಥಿಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥ ಭಂಡಾರ ಹಾಗೂ ದೃಶ್ಯ, ಶ್ರವ್ಯ ಪರಿಕರಗಳ ಅನುಕೂಲತೆಇದೆ. ರಂಗಶಾಲೆಯ ವಿದ್ಯಾರ್ಥಿಗಳಿಗೆ ಭಾರತೀಯರಂಗಭೂಮಿ, ಕನ್ನಡ ಮತ್ತುನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯರಂಗಭೂಮಿ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.

# ದಕ್ಷಿಣ ಕೊರಿಯಾದ ಯೆಂಗ್ನಮ್ ವಿಶ್ವವಿದ್ಯಾಲಯದಲ್ಲಿ ಸಂದರ್ಶಕ ಪ್ರಾಧ್ಯಾಪಕ ಹುದ್ದೆಗೆ ದಾವಣಗೆರೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕರ ಆಹ್ವಾನ.



**ದಾವಣಗೆರೆ:** ವಿಶ್ವವಿದ್ಯಾಲಯದ ಗಣಿತ ವಿಭಾಗದ ಗೌರವಾನ್ವಿತ ಪ್ರಾಧ್ಯಾಪಕರಾದ ಡಾ. ಪ್ರಕಾಶ ಡಿ.ಜಿ. ಮತ್ತು ಡಾ. ಪ್ರಸನ್ನಕುಮಾರ ಬಿ.ಸಿ. ಅವರನ್ನು ದಕ್ಷಿಣ ಕೊರಿಯಾದ ಯೆಂಗ್ನಮ್ ವಿಶ್ವವಿದ್ಯಾಲಯಕ್ಕೆ ಸಂದರ್ಶಕ ಪ್ರಾಧ್ಯಾಪಕ ಹುದ್ದೆಗಾಗಿ ಆಹ್ವಾನಿಸಲಾಗಿದೆ. ಜೂನ್ 2025 ರ ಎರಡನೇ ವಾರದಲ್ಲಿ ನಿಗದಿಯಾಗಿರುವ ಈ ಭೇಟಿಯು ಮಹತ್ವದ ಶೈಕ್ಷಣಿಕ ಮೈಲಿಗಲ್ಲನ್ನು ಗುರುತಿಸುತ್ತದೆ ಮತ್ತು ದಾವಣಗೆರೆ ವಿಶ್ವವಿದ್ಯಾಲಯದ ಸಂಶೋಧನಾ ಕೊಡುಗೆಗಳ ಹೆಚ್ಚುತ್ತಿರುವ ಅಂತರರಾಷ್ಟ್ರೀಯ ಮನ್ನಣೆಯನ್ನು ಎತ್ತಿ ತೋರಿಸುತ್ತದೆ. ಈ ಭೇಟಿಯ ಪ್ರಾಥಮಿಕ ಉದ್ದೇಶವೆಂದರೆ ಮುಂದುವರಿದ ಗಣಿತ ವಿಜ್ಞಾನಗಳಲ್ಲಿ, ವಿಶೇಷವಾಗಿ ಕಂಪ್ಯೂಟೇಶನಲ್ ಫ್ಲೂಯಿಡ್ ಮೆಕ್ಯಾನಿಕ್ಸ್‌ನಲ್ಲಿ ಸಹಯೋಗದ ಸಂಶೋಧನಾ ಅವಕಾಶಗಳನ್ನು ಅನ್ವೇಷಿಸುವುದು ಮತ್ತು ಎರಡು ಸಂಸ್ಥೆಗಳ ನಡುವೆ ಶೈಕ್ಷಣಿಕ ವಿನಿಮಯವನ್ನು ಉತ್ತೇಜಿಸುವುದು. ಡಾ. ಪ್ರಕಾಶ ಮತ್ತು ಡಾ. ಪ್ರಸನ್ನಕುಮಾರ ಅವರು ಯೆಂಗ್ನಮ್ ವಿಶ್ವವಿದ್ಯಾಲಯದ ಪ್ರೊಫೆಸರ್ ಸಾಂಗ್ ವೂ ಜೂ ಮತ್ತು ಅವರ ಸಂಶೋಧನಾ ತಂಡದೊಂದಿಗೆ ಉನ್ನತ ಮಟ್ಟದ ಚರ್ಚೆಗಳಲ್ಲಿ ತೊಡಗಿಸಿಕೊಳ್ಳುತ್ತಾರೆ, ಜಂಟಿ ಸಂಶೋಧನಾ ಉಪಕ್ರಮಗಳಲ್ಲಿ ಭಾಗವಹಿಸುತ್ತಾರೆ ಮತ್ತು ದೀರ್ಘಕಾಲೀನ ಶೈಕ್ಷಣಿಕ ಸಹಯೋಗದ ಸಾಧ್ಯತೆಗಳನ್ನು ಅನ್ವೇಷಿಸುತ್ತಾರೆ. ದ್ರವ ಯಂತ್ರಶಾಸ್ತ್ರ, ಭಿನ್ನರಾಶಿ ಕಲನಶಾಸ್ತ್ರ ಮತ್ತು ಅನ್ವಯಿಕ ವಿಶ್ಲೇಷಣೆಯಲ್ಲಿ ಅವರ ಪರಿಣತಿಯು ಅವರಿಗೆ ಈ ಅಂತರರಾಷ್ಟ್ರೀಯ ಮನ್ನಣೆಯನ್ನು ಗಳಿಸಿದೆ.ಈ ಆಹ್ವಾನವು ಪ್ರಾಧ್ಯಾಪಕರ ವೈಯಕ್ತಿಕ ಸಾಧನೆಗಳನ್ನು ಮಾತ್ರವಲ್ಲದೆ, ದಾವಣಗೆರೆ ವಿಶ್ವವಿದ್ಯಾಲಯದ ಶೈಕ್ಷಣಿಕ ಸಮುದಾಯದ ಹೆಚ್ಚುತ್ತಿರುವ ಜಾಗತಿಕ ಪ್ರೊಫೈಲ್ ಅನ್ನು ಸಹ ಪ್ರತಿಬಿಂಬಿಸುತ್ತದೆ. ಈ ಭಾಗವಹಿಸುವಿಕೆಯು ವಿದ್ಯಾರ್ಥಿಗಳು ಮತ್ತು ವಿದ್ವಾಂಸರಿಗೆ ಸಮಾನವಾಗಿ ಪ್ರಯೋಜನಕಾರಿಯಾಗುವ ಸಹಯೋಗದ ಪ್ರಕಟಣೆಗಳು, ಸಂಶೋಧನಾ ಯೋಜನೆಗಳು ಮತ್ತು ವಿನಿಮಯ ಕಾರ್ಯಕ್ರಮಗಳಿಗೆ ಕಾರಣವಾಗುತ್ತದೆ ಎಂದು ನಿರೀಕ್ಷಿಸಲಾಗಿದೆ.ದಾವಣಗೆರೆ ವಿಶ್ವವಿದ್ಯಾನಿಲಯದ ಗೌರವಾನ್ವಿತ ಉಪಕುಲಪತಿ ಪ್ರೊ. ಬಿ.ಡಿ. ಕುಂಬಾರ್ ಅವರು ತಮ್ಮ ತಂಡದೊಂದಿಗೆ, ಡಾ. ಪ್ರಕಾಶ ಮತ್ತು ಡಾ. ಪ್ರಸನ್ನಕುಮಾರ ಅವರಿಗೆ ಈ ಪ್ರತಿಷ್ಠಿತ ಅವಕಾಶ ದೊರೆತಿದ್ದಕ್ಕಾಗಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಮತ್ತು ಅಭಿನಂದಿಸಿದ್ದಾರೆ. ಅವರ ಅಂತರರಾಷ್ಟ್ರೀಯ ಮನ್ನಣೆಗೆ ಅವರು ಹೆಮ್ಮೆ ವ್ಯಕ್ತಪಡಿಸಿದರು ಮತ್ತು ಜಾಗತಿಕ ಶೈಕ್ಷಣಿಕ ಸಂಬಂಧಗಳನ್ನು ಬಲಪಡಿಸುವಲ್ಲಿ ಮತ್ತು ಸಹಯೋಗದ ಸಂಶೋಧನಾ ಉಪಕ್ರಮಗಳನ್ನು ಮುಂದುವರಿಸುವಲ್ಲಿ ಅವರಿಗೆ ಯಶಸ್ಸು ಸಿಗಲಿ ಎಂದು ಹಾರೈಸಿದರು.

## ಬೇಸಿಗೆ ಶಿಬಿರ ನಿಮಿತ್ತ ನಡೆದ ಬಾಸ್ಕೆಟ್ ಬಾಲ್ ಪಂದ್ಯಾವಳಿ

**ದಾವಣಗೆರೆ:** ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ ಮತ್ತು ಎಸ್ ಎಸ್ ಎಮ್ ಬಾಸ್ಕೆಟ್ ಬಾಲ್ ಕ್ಲಬ್ ವತಿಯಿಂದ ಈಚೆಗೆ ಏಪ್ರಿಲ್ ಮತ್ತು ಮೇ ತಿಂಗಳ ಬಾಸ್ಕೆಟ್ ಬಾಲ್ ಬೇಸಿಗೆ ಶಿಬಿರಕ್ಕೆ ಆಗಮಿಸಿದ್ದ ಆಟಗಾರರಿಗೆ 3 3 ಬಾಸ್ಕೆಟ್ ಬಾಲ್ ಪಂದ್ಯಾವಳಿ ಆಯೋಜಿಸಲಾಗಿತ್ತು.

ಇದೇ ವೇಳೆ ಮುಖ್ಯಮಂತ್ರಿ ರಾಜ್ಯ ಪ್ರಶಸ್ತಿ ಪುರಸ್ಕಾರ ಪಡೆದಿರುವ ದಾವಣಗೆರೆ ಗ್ರಾಮಾಂತರ ವಿಭಾಗದ ಸಿಪಿಐ ಈ ವೈ ಕಿರಣ್ ಅವರನ್ನು ಸನ್ಮಾನಿಸಲಾಯಿತು ಹಾಗೂ ಪಂದ್ಯಾವಳಿಯಲ್ಲಿ ವಿಜೇತ ತಂಡಗಳಿಗೆ ಬಹುಮಾನವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ದಾವಣಗೆರೆ ಬಾಸ್ಕೆಟ್ ಬಾಲ್ ಕ್ಲಬ್ಬಿನ ಗೌರವಾಧ್ಯಕ್ಷರಾದ ಸಿ. ಶ್ರೀರಾಮಮೂರ್ತಿ, ಅಧ್ಯಕ್ಷರಾದ ಆ?. ಕಿರಣ್ ಕುಮಾರ್, ಉಪಾಧ್ಯಕ್ಷರಾದ ಗಡಿಗುಡಾಳ್ ಮಂಜುನಾಥ್ ಮತ್ತು ವಿಜಯ್ ಕುಮಾರ್, ಕಾರ್ಯದರ್ಶಿ ಆರ್. ವೀರೇಶ್, ಖಜಾಂಜಿ ಎಸ್.ಎಲ್. ಪ್ರಸನ್ನ, ಸದಸ್ಯರಾದ ಕೆ.ಎಂ. ಪ್ರವೀಣ್ ಕುಮಾರ್, ಸಂಕೇತ್, ಸಿದ್ದೇಶ್, ತರಬೇತಿದಾರ ಆರ್. ದರ್ಶನ್ ಪಾಲ್ಗೊಂಡಿದ್ದರು.

### ಕಾಲಮಿತಿಯಲ್ಲಿ ನಗರೋತ್ಥಾನ ಕಾಮಗಾರಿಗಳು ಮುಗಿಯಬೇಕು, ಸಕಾಲದಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸದ ಅಧಿಕಾರಿಗಳ ಮೇಲೆ ಕ್ರಮ

# ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಕಲುಷಿತವಾಗದಂತೆ ನೋಡಿಕೊಳ್ಳಲು ಸೂಚನೆ; ಪೌರಾಡಳಿತ ಸಚಿವ ರಹೀಂ ಖಾನ್

**ದಾವಣಗೆರೆ :** ನಗರೋತ್ಥಾನದಡಿ ಮೂರನೇ ಹಂತ ಪೂರ್ಣಗೊಳಿಸಿ 4 ನೇ ಹಂತದಲ್ಲಿ ಅನುದಾನವನ್ನು ನೀಡಲಾಗಿದ್ದು 15 ನೇ ಹಣಕಾಸು ಯೋಜನೆಯಡಿ ಟೆಂಡರ್ ಪ್ರಕ್ರಿಯೆಯನ್ನೆ ನಡೆಸದ ಅಧಿಕಾರಿಗಳ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಅಧಿಕಾರ ನೀಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಜಿಲ್ಲೆಯ ಹರಿಹರ, ಹೊನ್ನಾಳಿ, ಚನ್ನಗಿರಿ, ಮಲೇಬೆನ್ನೂರು, ನ್ಯಾಮತಿ, ಚನ್ನಗಿರಿ, ಜಗಳೂರು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನದಡಿ ಮೂರು ಮತ್ತು 4 ನೇ ಹಂತದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ಈಗಾಗಲೇ ಮೂರನೇ ಹಂತ ಸಂಪೂರ್ಣ ಮುಗಿದಿದೆ. ನಾಲ್ಕನೇ ಹಂತದ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನದಡಿ 70 ಕೋಟಿಗೆ ಕ್ರಿಯಾಯೋಜನೆ ರೂಪಿಸಿ 32.20 ಕೋಟಿ ಬಿಡುಗಡೆ ಮಾಡಲಾಗಿದೆ. ಇದರಲ್ಲಿ 210 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿತ್ತು. 110 ಕಾಮಗಾರಿಗಳು ಮುಕ್ತಾಯವಾಗಿದ್ದು 71 ಕಾಮಗಾರಿಗಳು ಪ್ರಗತಿಯಲ್ಲಿವೆ. ಇನ್ನೂ 13 ಕಾಮಗಾರಿಗಳು ಟೆಂಡರ್‌ನಲ್ಲಿವೆ, 16 ಕ್ಕೆ ಟೆಂಡರ್ ಕರೆಯಲಾಗಿದೆ. ಆದರೆ ಕಳೆದ ಎರಡು ವರ್ಷಗಳಿಂದ ಟೆಂಡರ್ ಹಂತದಲ್ಲಿಯೇ ಅಧಿಕಾರಿಗಳು ಕಾಲಕಳೆಯುತ್ತಿದ್ದು ಇವೆಲ್ಲಾ ಕಾಮಗಾರಿಗಳನ್ನು ಮುಕ್ತಾಯ ಮಾಡುವವರೆಗೆ



ಮುಂದಿನ ಹಂತದ ಕಾಮಗಾರಿಗೆ ಅನುದಾನ ನೀಡುವುದಿಲ್ಲ. ಈ ಕಾಮಗಾರಿಗಳನ್ನು ವಿಳಂಬ ಮಾಡಿದ ಅಧಿಕಾರಿಗಳ ಮೇಲೆ ನೋಟಿಸ್ ನೀಡಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಅಧಿಕಾರ ನೀಡಲಾಗಿದೆ ಎಂದರು. ಇದೇ ವೇಳೆ ಚನ್ನಗಿರಿ ಶಾಸಕರಾದ ಬಸವರಾಜ್ ವಿ.ಶಿವಗಂಗಾ ಮಾತನಾಡಿ ಚನ್ನಗಿರಿ ಪುರಸಭೆಯಲ್ಲಿ ನಗರೋತ್ಥಾನ ಕಾಮಗಾರಿಗಳು ಸೇರಿದಂತೆ ಯಾವುದೇ ಕಾಮಗಾರಿಗಳನ್ನು ಸರಿಯಾಗಿ ಅನುಷ್ಠಾನ ಮಾಡುತ್ತಿಲ್ಲ, ಮಾಹಿತಿಯನ್ನು ಸಹ ಶಾಸಕರಿಗೆ ನೀಡುವ ಸೌಜನ್ಯತೆ ಹೊಂದಿಲ್ಲ. ಪಟ್ಟಣ–ಕ್ಕೆ ವಿಶೇಷ ಅನುದಾನವನ್ನು ತರಲಾಗಿದ್ದು ಅದರ ಪ್ರಗತಿಯನ್ನು ಅಧಿಕಾರಿಗಳು ಅನುಷ್ಟಾನಕ್ಕೆ ಮುಂದಾಗುತ್ತಿಲ್ಲ ಎಂದಾಗ ಎಲ್ಲಾ ಕಾಮಗಾರಿಗಳ ವಿವರವನ್ನು ಶಾಸಕರ ಗಮನಕ್ಕೆ ತಂದು ಅನುಷ್ಠಾನ ಮಾಡಬೇಕೆಂದು ಸಚಿವರು ಸೂಚನೆ ನೀಡಿದರು.

ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪನವರು ಮಾತನಾಡಿ ಅಧಿಕಾರಿಗಳು ಪರಿಶೀಲನೆಗೆ ಬಂದಾಗ ಶಾಸಕರನ್ನು ಭೇಟಿ ಮಾಡುವುದಿಲ್ಲ, ಸಾರ್ವಜನಿಕರು ನಮ್ಮ ಹತ್ತಿರ ಹಲವು ಸಮಸ್ಯೆಗಳನ್ನು ಪ್ರಸ್ತಾಪಿಸುತ್ತಾರೆ, ಅಧಿಕಾರಿಗಳು ಭೇಟಿ ಮಾಡಿದರೆ ಅವರ ಗಮನಕ್ಕೆ ಹೇಳಲು ಸಾಧ್ಯವಾಗುತ್ತದೆ ಎಂದು ಸಚಿವರಿಗೆ ಸೂಕ್ತ ನಿರ್ದೇಶನ ನೀಡಲು ಪ್ರಸ್ತಾಪಿಸಿದರು.

ಇಂದಿರಾ ಕ್ಯಾಂಟಿನ್; ದಾವಣಗೆರೆ ಪಾಲಿಕೆ ವ್ಯಾಪ್ತಿಯಲ್ಲಿ 8 ಸೇರಿದಂತೆ 11 ಇಂದಿರಾ ಕ್ಯಾಂಟಿನ್‌ಗಳು ಇದ್ದು ಇದರೊಂದಿಗೆ ಹೆಚ್ಚುವರಿಯಾಗಿ ಪಾಲಿಕೆಯಲ್ಲಿ 2 ಹಾಗೂ ಹೊನ್ನಾಳಿಯಲ್ಲಿ 1 ಕ್ಯಾಂಟಿನ್ ಪ್ರಾರಂಭಿಸಲಾಗುತ್ತಿದೆ. ಸ್ವಚ್ಚ ಭಾರತ್ ಮಿಷನ್ 1 ರಲ್ಲಿ 71 ಕಾಮಗಾರಿಗಳನ್ನು ತೆಗೆದುಕೊಂಡು 70 ಪೂರ್ಣಗೊಳಿಸಿದ್ದು 1 ಪ್ರಗತಿಯಲ್ಲಿದೆ, ಇದಕ್ಕಾಗಿ ಒಟ್ಟು 9.55 ಕೋಟಿ ವೆಚ್ಚ ಮಾಡಲಾಗಿದೆ. ಎಸ್.ಬಿ.ಎಂ.2 ರಡಿ 37 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಇದರಲ್ಲಿ 30 ಪ್ರಗತಿ, 7 ಮುಕ್ತಾಯವಾಗಿವೆ. ಇದರಲ್ಲಿಯೇ ಘನತ್ಯಾಜ್ಯ ನಿರ್ವಹಣೆಯ 7 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು ಸಂಗ್ರಹವಾಗಿರುವ 50656 ಟನ್ ಪಾರಂಪರಿಕ ತ್ಯಾಜ್ಯ ವಿಂಗಡಣೆಗೆ ಕ್ರಮ ವಹಿಸಲಾಗಿದೆ. 15 ನೇ ಹಣಕಾಸು ಯೋಜನೆ ಅನಿರ್ಬಂಧಿತ ನಿಧಿಯಡಿ 2023–24 ರಲ್ಲಿ 3.32 ಕೋಟಿಯಲ್ಲಿ 93 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಆದರೆ ಇನ್ನೂ ಕೆಲವು ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. 2024–25 ರಲ್ಲಿ 3.5 ಕೋಟಿಯಲ್ಲಿ 98 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು 48 ಕಾಮಗಾರಿಗಳು ಮಾತ್ರ ಪ್ರಾರಂಭವಾಗಿವೆ.

ಕಾಮಗಾರಿಗಳ ಪ್ರಗತಿಯಲ್ಲಿ ಕುಂಠಿತವಾಗಿದ್ದು ಇದಕ್ಕೆ ಇಂಜಿನಿಯರ್‌ಗಳ ಕೊರತೆ ಇದೆ. ಸಾಕಷ್ಟು ಅನುದಾನವಿದ್ದರೂ ಟೆಂಡರ್ ಪ್ರಕ್ರಿಯೆಗಳನ್ನು ನಡೆಸಲು ಸಾಧ್ಯವಾಗದಿರುವುದನ್ನು ಮನಗಂಡು ಲಭ್ಯವಿರುವ ಇಂಜಿನಿಯರ್‌ಗಳಿಂದ ಟೆಂಡರ್ ದಾಖಲೆಗಳನ್ನು ಸಿದ್ದಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ಆದಷ್ಟು ಶೀಘ್ರವಾಗಿ ಎಲ್ಲೆಲ್ಲಿ ಕಾಮಗಾರಿ ವಿಳಂಬವಾಗಿದೆ ಎಂಬುದನ್ನು ಪರಿಶೀಲನೆ ನಡೆಸಿ ಅನುಷ್ಟಾನಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅವರು ತಿಳಿಸಿದರು. ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಹಾಂತೇಶ್ ಅವರು ಜಿಲ್ಲೆಯಲ್ಲಿನ ಸ್ಥಳೀಯ ಸಂಸ್ಥೆಗಳ ಪ್ರಗತಿ ವಿವರವನ್ನು ಸಭೆಗೆ ತಿಳಿಸಿದರು.

# ನಿಸ್ವಾರ್ಥಗುಣ, ಸೇವಾಮನೋಭಾವದಿಂದ ಸಂಘಟನೆ ವೃದ್ಧಿ : ಸಿ.ಟಿ. ರವಿ

**ಚಿಕ್ಕಮಗಳೂರು :** ಪ್ರಾಮಾಣಿಕತೆ, ನಿಸ್ವಾರ್ಥ ಗುಣ ಹಾಗೂ ಸೇವಾ ಮನೋಭಾವದಿಂ ದ ಸಂಘಟನೆಯನ್ನು ಕಟ್ಟಿಬೆಳೆಸಿದಾಗ ಮಾತ್ರ ಸಮಾಜದಲ್ಲಿ ಪರಿಪೂರ್ಣವಾಗಿ ಬೇರೂರಲು ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ಗುರುವಾರ ನಡೆದ ಕರ್ನಾಟಕ ಶ್ರಮಿಕ ಟ್ಯಾಕ್ಸಿ ಚಾಲಕರ ವೇ ದಿಕೆ ಜಿಲ್ಲಾ ಪದಾಧಿಕಾರಿಗಳ ಆಯ್ಕೆ ಮತ್ತು ಪದಗ್ರಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸಂಘಟನೆಗಳಲ್ಲಿ ಸ್ವಾರ್ಥ ನುಸುಳಿದರೆ, ಅಹಂಗೆ ಅವಕಾಶ ನೀಡಿದರೆ, ಒಳಗಿರುವವರ ಪ್ರತಿಷ್ಟೆಗೆ ವೇದಿಕೆಯಾದರೆ ಬಹುಕಾಲ ಉಳಿಗಾಲವಿಲ್ಲ. ಹೀಗಾಗಿ ಸಂಘಟನೆ ನೇತೃತ್ವದ ರೂವಾರಿಗಳು ನಿಸ್ವಾರ್ಥತನದಿಂ ದ ಕಾರ್ಯನಿರ್ವಹಿಸಬೇಕು. ಆ ನಿಟ್ಟಿನಲ್ಲ ಟ್ಯಾಕ್ಸಿ ಸಂಘಟನೆ ಅಧ್ಯಕ್ಷರು, ಚಾಲಕರಿಗೆ ಸೂಕ್ತ ಮಾರ್ಗದರ್ಶನ ನೀಡಿ ನೆರವಿಗೆ ಧಾವಿಸಬೇಕು ಎಂದರು.

ನದಿಗಳು ಎಂದಿಗೂ ದೊಡ್ಡಪ್ರವಾಹದಿಂದ




ಹುಟ್ಟುವುದಿಲ್ಲ. ನದಿಗಳ ಉಗಮ ಸ್ಥಾನವನ್ನು ಗಮನಿಸಿರಬಹುದು. ಸಣ್ಣ ಸಣ್ಣ ತೊರೆಗಳಿಂದ ಹೊಳೆಯಾಗಿ, ನದಿಗಳಾಗುತ್ತವೆ. ಆ ರೀತಿಯಲ್ಲಿ ಇದೀಗ ತೊರೆಗಳಾಗಿ ಉಗಮಿಸಿರುವ ಟ್ಯಾಕ್ಸಿ ಚಾಲಕರ ಸಂಘಟನೆಗೆ ಹಲವರ ಕೈಜೋಡಣೆಯಿದ ದೊಡ್ಡನದಿಗಳಾಗಿ ಸಾಮರ್ಥ್ಯ ವಿಸ್ತರಿಸಬೇಕು ಎಂದು ತಿಳಿಸಿದರು.

ಪ್ರಸ್ತುತ ಟ್ಯಾಕ್ಸಿ ಚಾಲಕರೊಂದಿಗೆ ಸಂಕಷ್ಟದ ಸಮಯ ಹಾಗೂ ಒಳ್ಳೆಯ ಕೆಲಸಕ್ಕೆ ಮನೆಮಗನಂತೆ ಸದಾ ನಿಮ್ಮೊಂದಿಗೆ ನಿಲ್ಲಲು ಸಿದ್ಧ. ಸಂಘಟನೆ ಪದಾಧಿಕಾರಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಸಂಘಟನೆ ಯನ್ನು ಬಲಿಷ್ಟಗೊಳಿಸುವಲ್ಲಿ ಹೆಜ್ಜೆಹಾಕುವ ಜೊತೆಗೆ ಸಾರಿಗೆ ಇಲಾಖೆಯ ನಿಯಮವನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಸೂಚಿಸಿದರು.

ಕರ್ನಾಟಕ ಶ್ರಮಿಕ ಟ್ಯಾಕ್ಸಿ ಚಾಲಕರ ವೇದಿಕೆ ರಾಜ್ಯಾಧ್ಯಕ್ಷ ಹೆಚ್.ಕೆ.ಪ್ರಕಾಶ್ ಮಾತನಾಡಿ ರಾಜ್ಯದ ಚಾ ಲಕರು ಹೊರರಾಜ್ಯಗಳಲ್ಲಿ ಬ್ರೇಕ್‌ಡೌನ್ ಅಥವಾ ಅಂಗವೈಫಲ್ಯತೆಯಾದಲ್ಲಿ ವೇದಿಕೆಯಿಂದ ಸಹಾಯಧನ ಕಲ್ಪಿಸುವ ಗುರಿಹೊಂದಿದೆ. ಚಾಲಕರ ಕುಟುಂಬಕ್ಕೆ ಪ್ರತಿಭಾ ಪುರಸ್ಕಾರ, ರಕ್ತದಾನ ಶಿಬಿರ ಆಯೋಜಿಸಿ ಚಾಲ ಕರ ಶ್ರೇಯೋಭಿವೃದ್ದಿಗೆ ಕೆಲಸ ಮಾಡಲಾಗುವುದು ಎಂದರು.

ಪ್ರಸ್ತುತ ರಾಜ್ಯದಲ್ಲಿ 270ಕ್ಕೂ ಹೆಚ್ಚು ಸದಸ್ಯರು ನೋಂದಣಿಯಾಗಿದೆ. ಈ ಪೈಕಿ ಜಿಲ್ಲೆಯಲ್ಲಿ 110 ಚಾಲ ಕರು ವೇದಿಕೆಯಲ್ಲಿ ಸದಸ್ಯತ್ವ ಹೊಂದಿದ್ದಾರೆ. ಜಿಲ್ಲೆಯಿಂದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆದಿದ್ದು ಮು ಮುಂದೆ ಮಂಡ್ಯ, ಶಿವಮೊಗ್ಗ ಜಿಲ್ಲೆಗಳಲ್ಲಿ ಸಂಘಟನೆ ಪದಾಧಿಕಾರಿಗಳನ್ನು ನೇಮಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಆರ್‌ಟಿಓ ಅಧಿಕಾರಿ ನರಸೇಗೌಡ, ಚಂದ್ರಕಲಾ, ವೇದಿಕೆ ರಾಜ್ಯ ಗೌರವಾಧ್ಯಕ್ಷ ರಾಜು, ಉಪಾಧ್ಯಕ್ಷ ಸಂಗಪ್ಪ ಬಾಗಲಕೋಟೆ, ಪ್ರಧಾನ ಕಾರ್ಯದರ್ಶಿ ಇ.ಗಿರೀಶ್, ಜಂಟಿ ಕಾರ್ಯದರ್ಶಿ ರಾಜ್‌ಕುಮಾರ್, ಖಜಾಂಚಿ ನಾಗರಾಜು, ಸಂಘಟನಾ ಕಾರ್ಯದರ್ಶಿ ಯೋಗೇಶ್, ಸಹ ಸಂಘಟನಾ ಕಾರ್ಯದರ್ಶಿ ರಾಜು ಹಾಗೂ ಚಾಲಕರು ಉಪಸ್ಥಿತರಿದ್ದರು.

## ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಸೌಲಭ್ಯ

**ಚಿಕ್ಕಮಗಳೂರು:** ಹಿಂದುಳಿದ ವರ್ಗಗಳ ಪ್ರವರ್ಗ–2ಎ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಫಲಾನುಭವಿಗಳಿಗೆ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಸೇವಾ ಸಿಂಧು ತಂತ್ರಾಂಶ (http://sevasindhu.karnataka.gov.in)ದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಅರ್ಹರು ಸೇವಾ ಸಿಂಧು ಪೋರ್ಟಲ್ ಆನ್‌ಲೈನ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 2ರೊಳಗೆ ಅರ್ಜಿ ಸಲ್ಲಿಸಬಹುದು.

# ಸಮಾಜದ ಬಂಧುಗಳು ಮೊದಲು ಶಿಕ್ಷಣಕ್ಕೆ ಆದ್ಯತೆ ನೀಡಿ : ಮಹೇಶ್

\ **ಚಿಕ್ಕಮಗಳೂರು:** ಆರ್ಥಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಸವಿತಾ ಸಮಾಜದ ಬಂಧುಗಳು ಪ್ರಗತಿ ಸಾಧಿಸಲು ಮೊಟ್ಟಮೊದಲು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎ.ಎನ್. ಮಹೇಶ್ ಹೇಳಿದರು.

ನಗರದ ನೆಹರು ರಸ್ತೆ ಸಮೀಪ ಶ್ರೀರಾಮ ಮಂದಿರದ ಸಭಾಂಗಣದಲ್ಲಿ ಶ್ರೀ ಸವಿತಾ ಸಮಾಜ ಟ್ರಸ್ಟ್ ಹಮ್ಮಿಕೊಂಡಿದ್ದ ಉಚಿತ ಪ್ರತಿಭಾ ಪುರಸ್ಕಾರ, ಲೇಖನ ಸಾಮಾಗ್ರಿ, ನೋಟ್‌ಬುಕ್ ವಿತರಣೆ ಹಾಗೂ ಸಮಾಜಕ್ಕೆ ಆರ್ಥಿಕ ದೇಣಿಗೆ ನೀಡಿ ಅವರು ಮಾತನಾಡಿದರು.

ಇತ್ತೀಚೆಗೆ ಸಮಾಜದ ಹಲವಾರು ಮಂದಿ ಸರ್ಕಾರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲು ಅಂಬೇಡ್ಕರ್ ನೀಡಿದಂಥ ಶಿಕ್ಷಣವೇ ಮೂಲಕಾರಣ. ಇನ್ನೂ ಕೆಲವೆಡೆ ಸಮಾಜವು ಬಲಿಷ್ಟಗೊಳ್ಳುವ ಅಗತ್ಯವಿರುವ ಹಿನ್ನೆಲೆಯಲ್ಲಿ ವಿದ್ಯೆ ಎಂಬ ಹಸಿವನ್ನು ಬೆಳೆಸಿಕೊಂಡು, ಕಲಿಕೆಯೆಂಬ ಆಹಾರವನ್ನು ಸೇವಿಸಿ ಸದೃಢರಾಗಬೇಕು ಎಂದು ಕಿವಿಮಾತು ಹೇಳಿದರು.

ಸಮಾಜದ ಬಂಧುಗಳು ಅಪ್ಪ ಹಾಕಿದ ಆಲದ ಮರಕ್ಕೆ ಜೋತುಬೀಳದೇ ಐಎಎಸ್, ಐಪಿಎಸ್ ಅಥವಾ ಉನ್ನತ ಸರ್ಕಾರಿ ಸ್ಥಾನಗಳನ್ನು ಅಲಂಕರಿಸಿದರೆ ಸಮಾಜದ ಅಭಿವೃದ್ಧಿಗೂ ಶ್ರಮಿಸಬಹುದು. ಸಮಾಜದ ಕೆಲವರು ಆರ್ಥಿಕ ಸದೃಢರಾದವರು ಟ್ರಸ್ಟ್‌ಗೆ ಸಹಾಯಧನ ಒದಗಿಸಿದರೆ ಜನಾಂಗವು ಅಭಿವೃದ್ಧಿ



ಹೊಂದಲು ಸಾಧ್ಯ ಎಂದರು.

ಪ್ರತಿಭಾ ಪುರಸ್ಕಾರ ಪಡೆದುಕೊಂಡ ವಿದ್ಯಾರ್ಥಿಗಳು ಮುಂದಿನ ಸಾಲಿನಲ್ಲೂ ಪುರಸ್ಕಾರ ಗಳಿಸುವಷ್ಟು ವಿದ್ಯಾಕ್ಷೇತ್ರದಲ್ಲಿ ಸಾಧನೆ ಮಾಡಿದರೆ ಈ ಕಾರ್ಯಕ್ರಮಕ್ಕೆ ನೈತಿಕವಾಗಿ ಅರ್ಥ ಬರಲಿದೆ. ಸಮಾಜದಲ್ಲಿ ಶಿಕ್ಷಣವೇ ದೊಡ್ಡ ಆಸ್ತಿ. ಕಲಿತಷ್ಟು ಮುಗಿಲೆತ್ತರಕ್ಕೆ ಬೆಳೆಯಲು ಸಾಧ್ಯ. ಹೀಗಾಗಿ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ಮಾಡಿದರು.

ಸವಿತಾ ಬಂಧುಗಳು ಮಕ್ಕಳ ಆಸಕ್ತಿ ಹೊಂದಿರುವ ಕ್ಷೇತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಅಲ್ಲದೇ ಮೊಬೈಲ್ ಚಟಕ್ಕೆ ಬಲಿಯಾಗಿರುವ ಮಕ್ಕಳನ್ನು ಸರಿದಾರಿಗೆ ತರಬೇಕು. ಪಠ್ಯದ ಜೊತೆಗೆ ಕ್ರೀಡಾಸಕ್ತಿಯ ಅರಿವನ್ನು ಮೂಡಿಸಿದರೆ ದುಶ್ಚಟಕ್ಕೆ ಬಲಿಯಾಗದೇ ಉತ್ತಮ ನಾಗರೀಕರಾಗಲು ಸಾಧ್ಯ ಎಂದರು.

ಪತ್ರಕರ್ತ ಎಂ.ಎಸ್.ಉಮೇಶ್‌ಕುಮಾರ್ ಮಾತನಾಡಿ, ಸಮಾಜದಲ್ಲಿ ಕೆಲವೆಡೆ ಹಿಂದುಳಿದ ವರ್ಗವನ್ನು ಜಾತಿ ವ್ಯವಸ್ಥೆಯಡಿ ಕೀಳಾಗಿ ಕಾಣುವ ಮೂಲಕ ಅವಮಾನಿಸಲಾಗುತ್ತಿದೆ. ಇದನ್ನು ಮೆಟ್ಟಿನಿಲ್ಲಲು ಶಿಕ್ಷಣ ಎಂಬ ಅಸ್ತ್ರವನ್ನು ಸಂಪೂರ್ಣವಾಗಿ ಕರಗತ ಮಾಡಿಕೊಂಡರೆ ಅವಮಾನಿಸುವವರ ಎದುರು ಸದೃಢವಾಗಿ ನಿಲ್ಲಬಹುದು ಎಂದು ತಿಳಿಸಿದರು.

ಸವಿತಾ ಸಮಾಜ ಟ್ರಸ್ಟ್ ಅಧ್ಯಕ್ಷ ಸಿ.ವೆಂಕಟೇಶ್ ಮಾತನಾಡಿ, ಜನಾಂಗದ ಅಭಿವೃದ್ದಿ, ಭವನದ ಕಟ್ಟಡ ನಿರ್ಮಾಣಕ್ಕೆ ಎ.ಎನ್. ಮಹೇಶ್‌ರವರು ಸರ್ಕಾರದಿಂದ ಸವಲತ್ತು, ಆರ್ಥಿಕ ಸಹಾಯವನ್ನು ನೀಡಿ ಪ್ರೋತ್ಸಾಹಿಸಿರುವ ಕಾರಣ ಹಂತಹಂತವಾಗಿ ಜನಾಂಗ ಮುನ್ನಡೆ ಸಾಧಿಸುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಶ್ರೀ ಸವಿತಾ ಸಮಾಜ ಟ್ರಸ್ಟ್‌ಗೆ ಜಿ.ಪಂ. ಮಾಜಿ ಅಧ್ಯಕ್ಷ ಎ.ಎನ್.ಮಹೇಶ್ 1 ಲಕ್ಷ ಹಾಗೂ ಉಮೇಶ್‌ಕುಮಾರ್ 25 ಸಾವಿರ ದೇಣಿಗೆ ನೀಡಿ–ದರು. ಬಳಿಕ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು. 1 ರಿಂದ 10ನೇ ತರಗತಿಯ ಜನಾಂಗದ ಮಕ್ಕಳಿಗೆ ನೋಟ್‌ಪುಸ್ತಕ, ಲೇಖನಿ ನೀಡಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಶ್ರೀಧರ್‌ಮೋಹನ್, ಸಹ ಕಾರ್ಯದರ್ಶಿ ಕಾಂತ ರಾಜ್, ಸವಿತಾ ಸಮಾಜದ ಅಧ್ಯಕ್ಷ ಸಿ.ಎಂ.ಯೋಗೀಶ್, ಸಮಾಜದ ಮುಖಂಡರುಗಳಾದ ಎನ್.ಗಿರೀಶ್, ಹರೀಶ್, ಎನ್. ಶ್ರೀಧರ್ ಮತ್ತಿತರರು ಉಪಸ್ಥಿತರಿದ್ದರು.

## ಹಿರಿಯೂರು : ಡಿಪ್ಲೋಮಾ ಪ್ರವೇಶಾತಿ ಪ್ರಾರಂಭ

**ಚಿತ್ರದುರ್ಗ:** ಪ್ರಸಕ್ತ ಶೈಕ್ಷಣಿಕ ಸಾಲಿಗೆ ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಸೀಟುಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಹಿಂದೆ ಆನ್‌ಲೈನ್ ಮೂಲಕ ಸೀಟು ಹಂಚಿಕೆಯಾಗಿ ನಂತರ ಭರ್ತಿಯಾಗದೇ ಉಳಿದಿರುವ ಸೀಟುಗಳನ್ನು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರ ಸಮ್ಮುಖದಲ್ಲಿ ಆಫ್‌ಲೈನ್ ಮೂಲಕ ಅಭ್ಯರ್ಥಿಗಳಿಗೆ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ.

ಪಾಲಿಟೆಕ್ನಿಕ್‌ನಲ್ಲಿ ಡಿಪ್ಲೋಮಾ ಪ್ರವೇಶ ಬಯಸುವ ಆಸಕ್ತ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಮೂಲ ಅಂಕಪಟ್ಟಿ, ಮೂಲ ವರ್ಗಾವಣೆ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ವ್ಯಾಸಂಗ, ಗ್ರಾಮೀಣ ಮಾಧ್ಯಮ ಪ್ರಮಾಣ ಪತ್ರ ಹಾಗೂ ವ್ಯಾಸಂಗ ಪ್ರಮಾಣ ಪತ್ರಗಳ ಜೊತೆಗೆ, ಅಭ್ಯರ್ಥಿಯು ನೇರವಾಗಿ ಕಾಲೇಜಿಗೆ ಖುದ್ದು ಹಾಜರಾಗಿ ಪ್ರವೇಶಾತಿ ಪಡೆಯಬೇಕು. ಅರ್ಜಿ ಸಲ್ಲಿಕೆಗೆ ಜೂನ್ 30 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 9900337587 ಅಥವಾ 9482787542 ಕ್ಕೆ ಸಂಪರ್ಕಿಸಬೇಕೆಂದು ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದಿರಾ ಕ್ಯಾಂಟಿನ್‌ನಲ್ಲಿ ರುಚಿ ಸವಿದ ಪೌರಾಡಳಿತ ಸಚಿವ ರಹೀಂಖಾನ್

# ಹಸಿದವರು, ವಿದ್ಯಾರ್ಥಿಗಳು ಹಾಗೂ ದುಡಿಯುವ ಶ್ರಮಿಕ ವರ್ಗದವರಿಗೆ ಹಸಿವು ನೀಗಿಸಲು ಇಂದಿರಾ ಕ್ಯಾಂಟಿನ್ ಸಹಕಾರಿ

**ದಾವಣಗೆರೆ :** ಸರ್ಕಾರವು ಹಸಿವು ಮುಕ್ತ ಕರ್ನಾಟಕವನ್ನು ನಿರ್ಮಿಸುವ ಆಶಯದೊಂದಿಗೆ ರಾಜ್ಯಾದ್ಯಂತ ಇಂದಿರಾ ಕ್ಯಾಂಟಿನ್‌ಗಳನ್ನು ಪ್ರಾರಂಭಿಸಿದೆ. ಕಡಿಮೆ ದರದಲ್ಲಿ ನಗರ, ಗ್ರಾಮೀಣ ಪ್ರದೇಶದ ಬಡವರು, ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು, ದಿನಗೂಲಿ ನೌಕರರು ಮತ್ತು ಕಡಿಮೆ ಆದಾಯದವರಿಗೆ ಅತಿ ಕಡಿಮೆ ಬೆಲೆಯಲ್ಲಿ ಗುಣಮಟ್ಟದ ಉಪಹಾರ, ಊಟ ಮತ್ತು ರಾತ್ರಿ ಊಟವನ್ನು ಒದಗಿಸುತ್ತಿರುವ ಇಂದಿರಾ ಕ್ಯಾಂಟಿನ್ ಹಸಿದವರ ಪಾಲಿಗೆ ಅನ್ನದಾತ ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಹೇಳಿದರು.

ಅವರು ಬುಧವಾರ ದಾವಣೆಗರೆ ನಗರದಲ್ಲಿನ ಹೈಸ್ಕೂಲ್ ಮೈದಾನದಲ್ಲಿನ ಇಂದಿರಾ ಕ್ಯಾಂಟಿನ್‌ಗೆ ಭೇಟಿ ನೀಡಿ ಇಲ್ಲಿನ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿ ಊಟ ಮಾಡುತ್ತಿದ್ದವರ ತಟ್ಟೆಯಿಂದಲೇ ಚಪಾತಿ, ಪಲ್ಯ, ಅನ್ನಸಾಂಬಾರ್ ಸವಿಯುವ ಮೂಲಕ ಗುಣಮಟ್ಟದ ಪರೀಕ್ಷೆ ನಡೆಸಿದರು. ಈ ವೇಳೆ ಕ್ಯಾಂಟಿನ್‌ಗೆ ಆಗಮಿಸಿದ್ದ ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು, ಪ್ಯಾರಾಮೆಡಿಕಲ್



ಕೋರ್ಸ್ ಮಾಡುತ್ತಿರುವ ವಿದ್ಯಾರ್ಥಿನಿಯರು ಮತ್ತು ರೈತರು, ಕಾರ್ಮಿಕರೊಂದಿಗೆ ಸಂವಾದ ನಡೆಸಿ ಮಾತನಾಡಿದರು.

ಹಸಿವು ಮುಕ್ತ ಕರ್ನಾಟಕ ಮಾಡಬೇಕೆಂಬ ಆಶಯದೊಂದಿಗೆ ಮುಖ್ಯಮಂತ್ರಿಗಳ ಮಹತ್ವಾಕಾಂಕ್ಷೆ ಕನಸಿನ ಯೋಜನೆಗಳಲ್ಲಿ ಒಂದಾದ ಇಂದಿರಾ ಕ್ಯಾಂಟಿನ್ ಆರಂಭಿಸಲಾಯಿತು. ಇಲ್ಲಿ ಬೆಳಗಿನ ಉಪಹಾರ ರೂ.5 ಕ್ಕೆ, ಮಧ್ಯಾಹ್ನ ಮತ್ತು ರಾತ್ರಿ ಊಟ ರೂ. 10ಕ್ಕೆ ನೀಡಲಾಗುತ್ತಿದೆ. ಯಾರೊಬ್ಬರೂ ಹಸಿವಿನಿಂದ ಇರಬಾರದು ಎಂಬುದು ಸರ್ಕಾರದ ಪ್ರಮುಖ ಆಶಯವಾಗಿದೆ. ಆದ್ದರಿಂದ ಬಡವರಿಗೆ ದಿನದಲ್ಲಿ ಮೂರು ಹೊತ್ತು ಕಡಿಮೆ ದರದಲ್ಲಿ ಲಭ್ಯವಿರುವ ಪೌಷ್ಟಿಕಾಂಶದಿಂದ ಕೂಡಿದ ಆಹಾರವನ್ನು ಒದಗಿಸಲಾಗುತ್ತದೆ ಎಂದರು.

ಹಾಗೆಯೇ ಅಲ್ಲಿನ ಸಿಬ್ಬಂದಿಯ ಬಳಿ ಪ್ರತಿದಿನ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿಯ ಊಟ–ಕ್ಕೆ ಖರ್ಚಾಗುವ ಪ್ರಮಾಣ ಇನ್ನಿತರೆ ಮೂಲಭೂತ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು. ಉತ್ತಮ ಗುಣಮಟ್ಟ ಹಾಗೂ ಶುಚಿ ರುಚಿಯಾದ ಆಹಾರ ಒದಗಿಸುವಂತೆ ತಾಕೀತು ಮಾಡಿದರು. ಪ್ರಸ್ತುತ ರಾಜ್ಯಾದ್ಯಂತ 196 ಕ್ಯಾಂಟಿನ್ ಕಾರ್ಯನಿರ್ವಹಿಸುತ್ತಿದ್ದು, ಬಿಬಿಎಂಪಿ, ನಗರಸಭೆ, ಪುರಸಭೆ ವ್ಯಾಪ್ತಿಯಲ್ಲಿ ಹೆಚ್ಚುವರಿಯಾಗಿ 186 ಕ್ಯಾಂಟಿನ್ ತೆರೆಯಲಾಗುತ್ತಿದೆ ಎಂದು ಮಾಹಿತಿ ನೀಡಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**